ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೨೪

# ಪಟ್ಟಿ – ೦೭

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೆಂಟನೇಯ ಮುಂದುವರೆದ ಅಧಿವೇಶನ**

**ಬುಧವಾರ, ದಿನಾಂಕ : ೧೧ನೇ ಮಾರ್ಚ್, ೨೦೨೬**

---

## ಸಮೂಹ – III

೧. ಸಾರಿಗೆ ಮತ್ತು ಮುಜರಾಯಿ ಸಚಿವರು

೨. ಲೋಕೋಪಯೋಗಿ ಸಚಿವರು

೩. ಕಂದಾಯ ಸಚಿವರು

೪. ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

೫. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು

೬. ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

---

## ಚಾರ್ಮುಡಿ ಘಾಟ್ ರಸ್ತೆಯಲ್ಲಿ ಸರಣಿ ಅಪಘಾತಗಳಾಗುತ್ತಿರುವ ಬಗ್ಗೆ

**ಡಾ॥ ಆರತಿ ಕೃಷ್ಣ (ನಾಮನಿರ್ದೇಶನ ಹೊಂದಿದವರು) :–**

೭೫೨ (೮೫೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು–ದಕ್ಷಿಣ ಕನ್ನಡ ಸಂಪರ್ಕಿಸುವ ಚಾರ್ಮುಡಿ ಘಾಟ್ ರಸ್ತೆಯಲ್ಲಿ ಸರಣಿ ಲಾರಿ ಅಪಘಾತಗಳು (ಗ್ಯಾಸ್ ಲಾರಿಗಳು ಚಾಲಕನ ನಿಯಂತ್ರಣ ತಪ್ಪಿ ತಿರುವಿನಲ್ಲಿ ಪಲ್ಟಿಯಾಗುವುದು ಸೇರಿ) ಸಂಭವಿಸುತ್ತಿದ್ದು, ರಾಷ್ಟ್ರೀಯ ಹೆದ್ದಾರಿ ೧೭೫ರಲ್ಲಿ ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡು, ಹಲವು ಬಾರಿ ಕಿಲೋಮೀಟರ್‌ಗಟ್ಟಲೆ ಸಂಚಾರ ಸ್ಥಗಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರಸ್ತೆಯಲ್ಲಿನ ಅಪಘಾತಗಳು ಹಾಗೂ ಸಂಚಾರಿ ಸಮಸ್ಯೆಯನ್ನು ಶಾಶ್ವತ ಹಾಗೂ ವೈಜ್ಞಾನಿಕವಾಗಿ ಸಾರ್ವಜನಿಕ ಹಿತದೃಷ್ಟಿಯಿಂದ ಪರಿಹರಿಸಲು ಸರ್ಕಾರ ಯಾವ ಕ್ರಮಕೈಗೊಳ್ಳುತ್ತಿದೆ ? (ವಿವರಗಳನ್ನು ನೀಡುವುದು)

## ಸಾರಿಗೆ ಇಲಾಖೆಯಡಿ ಬರುವ ರಸ್ತೆ ಸುರಕ್ಷತೆ ಮತ್ತು ಅಪಘಾತ ನಿಯಂತ್ರಣ ಜಾಗೃತಿ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೩ (೯೩೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಸಂಭವಿಸಿದ ರಸ್ತೆ ಅಪಘಾತಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಸಾವು–ಗಾಯಗಳಾದವರ ಸಂಖ್ಯೆ ಎಷ್ಟು ;

(ಆ) ಅಪಘಾತ ಹೆಚ್ಚು ಸಂಭವಿಸುವ "ಬ್ಲಾಕ್ ಸ್ಪಾಟ್" ಗಳನ್ನು ಗುರುತಿಸಲಾಗಿದೆಯೇ ; ಇದ್ದಲ್ಲಿ, ಸದರಿ ಜಾಗಗಳಲ್ಲಿ ಅಪಘಾತ ಸಂಭವಿಸದಂತೆ ಜಾಗೃತಿ ವಹಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು ;

(ಇ) ಶಾಲಾ ವಾಹನಗಳ ಸುರಕ್ಷತಾ ನಿಯಮ ಪಾಲನೆ, ಪರಿಶೀಲನೆ ಕಾರ್ಯ ಹೇಗೆ ನಡೆಯುತ್ತಿದೆ ;

(ಈ) ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರ ನಿಯಂತ್ರಣಕ್ಕೆ ಸರ್ಕಾರ ಯಾವ ಯಾವ ವಿಶೇಷ ಅಭಿಯಾನಗಳನ್ನು ಹಮ್ಮಿಕೊಂಡಿದೆ ?

## ಕಂದಾಯ ಇಲಾಖೆಯಡಿ ಭೂ–ಸುಧಾರಣೆ ಮತ್ತು ವಿತರಣೆಗಳು ಹಾಗೂ ಸಿಬ್ಬಂದಿಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೪ (೯೩೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಡ ಕುಟುಂಬಗಳಿಗೆ ಮನೆ, ಜಾಗ ವಿತರಣೆ ಕುರಿತು ಸರ್ಕಾರದ ಪ್ರಸ್ತುತ ಯೋಜನೆಗಳು ಯಾವುವು ;

(ಆ) ಅನಧಿಕೃತವಾಗಿ ವಾಸಿಸುತ್ತಿರುವ ಕುಟುಂಬಗಳಿಗೆ ಹಕ್ಕುಪತ್ರ ನೀಡುವ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ತಾಲ್ಲೂಕು ಕಛೇರಿಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು/ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ನಾಡಕಛೇರಿಗಳ ಸೇವೆಗಳನ್ನು ಸುಧಾರಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು ?

## ಮೀನುಗಾರಿಕೆ ಇಲಾಖೆಯಡಿ ಯೋಜನೆಗಳು ಮತ್ತು ಅನುದಾನದ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೫ (೯೪೦) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಮೀನುಗಾರಿಕೆ ಅಭಿವೃದ್ಧಿಗಾಗಿ ಯಾವ ಯಾವ ಯೋಜನೆಗಳನ್ನು ಜಾರಿಗೆ ತರಲಾಗಿದೆ ;

(ಆ) ಕಳೆದ ಮೂರು ವರ್ಷಗಳಲ್ಲಿ ಮೀನುಗಾರಿಕೆ ಇಲಾಖೆಗೆ ಎಷ್ಟು ಅನುದಾನ ಮಂಜೂರಾಗಿದೆ ; ಅದರ ಬಳಕೆ ಪ್ರಮಾಣ ಎಷ್ಟು ;

(ಇ) ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಅನುದಾನ ಮಂಜೂರು ಮಾಡಲಾಗಿದೆ ; (ಯೋಜನೆವಾರು ಮಾಹಿತಿ ಒದಗಿಸುವುದು)

(ಈ) ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ರಾಜ್ಯಕ್ಕೆ ಎಷ್ಟು ನಿಧಿ ಬಂದಿದೆ ?

## ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದ ಅನುದಾನ ಮತ್ತು ವೆಚ್ಚ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೬ (೯೪೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಗೆ ಬಿಡುಗಡೆಯಾದ ಅನುದಾನ ಎಷ್ಟು ;

(ಆ) ಸದರಿ ಅನುದಾನವನ್ನು ಯಾವ ಯಾವ ಯೋಜನೆಗಳಿಗಾಗಿ ಎಷ್ಟೆಷ್ಟು ಅನುದಾನ ಖರ್ಚು ಮಾಡಲಾಗಿದೆ ; ಬಾಕಿ ಉಳಿದ ಅನುದಾನ ಎಷ್ಟು ; (ಯೋಜನಾವಾರು ಮಾಹಿತಿ ಒದಗಿಸುವುದು)

(ಇ) ಟೆಂಡರ್ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಖಾತ್ರಿಪಡಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ?

## ವಿವಿಧ ವಸತಿ ಯೋಜನೆ ಅಡಿಯಲ್ಲಿ ಮನೆಗಳ ನಿರ್ಮಾಣದ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೭ (೯೩೫) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ವಸತಿ ಯೋಜನೆ ಕಾರ್ಯಕ್ರಮಗಳು ಜಾರಿಯಲ್ಲಿವೆ ಹಾಗೂ ರಾಜ್ಯದಲ್ಲಿ ಸೂರಿಲ್ಲದೆ ಇರುವವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ವಿವಿಧ ವಸತಿ ಯೋಜನೆ ಅಡಿ ಮಂಜೂರಾತಿ ನೀಡಿರುವ ಮನೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು) ಹಾಗೂ ವಿತರಿಸಲ್ಪಟ್ಟ ಮನೆಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು, ಫಲಾನುಭವಿಗಳ ಮಾಹಿತಿ ನೀಡುವುದು)

## ಕ.ರಾ.ರ.ಸಾ.ಸಂಸ್ಥೆಯಲ್ಲಿ ಅವಧಿ ಮೀರಿರುವ ವಾಹನಗಳು ಸಂಚರಿಸುತ್ತಿರುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೮ (೯೩೬) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಅವಧಿ ಮೀರಿರುವ ವಾಹನಗಳ ಸಂಖ್ಯೆ ಎಷ್ಟು ಹಾಗೂ ಸಾರಿಗೆಗೆ ಯೋಗ್ಯವಲ್ಲದ ವಾಹನಗಳು ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅವಧಿ ಮೀರಿರುವ ವಾಹನಗಳನ್ನು ಬದಲಾಯಿಸಲು ಹಾಗೂ ಹೊಸ ಮಾರ್ಗಗಳಿಗೆ ಬಸ್ಸುಗಳನ್ನು ವ್ಯವಸ್ಥೆ ಮಾಡಲು ಬೇಕಾಗಿರುವ ಒಟ್ಟು ವಾಹನಗಳ ಸಂಖ್ಯೆ ಎಷ್ಟು ;

(ಇ) ವೋಲ್ವೋ ವಾಹನಗಳ (ಬಸ್) ಸಂಚಾರಕ್ಕೆ ಯೋಗ್ಯವಾಗಿರಲು ಎಷ್ಟು ಕಿಲೋಮೀಟರ್‌ಗಳನ್ನು ನಿಗದಿಪಡಿಸಿದೆ ಹಾಗೂ ಅವಧಿ ಮೀರಿ ಸಂಚರಿಸುತ್ತಿರುವ ವೋಲ್ವೋ ವಾಹನಗಳ ಸಂಖ್ಯೆ ಎಷ್ಟು ?

## ವಕ್ಫ್ ಮಂಡಳಿಯಿಂದ ಕಾಲೇಜು ನಿರ್ಮಾಣದ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೯ (೯೮೫) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಿಂದ ಮಹಿಳಾ ಕಾಲೇಜುಗಳನ್ನು ನಿರ್ಮಿಸುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಎಷ್ಟು ಮಹಿಳಾ ಕಾಲೇಜುಗಳನ್ನು ನಿರ್ಮಿಸಲಾಗಿದೆ ;

(ಆ) ಸದರಿ ಮಹಿಳಾ ಕಾಲೇಜುಗಳನ್ನು ಯಾವ ಜಿಲ್ಲೆಗಳಲ್ಲಿ ನಿರ್ಮಿಸಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಸದರಿ ಮಹಿಳಾ ಕಾಲೇಜುಗಳ ನಿರ್ಮಾಣಕ್ಕೆ ಎಷ್ಟು ಅನುದಾನವನ್ನು ಒದಗಿಸಲಾಗಿದೆ ;

(ಈ) ಕಾಮಗಾರಿ ಮುಕ್ತಾಯಗೊಂಡಿರುವ ಮಹಿಳಾ ಕಾಲೇಜುಗಳು ಎಷ್ಟು; ನಿರ್ಮಾಣ ಹಂತದಲ್ಲಿರುವ ಮಹಿಳಾ ಕಾಲೇಜುಗಳು ಎಷ್ಟು ; ಕಾಮಗಾರಿ ಪ್ರಾರಂಭವಾಗಬೇಕಾದ ಮಹಿಳಾ ಕಾಲೇಜುಗಳು ಎಷ್ಟು ?

## ಇನಾಂ ಭೂಮಿ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೦ (೯೮೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇನಾಂ ಭೂಮಿ ಮಂಜೂರು ಮಾಡುವಂತೆ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಎಷ್ಟು ಅರ್ಜಿಗಳು ಬಾಕಿ ಇದೆ ; ಎಷ್ಟು ಅರ್ಜಿದಾರರಿಗೆ ಭೂಮಿ ಮಂಜೂರಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇನಾಂ ಭೂಮಿ ಮಂಜೂರು ಮಾಡಲು ಸರ್ಕಾರದಿಂದ ನಿಗದಿಪಡಿಸಿರುವ ಮಾನದಂಡಗಳೇನು ;

(ಇ) ಶಿವಮೊಗ್ಗ ಜಿಲ್ಲೆಯಲ್ಲಿ ಇನಾಂ ಭೂಮಿ ಮಂಜೂರು ಮಾಡಲು ಕೋರಿ ಸಲ್ಲಿಕೆಯಾದ ಅರ್ಜಿಗಳು ಎಷ್ಟು ; ಎಷ್ಟು ಅರ್ಜಿದಾರರಿಗೆ ಭೂಮಿ ಮಂಜೂರು ಮಾಡಲಾಗಿದೆ ;

(ಈ) ಈ ಅರ್ಜಿಗಳನ್ನು ಪರಿಶೀಲಿಸಿ ಮಂಜೂರು/ತಿರಸ್ಕರಿಸಲು ಯಾರಿಗೆ ಅಧಿಕಾರ ನೀಡಲಾಗಿದೆ ?

## ರೇಷ್ಮೆ ಇಲಾಖೆಯ ಸಿಬ್ಬಂದಿ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೧ (೯೮೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೇಷ್ಮೆ ಇಲಾಖೆಯಲ್ಲಿ ಸಿಬ್ಬಂದಿ ಕೊರತೆಯಿಂದಾಗಿ ರೇಷ್ಮೆ ಬೆಳೆಗಾರರಿಗೆ ಇಲಾಖೆಯಿಂದ ಸಿಗಬೇಕಾದ ಸೌಲಭ್ಯ ಹಾಗೂ ನೆರವುಗಳು ಸಕಾಲದಲ್ಲಿ ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇಲಾಖೆಗೆ ಮಂಜೂರಾಗಿರುವ, ಭರ್ತಿಯಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಲು ಸರ್ಕಾರ ಕ್ರಮವಹಿಸಿದೆಯೇ ಹಾಗೂ ಯಾವ ಕಾಲಮಿತಿಯೊಳಗೆ ಸದರಿ ಎಲ್ಲಾ ಖಾಲಿ ಇರುವ ಹುದ್ದೆಗಳಿಗೆ ಪೂರ್ಣ ಪ್ರಮಾಣದಲ್ಲಿ ಸಿಬ್ಬಂದಿಗಳನ್ನು ನೇಮಕ ಮಾಡಲಾಗುವುದು ?

## ಸಿಂಧನೂರು ತಾಲ್ಲೂಕಿನಲ್ಲಿ ನೂತನ RTO ಕಛೇರಿಯನ್ನು ತೆರೆಯುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೨ (೯೫೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕು ರಾಯಚೂರು ಜಿಲ್ಲೆಯಲ್ಲೇ ಸಾರಿಗೆ ಇಲಾಖೆಯ ೨ನೇ ಅತೀ ದೊಡ್ಡ ರಾಜಸ್ವ ಸಂಗ್ರಹಣೆ ಪಾಲನ್ನು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಿಂಧನೂರು ತಾಲ್ಲೂಕಿನಲ್ಲಿ ಆರ್.ಟಿ.ಓ ಕಛೇರಿಯನ್ನು ತೆರೆಯುವ ಪ್ರಸ್ತಾವನೆ ಸರ್ಕಾರಕ್ಕೆ ಸಲ್ಲಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿನಲ್ಲಿ ಆರ್.ಟಿ.ಓ. ಕಛೇರಿಯನ್ನು ಸ್ಥಾಪಿಸಲಾಗುವುದು ?

## ಸಿಂಧನೂರು ತಾಲ್ಲೂಕಿಗೆ ೨೦೨೫–೨೬ನೇ ಸಾಲಿನಲ್ಲಿ ಸ್ಲಮ್ ಬೋರ್ಡ್ ವತಿಯಿಂದ ಮನೆಗಳನ್ನು ಮಂಜೂರು ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೩ (೯೫೯) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫––೨೬ನೇ ಸಾಲಿನಲ್ಲಿ ಸಿಂಧನೂರು ತಾಲ್ಲೂಕಿಗೆ ಸ್ಲಮ್ ಬೋರ್ಡ್‌ನಿಂದ ಎಷ್ಟು ಮನೆಗಳು ಮಂಜೂರಾಗಿವೆ ; ಮಂಜೂರಾಗಿರುವ ಫಲಾನುಭವಿಗಳ ವಿವರವನ್ನು ನೀಡುವುದು ;

(ಆ) ಪ್ರತಿ ಮನೆ ನಿರ್ಮಾಣಕ್ಕೆ ಸರ್ಕಾರದಿಂದ ನೀಡಲಾಗುತ್ತಿರುವ ಹಣವೆಷ್ಟು ? (ಜಾತಿವಾರು ವಿವರ ನೀಡುವುದು)

## ಸಿಂಧನೂರು ತಾಲ್ಲೂಕಿನ ಪಶು ಚಿಕಿತ್ಸಾಲಯಗಳಿಂದ ಪಶುಗಳಿಗೆ ಚಿಕಿತ್ಸೆ ನೀಡಿರುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೪ (೯೬೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿ ಒಟ್ಟು ಎಷ್ಟು ಪಶು ಚಿಕಿತ್ಸಾಲಯಗಳು ಕಾರ್ಯನಿರ್ವಹಿಸುತ್ತಿವೆ ;

(ಆ) ಸದರಿ ಚಿಕಿತ್ಸಾಲಯಗಳಿಂದ ೨೦೨೫–೨೬ನೇ ಸಾಲಿನಲ್ಲಿ ಒಟ್ಟು ಎಷ್ಟು ಪಶುಗಳಿಗೆ ಈವರೆಗೆ ಚಿಕಿತ್ಸೆ ನೀಡಲಾಗಿದೆ ;

(ಇ) ಪಶುಗಳ ಅನಾರೋಗ್ಯದ ಪ್ರಮಾಣ ಕಳೆದ ವರ್ಷಕ್ಕೆ ಹೋಲಿಸಿದರೆ ಎಷ್ಟಿದೆ ?

## ಸಿಂಧನೂರು ತಾಲ್ಲೂಕಿನ ಪ್ರಮುಖ ಮೀನುಗಾರಿಕೆ ಮೂಲಗಳು ಹಾಗೂ ಮೀನುಗಾರರನ್ನು ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೫ (೯೬೧) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿ ಪ್ರಮುಖವಾಗಿ ಮೀನುಗಾರಿಕೆ ಮಾಡುವ ಕೆರೆ/ತೊರೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಕೆರೆ/ತೊರೆಗಳಲ್ಲಿ ಮೀನುಗಾರಿಕೆ ಅಭಿವೃದ್ಧಿಗೆ ಸರ್ಕಾರದಿಂದ ಕೈಗೊಳ್ಳಲಾಗಿರುವ ಕ್ರಮಗಳೇನು ;

(ಇ) ತಾಲ್ಲೂಕಿನ ಮೀನುಗಾರರಿಗೆ ಸರ್ಕಾರದಿಂದ ನೀಡಲಾಗುವ ಪ್ರೋತ್ಸಾಹ/ಸವಲತ್ತುಗಳೇನು ?

## ವಾಹನಗಳಿಂದ ಉಂಟಾಗುತ್ತಿರುವ ಮಾಲಿನ್ಯ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೭೬೬ (೮೬೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಹಾಗೂ ವಿವಿಧ ನಗರ ಪ್ರದೇಶಗಳಲ್ಲಿ ವಾಹನಗಳಿಂದ ಉಂಟಾಗುತ್ತಿರುವ ಮಾಲಿನ್ಯ ಪ್ರಮಾಣವನ್ನು ಸರ್ಕಾರ ಯಾವ ರೀತಿಯಲ್ಲಿ ಅಧ್ಯಯನ ಮಾಡುತ್ತಿದೆ ; ಈ ಬಗ್ಗೆ ಇಲಾಖೆ ಯಾವ ರೀತಿಯಲ್ಲಿ ತನ್ನ ನೀತಿ ನಿರೂಪಣೆಗಳನ್ನು ಕಾಲಕಾಲಕ್ಕೆ ಮಾಡುತ್ತಿದೆ ; (ವಿವರ ಒದಗಿಸುವುದು)

(ಆ) ಬೆಂಗಳೂರಿನಲ್ಲಿ ವಾಹನಗಳಿಂದ ಉಂಟಾಗುತ್ತಿರುವ ಮಾಲಿನ್ಯವು ಏರುಗತಿಯಲ್ಲಿ ಸಾಗುತ್ತಿರುವುದರಿಂದ ತುರ್ತಾಗಿ ಕಾಲ ಮಿತಿಯಲ್ಲಿ ಯಾವ ಕ್ರಮಗಳನ್ನು ಅನುಸರಿಸುವ ಕುರಿತಂತೆ ಸರ್ಕಾರ ಪ್ರಯತ್ನಗಳನ್ನು ನಡೆಸಿದೆ ; (ವಿವರ ಒದಗಿಸುವುದು)

(ಇ) ಬೆಂಗಳೂರಿನಲ್ಲಿ ವಾಹನಗಳು ಉಂಟು ಮಾಡುತ್ತಿರುವ ಮಾಲಿನ್ಯವನ್ನು ತಪ್ಪಿಸಲು ನಿರ್ಧಿಷ್ಟ ಕಾಲಮಿತಿಗೆ ಒಳಪಟ್ಟಂತೆ ಸಂಪೂರ್ಣವಾಗಿ electric ವಾಹನಗಳಿಗೆ ಬದಲಾಯಿಸಿಕೊಳ್ಳಲು ಸರ್ಕಾರ ಯಾವ ರೀತಿಯ ಪ್ರಯತ್ನಗಳನ್ನು ಕೈಗೊಳ್ಳುತ್ತಿದೆ ? (ವಿವರ ಒದಗಿಸುವುದು)

## ಮೀನುಗಾರಿಕೆ ಬಂದರು, ಒಳನಾಡು ಜಲಸಾರಿಗೆ ಬಂದರು ಅನುದಾನದ ಬಗ್ಗೆ

**ಶ್ರೀ ಗಣಪತಿ ದುಮ್ಮಾ ಉಳ್ವೇಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೭ (೮೯೦) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಅಧೀನದಲ್ಲಿ ಘೋಷಣೆ ಆಗಿರುವ ಬಂದರುಗಳು ಎಷ್ಟು ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಬಂದರು ಅಭಿವೃದ್ಧಿಗೆ ಖರ್ಚು ಮಾಡಿರುವ ಅನುದಾನ ಎಷ್ಟು ; (ಬಂದರುವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ವಾಣಿಜ್ಯ ಬಂದರುಗಳಲ್ಲಿ ಹೂಳೆತ್ತಲು ಮಾಡಿರುವ ವೆಚ್ಚಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಉತ್ತರ ಕನ್ನಡ ಜಿಲ್ಲೆಯ ಬಂದರುಗಳ ಅಭಿವೃದ್ಧಿಗೆ ೫ ವರ್ಷಗಳಲ್ಲಿ ಮೀಸಲಿಟ್ಟ ಅನುದಾನ ಎಷ್ಟು ; ವೆಚ್ಚ ಮಾಡಿರುವ ಅನುದಾನ ಎಷ್ಟು ; ( ವರ್ಷವಾರು ವಿವರ ನೀಡುವುದು)

(ಉ) ರಾಜ್ಯದ ಬಂದರುಗಳ ದ್ವೀಪಗಳಲ್ಲಿ ಇರುವ ದೇವಸ್ಥಾನಗಳು ಎಷ್ಟು ;

(ಊ) ದ್ವೀಪಗಳಲ್ಲಿ ಇರುವ ದೇವಸ್ಥಾನಗಳಿಗೆ ಹೋಗಿ ಬರಲು ಉಂಟಾಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ?

## ಮೀನುಗಾರಿಕೆ ಬಂದರು, ಒಳನಾಡು ಜಲಸಾರಿಗೆ ಇಲಾಖೆ ಆಸ್ತಿ ವಿವರ ನೀಡುವ ಬಗ್ಗೆ

**ಶ್ರೀ ಗಣಪತಿ ದುಮ್ಮಾ ಉಳ್ವೇಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೮ (೮೯೧) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೀನುಗಾರಿಕೆ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯಡಿ ರಾಜ್ಯದಲ್ಲಿ ಎಷ್ಟು ಆಸ್ತಿಗಳು (ಜಮೀನು ಮತ್ತು ಕಟ್ಟಡ) ಇವೆ ; ಯಾವ ಯಾವ ಆಸ್ತಿಗಳನ್ನು ಯಾರಿಗೆ ಎಷ್ಟು ವರ್ಷಗಳ ಅವಧಿಗೆ ಬಾಡಿಗೆ/ಗುತ್ತಿಗೆಗೆ ಕೊಡಲಾಗಿದೆ ; (ಜಿಲ್ಲಾವಾರು ಮತ್ತು ಆಸ್ತಿವಾರು ವಿವರವಾದ ಮಾಹಿತಿ ನೀಡುವುದು)

(ಆ) ಇಲಾಖೆಗೆ ಸಂಬಂಧಿಸಿದ ಆಸ್ತಿಗಳ ವಿಚಾರವಾಗಿ ಯಾವುದಾದರೂ ವ್ಯಾಜ್ಯಗಳು ನಡೆಯುತ್ತಿವೆಯೇ ; ವ್ಯಾಜ್ಯಗಳು ಇದ್ದರೆ, ಯಾವ ಆಸ್ತಿ ಮತ್ತು ಯಾರೊಂದಿಗೆ ವ್ಯಾಜ್ಯ ನಡೆಯುತ್ತಿದೆ ಎಂಬುದರ ವಿವರ ನೀಡುವುದು ;

(ಇ) ಇಲಾಖೆಗೆ ಸೇರಿದ ಆಸ್ತಿಗಳನ್ನು ಖಾಸಗಿ ವ್ಯಕ್ತಿಗಳು ಕಬಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಯಾರ ಮೇಲೆ ಕ್ರಮ ಕೈಗೊಳ್ಳಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಬೆಂಗಳೂರು ನಗರ ಜಿಲ್ಲೆಗಳಲ್ಲಿನ ಕೊಳಗೇರಿಗಳ ಪುನರ್ವಸತಿ ಯೋಜನೆ ಕುರಿತು

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೯ (೯೮೧) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ 3 ವರ್ಷಗಳಲ್ಲಿ ಬೆಂಗಳೂರು ನಗರ ಜಿಲ್ಲೆಗಳಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆ–ನಗರ (ಪಿ.ಎಂ.ಎವೈ–ಯು) ಅಥವಾ ಯಾವುದೇ ಇತರ ಕೇಂದ್ರ ಪ್ರಾಯೋಜಿತ ಯೋಜನೆಯಡಿಯಲ್ಲಿ ಕೈಗೊಂಡ ಕೊಳಗೇರಿ ಪುನರ್ವಸತಿ ಯೋಜನೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಈ ಯೋಜನೆಗಳ ಅಡಿಯಲ್ಲಿ ಪುನರ್ವಸತಿ ಪಡೆದ ಒಟ್ಟು ಕೊಳಗೇರಿ ನಿವಾಸಿಗಳ ಸಂಖ್ಯೆ ಎಷ್ಟು ; ನಿರ್ಮಿಸಿದ ಮತ್ತು ಹಂಚಿಕೆ ಮಾಡಲಾದ ವಸತಿ ಘಟಕಗಳ ಸಂಖ್ಯೆ ಎಷ್ಟು ;

(ಇ) ಕೊಳಗೇರಿ ಪುನಾರಾಭಿವೃದ್ಧಿ ಯೋಜನೆಗಳಿಗೆ ಮಂಜೂರಾದ, ಬಿಡುಗಡೆ ಮಾಡಿದ ಮತ್ತು ಬಳಸಲಾದ ಕೇಂದ್ರ ನೆರವಿನ ಮೊತ್ತ ಎಷ್ಟು ? (ವಿವರ ನೀಡುವುದು)

## ರೈತರ ಹೊಲಗಳಿಗೆ ತೆರಳುವ ಮಾರ್ಗದಲ್ಲಿ ರಸ್ತೆ ನಿರ್ಮಾಣ ಮತ್ತು ಒತ್ತುವರಿ ತೆರವುಗೊಳಿಸುವ ಬಗ್ಗೆ

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೦ (೯೮೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಲವು ಗ್ರಾಮಗಳಲ್ಲಿ ರೈತರ ಹೊಲಗಳಿಗೆ ತೆರಳಲು ಇರುವ ಕಾವಲುದಾರಿ ಮತ್ತು ಬಂಡಿ ಜಾಡು ರಸ್ತೆಯನ್ನು ಕೆಲವು ಭೂ ಮಾಲೀಕರು ಒತ್ತುವರಿ ಮಾಡಿಕೊಂಡು ರೈತರಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕೆಲವು ಹೊಲಗಳಿಗೆ, ತೋಟಗಳಿಗೆ ನಕಾಶೆ ರಸ್ತೆಯೇ ಇಲ್ಲದ ಕಾರಣ ಅವರು ತೋಟಕ್ಕೆ ಕೃಷಿ ಸಲಕರಣೆ, ಗೊಬ್ಬರ, ತೋಟದ

ಬೆಳೆಗಳ ಸಾಗಾಟಕ್ಕೆ ತೊಂದರೆ ಅನುಭವಿಸುತ್ತಿದ್ದು, ಇದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ನಕಾಶೆ ರಸ್ತೆಯೇ ಇಲ್ಲದ ಜಮೀನಿಗೆ ರಸ್ತೆ ಸೌಲಭ್ಯ ಒದಗಿಸಲು ಜಮೀನಿನಲ್ಲಿ ಇರುವ ಖರಾಬು ಉಪಯೋಗಿಸಬಹುದೇ ; (ಸುತ್ತೋಲೆ/ಆದೇಶದ ಪ್ರತಿಯೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಉ) ರೈತರು ಭೂಮಿಯ ಮಾರುಕಟ್ಟೆಯ ಬೆಲೆ ನೀಡಿದ್ದಲ್ಲಿ, ಹೊಲ/ ತೋಟಕ್ಕೆ ರಸ್ತೆಯನ್ನು ಸರ್ಕಾರದ ವತಿಯಿಂದ ಭೂಮಿ ಖರೀದಿಸಿ ರೈತರಿಗೆ ರಸ್ತೆಯನ್ನು ಮಾಡಿಕೊಡಲಾಗುವುದೇ ? (ವಿವರ ನೀಡುವುದು)

## ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿನ ಬಸ್ ಜಾಹೀರಾತು ಕುರಿತು

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೧ (೯೮೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಸಂಚರಿಸುವ ಒಟ್ಟು ಬಸ್‌ಗಳ ಸಂಖ್ಯೆ ಎಷ್ಟು ; ಇವುಗಳ ನಿರ್ವಹಣೆಗಾಗಿ ಖರ್ಚಾಗುತ್ತಿರುವ ಮೊತ್ತ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಸಂಸ್ಥೆಯಲ್ಲಿ ಸಂಚರಿಸುವ ಬಸ್‌ಗಳಿಗೆ ಸರ್ಕಾರದ ಜಾಹೀರಾತು ಹೊರತುಪಡಿಸಿ ಖಾಸಗಿ ಜಾಹೀರಾತುಗಳನ್ನು ಬಸ್‌ಗಳಿಗೆ ಅಳವಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವುಗಳಿಗೆ ಯಾವ ನಿಯಮದಡಿಯಲ್ಲಿ ಅವಕಾಶ ನೀಡಲಾಗಿದೆ ;

(ಇ) ಖಾಸಗಿ ಜಾಹೀರಾತುಗಳನ್ನು ಬಸ್‌ಗಳ ಮೇಲೆ ಅಳವಡಿಸಲು ಸರ್ಕಾರವು ನಿಗದಿಪಡಿಸಿದ ಮೊತ್ತ ಎಷ್ಟು ಹಾಗೂ ಜಾಹೀರಾತುಗಳಿಂದ ಬಂದ ಒಟ್ಟು ಹಣ ಎಷ್ಟು ಮತ್ತು ಹಣವನ್ನು ಸರ್ಕಾರವು ಯಾವುದಕ್ಕೆ ಬಳಸಿಕೊಳ್ಳಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಬೆಂಗಳೂರಿನಲ್ಲಿ ಸಂಚರಿಸುವ ಬಸ್‌ಗಳ ಮೇಲೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಎಂಬ ಹೆಸರು ಕಾಣಿಸದ ಹಾಗೆ ಜಾಹೀರಾತು ನೀಡಲಾಗಿದೆಯೇ ; ಹಾಗಿದ್ದಲ್ಲಿ, ನಮ್ಮ ಸಂಸ್ಥೆಯ ಹೆಸರುಗಳನ್ನು ನಾವೇ ಮುಚ್ಚಿದ ಹಾಗೇ ಆಗುವುದಿಲ್ಲವೇ ; ಈ ಕುರಿತು ಸರ್ಕಾರದ ಕ್ರಮಗಳೇನು ;

(ಉ) ಕಳೆದ ೦೩ ವರ್ಷಗಳಲ್ಲಿ ಜಾಹೀರಾತುಗಳನ್ನು ಅಳವಡಿಸಲು ಯಾವ ಯಾವ ಕಂಪನಿಗಳಿಗೆ ಗುತ್ತಿಗೆ ನೀಡಲಾಗಿದೆ ? (ಕಂಪನಿವಾರು/ಜಾಹೀರಾತುವಾರು ನೀಡಿದ ದಿನಾಂಕ/ಮೊತ್ತ ಹಾಗೂ ಇನ್ನಿತರ ಅಗತ್ಯವಾದ ಸಂಪೂರ್ಣ ಮಾಹಿತಿ ನೀಡುವುದು)

## ಸಾರಿಗೆ ಸಂಸ್ಥೆಯ ನೌಕರರಿಗೆ ವೇತನ ಪರಿಷ್ಕರಣೆಯಾಗದಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೨ (೮೫೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಕ್ತಿ ಯೋಜನೆ ಜಾರಿಯಾದ ದಿನದಿಂದ ಇಲ್ಲಿಯವರೆಗೂ ಸಾರಿಗೆ ಸಂಸ್ಥೆಗೆ ಸರ್ಕಾರ ನೀಡಬೇಕಾಗಿರುವ ಬಾಕಿ ಹಣವೆಷ್ಟು ;

(ಆ) ಪ್ರಸ್ತುತ ಸಾರಿಗೆ ಸಂಸ್ಥೆಯ ಆರ್ಥಿಕ ಪರಿಸ್ಥಿತಿ ಹೇಗಿದೆ ಹಾಗೂ ಸಾರಿಗೆ ಸಂಸ್ಥೆಯಿಂದ ಪಾವತಿಸಲಾಗುತ್ತಿರುವ ಮಾಸಿಕ ಬಡ್ಡಿ ಹಣವೆಷ್ಟು ;

(ಇ) ಸರ್ಕಾರದಿಂದ ಸರಿಯಾದ ಸಮಯಕ್ಕೆ ಸಂಸ್ಥೆಗೆ ಹಣ ಬಾರದೇ ಇರುವುದರಿಂದ ಸಾರಿಗೆ ಸಂಸ್ಥೆಯು ಆರ್ಥಿಕವಾಗಿ ಮತ್ತು ದಿನನಿತ್ಯದ ಕಾರ್ಯಚಟುವಟಿಕೆಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸಾರಿಗೆ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ವೇತನ ಪರಿಷ್ಕರಣೆ ಯಾವ ವರ್ಷದಲ್ಲಿ ಆಗಬೇಕಿತ್ತು ಹಾಗೂ ಪ್ರಸ್ತುತ ವೇತನ ಪರಿಷ್ಕರಣೆ ಮಾಡಲಾಗಿದೆಯೇ ;

(ಉ) ನೌಕರರಿಗೆ ಬಹಳ ವರ್ಷಗಳಿಂದ ವೇತನ ಪರಿಷ್ಕರಣೆ ಮಾಡದೇ ಇರುವುದರಿಂದ, ನೌಕರರು ಆರ್ಥಿಕ ಸಂಕಷ್ಟದಲ್ಲಿ ಸಿಲುಕಿ ಕಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಕೋಲಾರ ಜಿಲ್ಲೆಯಲ್ಲಿ ರೈತರಿಗೆ ಮಂಜೂರಾಗಿರುವ ಜಮೀನಿಗೆ ಪೋಡಿ ಬಾಕಿ ಇರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೩ (೮೫೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಗೆ ಸಂಬಂಧಿಸಿದಂತೆ ಸರ್ಕಾರದಿಂದ ಈವರೆಗೂ ರೈತರಿಗೆ ಮಂಜೂರಾಗಿರುವ ಜಮೀನುಗಳನ್ನು ಪೋಡಿ ಮಾಡಿ ದುರಸ್ಥಿಪಡಿಸಲು ಬಾಕಿಯಿರುವ ಪ್ರಕರಣಗಳೆಷ್ಟು ;

(ಆ) ಈ ರೀತಿ ಬಾಕಿಯಿರುವ ಪ್ರಕರಣಗಳ ಪೈಕಿ ರೈತರ ಬಳಿ ದೃಢೀಕೃತ ಮೂಲ ಮಂಜೂರಾತಿ ದಾಖಲೆಗಳಿದ್ದು, ಇದರ ಮೂಲ ಮಂಜೂರಾತಿ ಕಡತಗಳು ತಾಲ್ಲೂಕು ಕಛೇರಿಗಳಲ್ಲಿ ಲಭ್ಯವಿಲ್ಲದೇ ರೈತರು ತಮ್ಮ ಜಮೀನುಗಳನ್ನು ಪೋಡಿ ಮಾಡಿಸಲಾಗದೇ ತೊಂದರೆಗಳನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಪ್ರಕರಣಗಳ ವಿವರಗಳನ್ನು ಒದಗಿಸುವುದು)

(ಇ) ಮೇಲ್ಕಂಡ ಪ್ರಶ್ನೆಗೆ ಸಂಬಂಧಿಸಿದಂತೆ ಇಂತಹ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿ, ರೈತರ ಹಿತರಕ್ಷಣೆಗೆ ಸರ್ಕಾರವು ಈವರೆಗೆ ತೆಗೆದುಕೊಂಡ ಕ್ರಮಗಳೇನು ;

(ಈ) ಇಂತಹ ಪ್ರಕರಣಗಳನ್ನು ಗೈರು ಕಡತಗಳ ವಿಲೇವಾರಿ ಸಮಿತಿಗೆ ಶಿಫಾರಸ್ಸು ಮಾಡಿ, ಇತ್ಯರ್ಥಪಡಿಸದೆ ಬಾಕಿಯಿರುವ ಪ್ರಕರಣಗಳೆಷ್ಟು ; (ವಿವರಗಳನ್ನು ಒದಗಿಸುವುದು)

(ಉ) ಈ ರೀತಿ ಗೈರು ಕಡತಗಳ ವಿಲೇವಾರಿ ಸಮಿತಿಯಲ್ಲಿ ಇತ್ಯರ್ಥವಾಗದೇ, ವಿನಾಕಾರಣ ರೈತರನ್ನು ಅಲೆದಾಡಿಸುತ್ತಿರುವ ಬಗ್ಗೆ ಸರ್ಕಾರದ ನಿಲುವೇನು ; ಯಾವ ಕಾಲಮಿತಿಯೊಳಗೆ ಇಂತಹ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗುವುದು ?

## ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ಮಾಜಿ ದೇವದಾಸಿಯರಿಗೆ ಮಂಜೂರು ಮಾಡಿರುವ ನಿವೇಶನಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭಾಯಿಂದ ಚುನಾಯಿತರಾದವರು) :–**

೭೭೪ (೯೫೨) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ರಾಜೀವ್ ಗಾಂಧಿ ವಸತಿ ನಿಗಮದ ವತಿಯಿಂದ ಮಾಜಿ ದೇವದಾಸಿಯರಿಗೆ ಮಂಜೂರು ಮಾಡಿದ ನಿವೇಶನಗಳು ಹಾಗೂ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಮಾಜಿ ದೇವದಾಸಿಯರಿಗೆ ಮಂಜೂರು ಮಾಡಿದ ಮನೆಗಳಿಗೆ ಸಂಬಂಧಿಸಿದಂತೆ ಇಲ್ಲಿಯವರೆಗೆ ಎಷ್ಟು ಜನರಿಗೆ ಸಂಪೂರ್ಣವಾಗಿ ಹಣವನ್ನು ಬಿಡುಗಡೆ ಮಾಡಲಾಗಿರುತ್ತದೆ ;

(ಇ) ಎಷ್ಟು ಮನೆಗಳಿಗೆ ಇನ್ನೂ ಹಣವನ್ನು ಬಿಡುಗಡೆ ಮಾಡಲು ಬಾಕಿ ಇದೆ ; ಯಾವ ಯಾವ ಹಂತಗಳಲ್ಲಿ ಬಾಕಿ ಇದೆ ; ಬಾಕಿ ಇರುವ ಪ್ರಕರಣಗಳಲ್ಲಿ ಶೀಘ್ರವಾಗಿ ಹಣವನ್ನು ಬಿಡುಗಡೆ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ನಮೂನೆ ೫೦, ೫೩ ಮತ್ತು ೫೭ರಡಿಯಲ್ಲಿ ಸ್ವೀಕೃತವಾಗಿರುವ ಅರ್ಜಿಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೫ (೯೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ನಮೂನೆ ೫೦, ೫೩ ಮತ್ತು ೫೭ರಡಿಯಲ್ಲಿ ಸ್ವೀಕೃತವಾಗಿರುವ ಒಟ್ಟು ಅರ್ಜಿಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಸ್ವೀಕೃತವಾಗಿರುವ ಅರ್ಜಿಗಳ ಪೈಕಿ ಎಷ್ಟು ಅರ್ಜಿಗಳನ್ನು ವಿಲೆಗೊಳಿಸಲಾಗಿದೆ ; ಅದರಲ್ಲಿ ಅಂಗೀಕರಿಸಿದ, ತಿರಸ್ಕರಿಸಿದ ಹಾಗೂ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಅರ್ಜಿಗಳನ್ನು ಇತ್ಯರ್ಥಪಡಿಸಲು ಎಷ್ಟು ಬಾರಿ ಅಕ್ರಮ ಸಕ್ರಮ/ಬಗರ್ ಹುಕುಂ ಸಮಿತಿ ಸಭೆಯನ್ನು ನಡೆಸಲಾಗಿದೆ ; (ಸಭೆಯ ನಡುವಳಿಗಳ ಪ್ರತಿಯನ್ನು ಒದಗಿಸುವುದು)

(ಈ) ಬಾಕಿ ಇರುವ ಅರ್ಜಿಗಳನ್ನು ವಿಲೇಗೊಳಿಸಲು ಯಾವ ಕಾಲಾವಧಿಯನ್ನು ನಿಗದಿಪಡಿಸಲಾಗಿದೆ ; ಅವುಗಳನ್ನು ಯಾವಾಗ ಇತ್ಯರ್ಥಪಡಿಸಲಾಗುವುದು ?

# ೨೦೨೫–೨೬ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಕಾನೂನು ಪದವೀಧರರಿಗೆ ಪ್ರೋತ್ಸಾಹಧನ ಪಾವತಿಸುವ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೬ (೯೫೪) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಕಾನೂನು ಪದವೀಧರರಿಗೆ ಪ್ರೋತ್ಸಾಹಧನವನ್ನು ಪಾವತಿಸಲು ನಿಗದಿಪಡಿಸಿರುವ ಗುರಿ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ನಿಗದಿಪಡಿಸಿರುವ ಗುರಿಯ ಪೈಕಿ ಆರ್ಥಿಕ ಹಾಗೂ ಭೌತಿಕ ಸಾಧನೆ ಎಷ್ಟು ; ಬಾಕಿ ಎಷ್ಟು ; (ಮಾಹಿತಿ ಒದಗಿಸುವುದು)

(ಇ) ಈ ಪ್ರೋತ್ಸಾಹಧನವನ್ನು ವಿತರಿಸಲು ಬಾಕಿ ಉಳಿಸಿಕೊಳ್ಳಲು ಕಾರಣವೇನು ; ಅದನ್ನು ಯಾವ ಕಾಲಮಿತಿಯೊಳಗೆ ಪಾವತಿಸಲಾಗುವುದು ? (ಮಾಹಿತಿ ಒದಗಿಸುವುದು)

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ವಸತಿ ಗೃಹಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೭ (೯೩೧) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರಾವಳಿ ಭಾಗದ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ವಸತಿ ನಿಲಯಗಳ ಸಂಖ್ಯೆ ಎಷ್ಟು ; ಎಷ್ಟು ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಉಭಯ ಜಿಲ್ಲೆಯಲ್ಲಿ ನಡೆಸಲ್ಪಡುವ ವಸತಿ ನಿಲಯಗಳಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ಅವಕಾಶ ನೀಡಲಾಗಿದೆ ; ಎಷ್ಟು ವಿದ್ಯಾರ್ಥಿಗಳು ಪ್ರವೇಶ ವಂಚಿತರಾಗಿದ್ದಾರೆ ; ಪ್ರವೇಶವಂಚಿತ ವಿದ್ಯಾರ್ಥಿಗಳಿಗೆ ಪರ್ಯಾಯ ವ್ಯವಸ್ಥೆ ಮಾಡಲಾಗಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಇ) ೨೦೨೫–೨೬ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆಗೆ ಎಷ್ಟು ವಿದ್ಯಾರ್ಥಿ ನಿಲಯಗಳನ್ನು ಹೆಚ್ಚುವರಿಯಾಗಿ ನೀಡಲಾಗಿದೆ ; ಎಷ್ಟು ಹೊಸ ವಿದ್ಯಾರ್ಥಿ ನಿಲಯಗಳಿಗೆ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ಕ್ರಮಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ವಸತಿ ಇಲಾಖೆಯಿಂದ ನಿರ್ಮಾಣ ಮಾಡಿದ ಮನೆಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೮ (೯೩೨) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಸತಿ ಇಲಾಖೆಯಿಂದ ನಿರ್ಮಾಣ ಮಾಡಿದ ಮನೆಗಳೆಷ್ಟು ; ಪೂರ್ಣಗೊಳ್ಳದ ಮನೆಗಳ ಕಾಮಗಾರಿಗಳು ಯಾವ ಹಂತದಲ್ಲಿದೆ ;

(ಆ) ವಸತಿ ಇಲಾಖೆಯ ವತಿಯಿಂದ ಮಂಗಳೂರು ನಗರದಲ್ಲಿ ಮನೆಗಳನ್ನು ನಿರ್ಮಾಣ ಮಾಡಲು ಯಾವ ಯೋಜನೆಗಳನ್ನು ಮಂಜೂರು ಮಾಡಲಾಗಿದೆ ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಸತಿ ಯೋಜನೆಗಳಡಿಯಲ್ಲಿ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; ಈ ಯೋಜನೆಯ ಸಂಪೂರ್ಣ ವೆಚ್ಚ ಎಷ್ಟು ; ಎಷ್ಟು ಅರ್ಜಿಗಳು ಬಂದಿದೆ ? (ವಿವರ ನೀಡುವುದು)

## ಮೀನುಗಾರಿಕಾ ಅಭಿವೃದ್ಧಿ ನಿಗಮ ವತಿಯಿಂದ ಏರ್ ಆಂಬುಲೆನ್ಸ್ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೯ (೯೩೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಮೀನುಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ಏರ್ ಆಂಬುಲೆನ್ಸ್ ಅನ್ನು ಮೀನುಗಾರರ ಸುರಕ್ಷತೆಗಾಗಿ ತರುವುದಾಗಿ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದರೂ ಈವರೆಗೆ ಅನುಷ್ಠಾನಗೊಳಿಸದೆ ಇರಲು ಕಾರಣವೇನು ; ಇದಕ್ಕೆ ತಗಲುವ ವೆಚ್ಚವೆಷ್ಟು ; (ವಿವರ ಒದಗಿಸುವುದು)

(ಆ) ಏರ್ ಆಂಬುಲೆನ್ಸ್ ಅಳವಡಿಸುವ ಮೂಲಕ ಮೀನುಗಾರರಿಗೆ ರಕ್ಷಣೆ ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ; (ವಿವರ ಒದಗಿಸುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮೀನುಗಾರರ ರಕ್ಷಣೆಗಾಗಿ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು ; ಪರ್ಯಾಯವಾಗಿ ಅವರಿಗೆ ವಿಮಾ ಸೌಲಭ್ಯವನ್ನು ಒದಗಿಸಲಾಗಿದೆಯೇ ? (ವಿವರ ಒದಗಿಸುವುದು)

## KSRTC ಬಸ್ ನಿಲ್ದಾಣದ ವಿಸ್ತರಣೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೦ (೯೩೪) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ನಗರದಲ್ಲಿರುವ ಕೆ.ಎಸ್.ಆರ್.ಟಿ.ಸಿಯ ಪ್ರಸ್ತುತ ನಿಲ್ದಾಣದಿಂದ ಬೇರೆ ಬಸ್ ನಿಲ್ದಾಣಗಳಿಗೆ ಸಂಚರಿಸುವ ಬಸ್

ಸಂಚಾರದ ವಿಸ್ತರಣೆಯು ಯಾವ ಹಂತದಲ್ಲಿದೆ ; ಮಂಗಳೂರು ನಗರದಲ್ಲಿರುವ ಬಸ್ ನಿಲ್ದಾಣದಿಂದ ಸಂಚರಿಸುತ್ತಿರುವ ಬಸ್‌ಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಮಂಗಳೂರು ನಗರದ ಬಿಜೈನಲ್ಲಿರುವ ಬಸ್ ನಿಲ್ದಾಣವನ್ನು ಉನ್ನತೀಕರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ, ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಇ) ಮಂಗಳೂರು ವಿಭಾಗಕ್ಕೆ ಸೇರಿದ ಅನೇಕ ರಸ್ತೆಗಳಲ್ಲಿ ಖಾಸಗಿ ಬಸ್‌ಗಳ ಸಂಚಾರವೇ ಹೆಚ್ಚಾಗಿದ್ದು, ಶಕ್ತಿ ಯೋಜನೆ ಉಪಯೋಗ ಪಡೆಯಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ನೋಂದಣಿ ಕಾಯ್ದೆಗೆ ತಂದಿರುವ ತಿದ್ದುಪಡಿ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೧ (೮೬೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೋಂದಣಿ ಕಾಯ್ದೆಗೆ ತಂದಿರುವ ತಿದ್ದುಪಡಿಯಲ್ಲಿ ನೋಂದಾಯಿತ ಜನರಲ್ ಪವರ್ ಆಫ್ ಅಟಾರ್ನಿಗಳಿಗೆ ದಸ್ತಾವೇಜುಗಳ ನೋಂದಣಿಗೆ ಎಲ್ಲಾ ರೀತಿ ಮಾನ್ಯತೆ ನೀಡಿರುವುದು ನಿಜವೆ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರಿ ಆದೇಶ/ಸುತ್ತೋಲೆಯೊಂದಿಗೆ ಸಂಪೂರ್ಣ ಮಾಹಿತಿ ಒದಗಿಸಲಾಗುವುದು ;

(ಆ) ರಾಜ್ಯದಲ್ಲಿ ಈ ತಿದ್ದುಪಡಿಗಳನ್ನು ಯಾವ ದಿನಾಂಕದಿಂದ ಜಾರಿಗೊಳಿಸಲಾಗಿದೆ ಮತ್ತು ಇದರ ಪರಿಣಾಮವಾಗಿ ಉಪ ನೋಂದಣಿ ಅಧಿಕಾರಿಗಳ ಕಛೇರಿಯಲ್ಲಿ ದಸ್ತಾವೇಜುಗಳ

ನೋಂದಣಿಯು ಸುಸೂತ್ರವಾಗಿ ನಿರ್ವಹಿಸಲಾಗುತ್ತಿದೆಯೇ ; (ಪೂರ್ಣ ಮಾಹಿತಿ ನೀಡುವುದು)

(ಇ) ನೋಂದಣಿ ಕಾಯ್ದೆಗೆ ತಿದ್ದುಪಡಿ ತರುವ ಮುನ್ನ ನೋಂದಾಯಿಸಿದ ಜನರಲ್ ಪವರ್ ಆಫ್ ಅಟಾರ್ನಿಗಳ ಮುಖೇನ ನೋಂದಾಯಿಸಿರುವ ದಸ್ತಾವೇಜುಗಳನ್ನು ಕಾನೂನು ರೀತ್ಯಾ ರಕ್ಷಿಸಲು ತಿದ್ದುಪಡಿ ಕಾಯ್ದೆಯಲ್ಲಿ ಕೈಗೊಂಡಿರುವ ಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಒಂದು ವೇಳೆ ತಿದ್ದುಪಡಿ ಕಾಯ್ದೆಯಲ್ಲಿ ಅಗತ್ಯವಿರುವ ರಕ್ಷಣೆ ಒದಗಿಸಲು ಅವಕಾಶವಿಲ್ಲದಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ಪರ್ಯಾಯ ಕ್ರಮಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ಕರ್ನಾಟಕ ಭೂ ಸುಧಾರಣೆಗಳು ಮತ್ತು ಕೆಲವು ಇತರೆ ಕಾನೂನು ತಿದ್ದುಪಡಿ ಅಧಿನಿಯಮ ೨೦೨೫ ಕ್ಕೆ ಆದೇಶ ಹೊರಡಿಸುವ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೨ (೮೬೭೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫ ಸೆಪ್ಟೆಂಬರ್ ತಿಂಗಳ ೧೦ನೇ ದಿನಾಂಕದಂದು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆಯಲಾದ ಕರ್ನಾಟಕ ಭೂ ಸುಧಾರಣೆಗಳು ಮತ್ತು ಕೆಲವು ಇತರೆ ಕಾನೂನು (ತಿದ್ದುಪಡಿ) ಅಧಿನಿಯಮ ೨೦೨೫, ಮತ್ತು ೧೯೬೨ರ ಕರ್ನಾಟಕ ಅಧಿನಿಯಮ ಸಂ. ೧೦ರ ತಿದ್ದುಪಡಿ :– ಕರ್ನಾಟಕ ಭೂ ಸುಧಾರಣೆಗಳ ಅಧಿನಿಯಮ, ೧೯೬೧ (೧೯೬೨ರ ಕರ್ನಾಟಕ ಅಧಿನಿಯಮ ಸಂ.೧೦) ಹಾಗೂ ೧೯೬೪ರ ಕರ್ನಾಟಕ

ಅಧಿನಿಯಮ ಸಂ:೧೨ರ ತಿದ್ದುಪಡಿ :– ಕರ್ನಾಟಕ ಭೂ ಕಂದಾಯ ಅಧಿನಿಯಮ ೧೯೬೪ (೧೯೬೪ರ ಕರ್ನಾಟಕ ಅಧಿನಿಯುಮ ೧೨)ರಲ್ಲಿ ಈ ಅಧಿನಿಯುಮಗಳು ಜಾರಿಗೆ ಬಂದಿವೆಯೇ ;

(ಆ) ಹಾಗಿದ್ದಲ್ಲಿ, ಈ ಬಗ್ಗೆ ಇನ್ನು ಸರ್ಕಾರದ ಆದೇಶವಾಗದಿರುವುದಕ್ಕೆ ಕಾರಣಗಳೇನು ;

(ಇ) ಆದೇಶವಾಗಿದ್ದಲ್ಲಿ, ಸರ್ಕಾರದ ಆದೇಶದ ಪ್ರತಿಗಳನ್ನು ಒದಗಿಸುವುದು ;

(ಈ) ಆದೇಶವಾಗದಿದ್ದಲ್ಲಿ, ವಿಳಂಬಕ್ಕೆ ಕಾರಣವನ್ನು ತಿಳಿಸುವುದು ?

## ಮುಜರಾಯಿ ಇಲಾಖಾ ದೇವಸ್ಥಾನಗಳಿಂದ ಬಂದಿರುವ ಆದಾಯ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೩ (೮೬೯) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷದಲ್ಲಿ ರಾಜ್ಯದ ಮುಜರಾಯಿ ಇಲಾಖೆಗೆ ಸೇರಿದ ದೇವಸ್ಥಾನಗಳಿಂದ ಬಂದಿರುವ ವರಮಾನವೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಮುಜರಾಯಿ ಇಲಾಖೆಯು ಪ್ರತಿ ದೇವಸ್ಥಾನಗಳಿಂದ ಸಂಗ್ರಹಿಸುತ್ತಿರುವ ಕಾಮನ್‌ಫೂಲ್ ಫಂಡ್‌ನ ಶೇಕಡಾವಾರು ಮೊತ್ತವೆಷ್ಟು ; ಹಾಗೂ ಇಲ್ಲಿಯ ತನಕ ಕಾಮನ್‌ಫೂಲ್ ಫಂಡ್‌ನಲ್ಲಿ ಒಟ್ಟು ಜಮೆ ಆಗಿರುವ ಮೊತ್ತವೆಷ್ಟು ; (ಮಾಹಿತಿ ಒದಗಿಸುವುದು)

(ಇ) ಈ ಕಾಮನ್‌ಫೂಲ್ ಫಂಡ್ ಅನ್ನು ಯಾವ ಯಾವ ಕಾರ್ಯಕ್ರಮ/ ಯೋಜನೆಗಳಿಗೆ ಬಳಸಿಕೊಳ್ಳಲು ಕಾನೂನಿನಲ್ಲಿ ಅವಕಾಶವಿದೆ ; (ವಿವರ ಒದಗಿಸವುದು)

(ಈ) ಕಳೆದ ೨ ವರ್ಷಗಳಿಂದ ಈ ಕಾಮನ್‌ಫೂಲ್ ಫಂಡ್ ಅನ್ನು ಯಾವ ಯಾವ ಕಾರ್ಯಕ್ರಮಗಳಿಗೆ/ಯೋಜನೆಗೆ ಬಳಸಿಕೊಳ್ಳಲಾಗಿದೆ ? (ಮಾಹಿತಿ ಒದಗಿಸುವುದು)

## ಸಾರಿಗೆ ಇಲಾಖೆಯಿಂದ ವಿತರಿಸುವ ಡಿ.ಎಲ್/ಆರ್.ಸಿ. ಇತರೆ ದಾಖಲೆಗಳ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೪ (೮೭೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರಿಗೆ ಇಲಾಖೆಯಿಂದ ವಿತರಿಸುವ ಡಿ.ಎಲ್/ಆರ್.ಸಿ. ಇತರೆ ದಾಖಲೆಗಳನ್ನು ಪಡೆಯಲು ಅಥವಾ ನೋಂದಣಿ ಮಾಡಲು ಆನ್‌ಲೈನ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಈ ವ್ಯವಸ್ಥೆಯು ಮುಂಚಿನ ಮ್ಯಾನ್ಯುಯಲ್‌ಗಿಂತಲೂ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ರೈತರು, ಅವಿದ್ಯಾವಂತರು ಆನ್‌ಲೈನ್ ಮೂಲಕ ಡಿ.ಎಲ್/ಆರ್.ಸಿ ಇತರೆ ದಾಖಲೆಗಳನ್ನು ಪಡೆಯಲು ಕಂಪ್ಯೂಟರ್ ತಿಳುವಳಿಕೆ ಇಲ್ಲದಿರುವುದರಿಂದ ಮತ್ತೆ ಮಧ್ಯವರ್ತಿಗಳ ಬಳಿಯೇ ಹೋಗಬೇಕಾಗಿರುವುದು ಹಾಗೂ ಇದಕ್ಕಾಗಿ ಹೆಚ್ಚಿಗೆ ಹಣವನ್ನು ನೀಡಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸುವ ಸಲುವಾಗಿ ಇಲಾಖಾ ವತಿಯಿಂದಲೇ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸ್ವೀಕರಿಸಲು

ಹೆಲ್ಪ್ ಡೆಸ್ಕ್ ಸ್ಥಾಪಿಸಿ ಅನುಕೂಲ ಮಾಡಿಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಲೋಕೋಪಯೋಗಿ ಇಲಾಖೆಯ ವಿವಿಧ ಲೆಕ್ಕಶೀರ್ಷಿಕೆಯಡಿ ನೀಡಿರುವ ಅನುದಾನ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೫ (೮೭೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪–೨೫ನೇ ಸಾಲಿನಲ್ಲಿ ವಿವಿಧ ಲೆಕ್ಕ ಶೀರ್ಷಿಕೆಯಡಿಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಜಿಲ್ಲಾವಾರು ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಬಿಡುಗಡೆ ಮಾಡಿರುವ ಅನುದಾನದಲ್ಲಿ ಖರ್ಚು ಮಾಡಿರುವ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಬೆಂಗಳೂರು ನಗರ ಜಿಲ್ಲೆ, ಯಶವಂತಪುರ ವಿಧಾನಸಭಾ ಕ್ಷೇತ್ರಕ್ಕೆ ಸೇರಿದ ಲೋಕೋಪಯೋಗಿ ರಸ್ತೆಗಳು ಯಾವುವು ; (ಮಾಹಿತಿ ಒದಗಿಸುವುದು)

(ಈ) ಕಳೆದ ೫ ವರ್ಷಗಳಿಂದ ಈ ಕ್ಷೇತ್ರದಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿದ ರಸ್ತೆಗಳು ಗುಂಡಿ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ, ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಉ) ಕಳೆದ ೨ ವರ್ಷಗಳಲ್ಲಿ ಯಶವಂತಪುರ ವಿಧಾನಸಭಾ ಕ್ಷೇತ್ರದಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿದ ಹೊಸ ರಸ್ತೆಗಳನ್ನು ನಿರ್ಮಿಸಲಾಗಿದೆಯೇ ಹಾಗೂ ಹಳೆಯ ರಸ್ತೆಗಳ ದುರಸ್ತಿ ಮಾಡಲಾಗಿದೆಯೇ ? (ವಿವರ ಒದಗಿಸುವುದು)

## ರಾಜ್ಯದ ಸಾರಿಗೆ ನಿಗಮಗಳ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೬ (೯೦೪) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಎಲ್ಲಾ ಸಾರಿಗೆ ನಿಗಮದ ಸಂಸ್ಥೆಯಲ್ಲಿ ಒಟ್ಟು ಇರುವ ಬಸ್ಸುಗಳ ಸಂಖ್ಯೆ ಎಷ್ಟು ; ಗುತ್ತಿಗೆ ಪಡೆದ ಬಸ್ಸುಗಳು ಎಷ್ಟು ಮತ್ತು ಬಿ.ಎಂ.ಟಿ.ಸಿ. ಒಡೆತನದ ಬಸ್ಸುಗಳು ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಬಸ್ಸುಗಳಲ್ಲಿ ಡೀಸೆಲ್ ಬಸ್ಸುಗಳ ಸಂಖ್ಯೆ ಮತ್ತು ಯಾವ ವರ್ಷದಲ್ಲಿ ಖರೀದಿಸಲಾಗಿದೆ ; ಸದರಿ ಸಂಸ್ಥೆಯಲ್ಲಿ ವಿದ್ಯುತ್ ಚಾಲಿತ ಬಸ್ಸುಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದ ಸಾರಿಗೆ ಇಲಾಖೆಯ ಎಲ್ಲಾ ನಿಗಮದ ೨೦೨೩–೨೪ರಿಂದ ೨೦೨೫–೨೬ನೇ ಸಾಲಿನವರೆಗಿನ ಲಾಭ ಮತ್ತು ನಷ್ಟ ಎಷ್ಟು ; ನಿಗಮವಾರು ಸಂಪೂರ್ಣ ಮಾಹಿತಿಯನ್ನು ನೀಡುವುದು ;

(ಈ) ರಾಜ್ಯದ ಎಲ್ಲಾ ಸಾರಿಗೆ ನಿಗಮದಲ್ಲಿ ಒಟ್ಟು ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಎಷ್ಟು ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಎಷ್ಟು ಕಾಲಮಿತಿಯಲ್ಲಿ ನೇಮಕಾತಿ ಮಾಡಲಾಗುವುದು ? (ಜಿಲ್ಲಾವಾರು, ಹುದ್ದೆವಾರು ಮಾಹಿತಿ ನೀಡುವುದು)

## ದೇವರಹಿಪ್ಪರಗಿ ಉಪ ನೋಂದಣಾಧಿಕಾರಿಗಳ ಕಛೇರಿಯ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೭ (೯೦೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇವರಹಿಪ್ಪರಗಿ ತಾಲ್ಲೂಕು ಕೇಂದ್ರವಾಗಿದ್ದು ಉಪ ನೋಂದಣಾಧಿಕಾರಿಗಳ ಕಛೇರಿಗಾಗಿ ಇನ್ನೂ ಸಿಂಧಗಿ ತಾಲ್ಲೂಕನ್ನು ಅವಲಂಬಿಸಿರುವುದು ಸರ್ಕಾರದ ಗಮನಕ್ಕೆ ಇದೆಯೇ ;

(ಆ) ಇದ್ದರೆ ದೇವರ ಹಿಪ್ಪರಗಿಯಲ್ಲಿ ಪ್ರತ್ಯೇಕ ಉಪ ನೋಂದಣಾಧಿಕಾರಿಗಳ ಕಛೇರಿ ಸ್ಥಾಪಿಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಯಾವ ಕಾಲಮಿತಿಯಲ್ಲಿ ಉಪ ನೋಂದಣಾಧಿಕಾರಿಗಳ ಕಛೇರಿಯನ್ನು ಸ್ಥಾಪಿಸಲಾಗುವುದು ; ದೇವರ ಹಿಪ್ಪರಗಿಯಲ್ಲಿ ಉಪ ನೋಂದಣಾಧಿಕಾರಿಗಳ ಕಛೇರಿಗಾಗಿ ಎಷ್ಟು ಜಾಗವನ್ನು ಗುರುತಿಸಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯ ಹೆದ್ದಾರಿ ೪೧ ಅನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿಸುವ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೮ (೯೦೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಶಿರಾಡೋಣದಿಂದ ಲಿಂಗಸುಗೂರುರವರೆಗೆ ಇರುವ ರಾಜ್ಯ ಹೆದ್ದಾರಿ ೪೧ ಅನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೊಳಿಸಲಾಗಿದೆಯೇ ; ಸದರಿ ಹೆದ್ದಾರಿಯನ್ನು ಮೇಲ್ದರ್ಜೆಗೆ ಏರಿಸಿದಲ್ಲಿ ಪ್ರಯಾಣದ ಅವಧಿ ಹಾಗೂ ದೂರ ಕಡಿತವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಘೋಷಿಸಲು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು

ಸಲ್ಲಿಸಿದ್ದರೆ, ಪ್ರಸ್ತುತ ಇದು ಯಾವ ಹಂತದಲ್ಲಿದೆ ; ಇದನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಪರಿಗಣಿಸಲು ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದಿಂದ ಕೈಗೊಂಡಿರುವ ಕ್ರಮಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಇ) "ವಿಜಯಪುರ ಜಿಲ್ಲೆಯಿಂದ ಈವರೆಗೆ ಯಾವ ಯಾವ ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳಾಗಿ ಮೇಲ್ದರ್ಜೆಗೊಳಿಸಲಾಗಿದೆ ; ಈ ಪಟ್ಟಿಯಲ್ಲಿ ಇನ್ನೂ ಯಾವ ಯಾವ ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿಗಳಾಗಿ ಪರಿಗಣಿಸಲು ಶಿಫಾರಸ್ಸು ಮಾಡಲಾಗಿದೆ ; ಈ ಸಂಬಂಧ ಸರ್ಕಾರದಿಂದ ಕೈಗೊಳ್ಳಲಾದ ಕ್ರಮಗಳು ಯಾವುವು ? (ವಿವರ ನೀಡುವುದು)

## ಮನೆ ಮಂಜೂರಾತಿ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೭೪೯ (೯೪೭) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಭಾಗಗಳಲ್ಲಿ ಆರ್ಥಿಕವಾಗಿ ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿ/ಪಂಗಡಗಳ ವಸತಿ ರಹಿತ ಕುಟುಂಬಗಳು ಮನೆ ಮಂಜೂರಾತಿ ಕೋರಿ ಗ್ರಾಮ ಪಂಚಾಯತ್ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಅರ್ಜಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ೩ ವರ್ಷಗಳಲ್ಲಿ ಮನೆ ಮಂಜೂರಾತಿಗೆ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ ;

(ಆ) ಕಳೆದ ಮೂರು ವರ್ಷಗಳಿಂದ ರಾಜ್ಯ ಸರ್ಕಾರದ ವತಿಯಿಂದ ಗ್ರಾಮೀಣ ಪ್ರದೇಶಗಳಲ್ಲಿ ಹೊಸ ಮನೆಗಳ ಮಂಜೂರಾತಿ ಮಾಡದಿರಲು ಕಾರಣಗಳೇನು ;

(ಇ) ಕಳೆದ ೩ ವರ್ಷಗಳಲ್ಲಿ ಎಷ್ಟು ಕುಟುಂಬಗಳಿಗೆ ಮನೆ ಮಂಜೂರಾತಿ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಪ್ರಸ್ತುತ ಮನೆ ನಿರ್ಮಾಣಕ್ಕಾಗಿ ಸರ್ಕಾರ ಬಿಡುಗಡೆ ಮಾಡುತ್ತಿರುವ ಸಹಾಯಧನದ ಮೊತ್ತ ನಿರ್ಮಾಣ ವೆಚ್ಚಗಳ ಏರಿಕೆಗೆ ಅನುಗುಣವಾಗಿಲ್ಲ ಎಂಬುದನ್ನು ಸರ್ಕಾರ ಗಮನಿಸಿದೆಯೇ ; ಸಿಮೆಂಟ್, ಮರಳು, ಕಲ್ಲು ಮತ್ತು ಇತರೆ ಕಟ್ಟಡ ಸಾಮಗ್ರಿಗಳ ಬೆಲೆ ಏರಿಕೆಯನ್ನು ಪರಿಗಣಿಸಿ ಸಹಾಯಧನದ ಮೊತ್ತವನ್ನು ಹೆಚ್ಚಿಸುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ ;

(ಉ) ಗ್ರಾಮೀಣ ಬಡವರಿಗೆ ಶಾಶ್ವತ ವಸತಿ ಒದಗಿಸುವ ಉದ್ದೇಶದಿಂದ ಜಾರಿಗೆ ಇರುವ ಕೇಂದ್ರ ಯೋಜನೆ (ಉದಾಹರಣೆಗೆ Pradhan Mantri Awas Yojana - Gramin) ಅಡಿಯಲ್ಲಿ ರಾಜ್ಯಕ್ಕೆ ಕಳೆದ ಮೂರು ವರ್ಷಗಳಲ್ಲಿ ಬಂದ ಅನುದಾನದ ಮೊತ್ತ ಎಷ್ಟು ;

(ಊ) ಮನೆ ಮಂಜೂರಾತಿ ಪ್ರಕ್ರಿಯೆಯನ್ನು ಪಾರದರ್ಶಕ ಹಾಗೂ ತ್ವರಿತಗೊಳಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; ವಸತಿ ರಹಿತ ಕುಟುಂಬಗಳಿಗೆ ತುರ್ತು ಆಧಾರದ ಮೇಲೆ ಮನೆ ಮಂಜೂರಾತಿ ಮಾಡಿ ಮನೆ ನಿರ್ಮಾಣ ಸಹಾಯಧನವನ್ನು ಹೆಚ್ಚಿಸಲು ಸರ್ಕಾರ ಸಿದ್ಧವಿದೆಯೇ ; ಇದ್ದರೆ, ಯಾವ ಅವಧಿಯೊಳಗೆ ಕ್ರಮ ಕೈಗೊಳ್ಳಲಾಗುವುದು ?

## ಪ್ರಾಕೃತಿಕ ವಿಕೋಪಕ್ಕೆ ಪರಿಹಾರ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೭೯೦ (೯೪೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾಕೃತಿಕ ವಿಕೋಪದಿಂದ ಮನೆ ಕಳೆದುಕೊಂಡ ಫಲಾನುಭವಿಗಳಿಗೆ ಹೊಸದಾಗಿ ಮನೆ ನಿರ್ಮಿಸಲು ಸರ್ಕಾರ ನೀಡುತ್ತಿರುವ ಸಹಾಯಧನದ ಮೊತ್ತ ಎಷ್ಟು ; ಪ್ರಸ್ತುತ ಮಾರುಕಟ್ಟೆ ದರ ಹಾಗೂ ಮನೆ ನಿರ್ಮಾಣ ಸರಕುಗಳ ವೆಚ್ಚಗಳ ಏರಿಕೆಯನ್ನು ಪರಿಗಣಿಸಿದಾಗ ನೀಡಲಾಗುತ್ತಿರುವ ಸಹಾಯಧನ ಅತೀ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ಪ್ರಸಕ್ತ ಸಾಲಿನಲ್ಲಿ ಸದರಿ ಸಹಾಯಧನ ಮೊತ್ತವನ್ನು ಹೆಚ್ಚಿಸಲು ಕ್ರಮ ವಹಿಸಲಾಗುವುದೇ ;

(ಆ) ಸದರಿ ಸಹಾಯಧನವನ್ನು ಹೆಚ್ಚಿಸಿ ಮನೆ ಕಳೆದುಕೊಂಡ ಬಡ ಕುಟುಂಬಗಳಿಗೆ ಸಮರ್ಪಕ ಆರ್ಥಿಕ ನೆರವು ನೀಡುವ ಕುರಿತು ಸರ್ಕಾರವು ಕೈಗೊಂಡಿರುವ ಕ್ರಮವೇನು ; ಇಲ್ಲವಾದಲ್ಲಿ ಅದಕ್ಕೆ ಕಾರಣಗಳೇನು ;

(ಇ) ೨೦೨೩–೨೪ನೇ ಸಾಲಿನಿಂದ ಇಲ್ಲಿಯುವರೆಗೆ ಪ್ರಾಕೃತಿಕ ವಿಕೋಪದಿಂದ ಮನೆ ಭಾಗಶ: ಹಾನಿ ಮತ್ತು ಸಂಪೂರ್ಣ ಹಾನಿಗೊಂಡ ಫಲಾನುಭವಿಗಳ ಸಂಖ್ಯೆ ಹಾಗೂ ಇದುವರೆಗೆ ವಿತರಿಸಿದ ಸಹಾಯಧನ ವಿವರ ನೀಡುವುದು ಮತ್ತು ಅತಿಯಾದ ಮಳೆಯಿಂದ ಹಾನಿಗೊಂಡ ಮೂಲಭೂತ ಸೌಕರ್ಯಗಳನ್ನು ದುರಸ್ಥಿ ಪಡಿಸಲು ಬಿಡುಗಡೆ ಮಾಡಲಾದ ಅನುದಾನ ಎಷ್ಟು ? (ಜಿಲ್ಲಾವಾರು ಮಾಹಿತಿಯೊಂದಿಗೆ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕುವಾರು ವಿವರ ನೀಡುವುದು)

## ಮುಜರಾಯಿ ಇಲಾಖೆಯ ದೇವಾಲಯಗಳ ಅಭಿವೃದ್ಧಿ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೭೯೧ (೯೪೯) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಯ ಅಡಿಯಲ್ಲಿ ಒಟ್ಟು ಎಷ್ಟು ದೇವಾಲಯಗಳು ಇವೆ ; ಯಾವುವು ; ಅವುಗಳಲ್ಲಿ ಎಷ್ಟು 'ಎ' 'ಬಿ' ಮತ್ತು 'ಸಿ' ವರ್ಗದ ದೇವಾಲಯಗಳು ಇವೆ ; ಕಳೆದ ಮೂರು ವರ್ಷಗಳಲ್ಲಿ ದೇವಾಲಯಗಳ ಒಟ್ಟು ಆದಾಯ ಮತ್ತು ವೆಚ್ಚದ ವಿವರವೇನು ; ಪಾರದರ್ಶಕವಾಗಿ ಲೆಕ್ಕಪತ್ರಗಳ ಆನ್‌ಲೈನ್ ಪ್ರಕಟಣೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಆ) ೨೦೨೩-೨೪ರ ನಂತರ ಎಷ್ಟು ದೇವಾಲಯಗಳ ಅಭಿವೃದ್ಧಿಗೆ ಅನುದಾನ ಬಿಡುಗಡೆಗೊಳಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಯಾವೆಲ್ಲ ದೇವಾಲಯಗಳಲ್ಲಿ ವಿವಿಧ ಸೇವೆಗಳಿಗೆ ಎಷ್ಟು ಬಾರಿ ಶುಲ್ಕವನ್ನು ಹೆಚ್ಚಿಸಲಾಗಿದೆ ; ಎಷ್ಟು ಹೆಚ್ಚಳ ಮಾಡಲಾಗಿದೆ ; (ವಿವರ ನೀಡುವುದು)

(ಈ) ದೇವಾಲಯುಗಳ ಜಮೀನು ಮತ್ತು ಅಸ್ತಿಗಳ ಅಕ್ರಮ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ಇದುವರೆಗೆ ಎಷ್ಟು ಎಕರೆ ಭೂಮಿಯನ್ನು ವಶಕ್ಕೆ ಪಡೆಯಲಾಗಿದೆ ; (ದೇವಾಲಯವಾರು ವಿವರ ನೀಡುವುದು)

(ಉ) ಗ್ರಾಮೀಣ ಭಾಗದ ಸಣ್ಣ ದೇವಾಲಯಗಳಿಗೆ ಶೌಚಾಲಯ, ಕುಡಿಯುವ ನೀರು ವಸತಿ ಮುಂತಾದ ಮೂಲಸೌಕರ್ಯ ಅಭಿವೃದ್ಧಿಗೆ ವಿಶೇಷ ಅನುದಾನ ನೀಡುವ ಬಗ್ಗೆ ಸರ್ಕಾರದ ಯೋಜನೆ ಏನು ; ಹುಂಡಿ ಹಣದ ಪಾರದರ್ಶಕ ಎಣಿಕೆ ಮತ್ತು ಬಳಕೆಗೆ ಸಿಸಿಟಿವಿ ಹಾಗೂ ಡಿಜಿಟಲ್ ಮಾನಿಟರಿಂಗ್ ವ್ಯವಸ್ಥೆ ಜಾರಿಗೊಳಿಸಲಾಗಿದೆಯೇ ;

(ಊ) ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು ; ಸದರಿ ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಯಾವಾಗ ಕ್ರಮ ಕೈಗೊಳ್ಳಲಿದೆ ;

(ಋ) ದೇವಾಲಯಗಳ ಆಸ್ತಿ ಮತ್ತು ಆದಾಯದ ಸಂಪೂರ್ಣ ಡಿಜಿಟಲೀಕರಣ ಹಾಗೂ ಸಾರ್ವಜನಿಕರಿಗೆ ಮಾಹಿತಿ ಲಭ್ಯವಾಗುವಂತೆ ಪೋರ್ಟಲ್ ವ್ಯವಸ್ಥೆ ರೂಪಿಸಲು ಸರ್ಕಾರದ ಕಾರ್ಯಯೋಜನೆ ಏನು ; ರಾಜ್ಯದ ಧಾರ್ಮಿಕ ಸಂಸ್ಥೆಗಳ ಸುವ್ಯವಸ್ಥಿತ ನಿರ್ವಹಣೆ ಪಾರದರ್ಶಕತೆ ಮತ್ತು ಭಕ್ತರಿಗೆ ಸೌಲಭ್ಯಗಳನ್ನು ಹೆಚ್ಚಿಸಲು ಸಮಗ್ರ ಸುಧಾರಣಾ ಕ್ರಮಗಳನ್ನು ಕೈಗೊಳ್ಳುವ ಕುರಿತು ಸರ್ಕಾರದ ನಿಲುವೇನು ?

## ಆರ್.ಟಿ.ಓ. ಕಛೇರಿಗಳಲ್ಲಿ ತ್ವರಿತ ಸೇವೆ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೭೯೨ (೯೫೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆರ್.ಟಿ.ಓ. ಕಛೇರಿಗಳಲ್ಲಿ ಅಂತರಾಷ್ಟ್ರೀಯ ಚಾಲನಾ ಪರವಾನಗಿ (IDP) ಚಾಲನಾ ಪರವಾನಗಿ ನವೀಕರಣ (DL Renewal) ಮತ್ತು ವಿಳಾಸ ಬದಲಾವಣೆಯಂತಹ ಆನ್‌ಲೈನ್ ಸೇವೆಗಳನ್ನು ಒದಗಿಸಲು ನಿಗದಿಪಡಿಸಿರುವ ಗರಿಷ್ಠ ಕಾಲಮಿತಿ ಎಷ್ಟು ; (ಸೇವೆವಾರು ವಿವರ ನೀಡುವುದು)

(ಆ) ಆರ್.ಟಿ.ಓ. ಕಛೇರಿಗಳಲ್ಲಿ ವಿವಿಧ ಸೇವೆಗಳನ್ನು ಪಡೆಯಲು ಕಳೆದ ೩ ವರ್ಷಗಳಲ್ಲಿ ರಾಜ್ಯಾದ್ಯಂತ ಸಲ್ಲಿಕೆಯಾದ ಒಟ್ಟು ಅರ್ಜಿಗಳಲ್ಲಿ ನಿಗದಿತ ಸಮಯದೊಳಗೆ ವಿಲೇವಾರಿಯಾದ ಮತ್ತು ಪ್ರಸ್ತುತ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ವರ್ಷವಾರು ಮತ್ತು ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಆನ್‌ಲೈನ್ ಸೇವೆಗಳ ವಿಲೇವಾರಿ ಹಲವು ಕಡೆಗಳಲ್ಲಿ ೭ರಿಂದ ೮ ತಿಂಗಳವರೆಗೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ ; ಹೊಸ ವಾಹನ ಖರೀದಿಸಿ ೧ ವರ್ಷವಾದರೂ ಮಾಲೀಕರಿಗೆ ಆರ್‌ಸಿ (RC Card) ಮತ್ತು ಡಿಎಲ್ (DL) ಹಾರ್ಡ್ ಕಾಪಿಗಳು ಸಿಗದಿರಲು ಕಾರಣಗಳೇನು ;

(ಈ) ಸ್ಮಾರ್ಟ್ ಕಾರ್ಡ್‌ಗಳ ಮುದ್ರಣ ಮತ್ತು ವಿತರಣೆಯಲ್ಲಿ ಉಂಟಾಗಿರುವ ವ್ಯತ್ಯಯಕ್ಕೆ ಸಂಬಂಧಪಟ್ಟ ಗುತ್ತಿಗೆ ಸಂಸ್ಥೆಗಳ ವೈಫಲ್ಯ ಕಾರಣವೇ ; ಹಾಗಿದ್ದಲ್ಲಿ ಸದರಿ ಸಂಸ್ಥೆಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಸಾರ್ವಜನಿಕರನ್ನು ಮಧ್ಯವರ್ತಿಗಳ ಬಳಿ ಹೋಗುವಂತೆ ಪ್ರೇರೇಪಿಸಲು ಅಧಿಕಾರಿಗಳೇ ಕೃತಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ ದೂರುಗಳು ಬಂದಿದೆಯೇ ; ಆರ್.ಟಿ.ಓ. ಕಛೇರಿಗಳಲ್ಲಿ ಭ್ರಷ್ಟಾಚಾರ ಮತ್ತು ಮಧ್ಯವರ್ತಿಗಳ ಹಾವಳಿಯನ್ನು ತಡೆಗಟ್ಟಲು ಕಳೆದ ೩ ವರ್ಷಗಳಲ್ಲಿ ಲೋಕಾಯುಕ್ತ ದಾಳಿಗಳಲ್ಲಿ ದಾಖಲಾದ ಪ್ರಕರಣಗಳೆಷ್ಟು ?

## ರಾಜ್ಯದ ಮಾಜಿ ಸೈನಿಕರುಗಳಿಗೆ ಭೂ ಮಂಜೂರಾತಿ ಮಾಡುವ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೩ (೮೭೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಾಜಿ ಸೈನಿಕರಿಗೆ ಮಂಜೂರಾಗಿರುವ ಒಟ್ಟು ಸರ್ಕಾರಿ ಜಾಗ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಭೂ ಮಂಜೂರಾತಿಗಾಗಿ ಮಾಜಿ ಸೈನಿಕರುಗಳಿಂದ ಸಲ್ಲಿಕೆಯಾಗಿರುವ ಅರ್ಜಿಗಳು ಎಷ್ಟು ; ಎಷ್ಟು ಮಾಜಿ ಸೈನಿಕರಿಗೆ ಭೂ ಮಂಜೂರಾತಿ ನೀಡಲಾಗಿದೆ ;

ಭೂ ಮಂಜೂರಾತಿಗೆ ಬಾಕಿ ಇರುವ ಪ್ರಕರಣಗಳು ಎಷ್ಟು ; ಬಾಕಿ ಉಳಿಸಿಕೊಳ್ಳಲು ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಮನೆ ಕಂದಾಯ ಪಾವತಿಗೆ ಮಾಜಿ ಸೈನಿಕರಿಗಾಗಿ ನಿಗದಿಪಡಿಸಲಾದ ರಿಯಾಯಿತಿಯ ಶೇಕಡ ಪ್ರಮಾಣ ಎಷ್ಟು ; ಇದನ್ನು ಶೇಕಡ ೧೦೦ ಪ್ರಮಾಣಕ್ಕೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಮುಜರಾಯಿ ಇಲಾಖೆಗೆ ಸಂಬಂಧಿಸಿದ ದೇವಸ್ಥಾನಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೪ (೮೭೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಲ್ಲಿ ಮುಜರಾಯಿ ಇಲಾಖೆಗೆ ಪ್ರತಿ ಆರ್ಥಿಕ ವರ್ಷದಲ್ಲಿ ಮಂಜೂರಾದ ಅನುದಾನ ಎಷ್ಟು ; (ವಾರ್ಷಿಕವಾರು ಮಾಹಿತಿ ಒದಗಿಸುವುದು)

(ಆ) ಸದರಿ ಅನುದಾನವನ್ನು ಯಾವ ಯಾವ ಕಾರ್ಯಗಳಿಗೆ ಬಳಸಲಾಗದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿರುವ ಮುಜರಾಯಿ ಇಲಾಖೆಯ ಹಾಗೂ ಮುಜಾರಾಯೇತರ ದೇವಸ್ಥಾನಗಳ ಸಂಖ್ಯೆ ಎಷ್ಟು ಮತ್ತು ಯಾವುವು ; ಕಳೆದ ೦೪ ವರ್ಷಗಳಲ್ಲಿ ಮಂಜೂರಾದ ಅನುದಾನ ಎಷ್ಟು ; (ಮಾಹಿತಿ ಒದಗಿಸುವುದು)

(ಈ) ಕಳೆದ ೦೫ ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಯಾವ ಯಾವ ದೇವಸ್ಥಾನಗಳಿಗೆ ಎಷ್ಟು ಮೊತ್ತದ ಅನುದಾನವನ್ನು ಒದಗಿಸಲಾಗಿದೆ ; ಸದರಿ ಅನುದಾನ ಬಳಕೆ ಆಗಿದೆಯೇ ; ಆಗಿದ್ದಲ್ಲಿ ಬಳಕೆ

ಮಾಡಿಕೊಂಡ ದೇವಸ್ಥಾನಗಳ ಮಾಹಿತಿ ನೀಡುವುದು ; ಬಳಕೆ ಮಾಡಿಕೊಳ್ಳದೇ ಬಾಕಿ ಉಳಿಸಿಕೊಂಡಿರುವ ಅನುದಾನ ಎಷ್ಟು? (ದೇವಸ್ಥಾನಗಳವಾರು ಮಾಹಿತಿಯನ್ನು ಒದಗಿಸುವುದು)

## ಹಾವು ಕಡಿತ ಮತ್ತು ರೈತರ ಆತ್ಮಹತ್ಯೆ ಪ್ರಕರಣಗಳ ಪರಿಹಾರ ಮೊತ್ತದಲ್ಲಿ ವ್ಯತ್ಯಾಸವಿರುವ ಬಗ್ಗೆ

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೯೫ (೯೯೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಹಾವು ಕಡಿತದಿಂದ ದಾಖಲಾದ ಒಟ್ಟು ಪ್ರಕಣಗಳ ಸಂಖ್ಯೆ ಹಾಗೂ ಮೃತಪಟ್ಟವರ ಸಂಖ್ಯೆ ಎಷ್ಟು; (ಜಿಲ್ಲಾವಾರು ವರ್ಷವಾರು ಮಾಹಿತಿ ನೀಡುವುದು)

(ಆ) ಈವರೆವಿಗೂ ಪರಿಹಾರ ಮೊತ್ತ ಪಾವತಿಸಿರುವ ಮತ್ತು ಪಾವತಿಸಲು ಬಾಕಿಯಿರುವ ಪ್ರಕರಣಗಳ ಸಂಖ್ಯೆ ಹಾಗೂ ಪರಿಹಾರ ಪಾವತಿಸಿರುವ ಮತ್ತು ಪಾವತಿಸಲು ಬಾಕಿಯಿರುವ ಮೊತ್ತ ಎಷ್ಟು; (ಜಿಲ್ಲಾವಾರು ವರ್ಷವಾರು ಮಾಹಿತಿ ನೀಡುವುದು)

(ಇ) ಹಾಗೆಯೇ ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ದಾಖಲಾದ ರೈತರ ಆತ್ಮಹತ್ಯೆ ಪ್ರಕರಣಗಳ ಸಂಖ್ಯೆ ಎಷ್ಟು ; ಈವರೆವಿಗೂ ಪರಿಹಾರ ಮೊತ್ತ ಪಾವತಿಸಿರುವ ಮತ್ತು ಪಾವತಿಸಲು ಬಾಕಿಯಿರುವ ಪ್ರಕರಣಗಳ ಸಂಖ್ಯೆ ಹಾಗೂ ಪರಿಹಾರ ಪಾವತಿಸಿರುವ ಮತ್ತು ಪಾವತಿಸಲು ಬಾಕಿಯಿರುವ ಮೊತ್ತ ಎಷ್ಟು ; (ಜಿಲ್ಲಾವಾರು ವರ್ಷವಾರು ಮಾಹಿತಿ ನೀಡುವುದು)

(ಈ) ಹಾವು ಕಡಿತ ಹಾಗೂ ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಮೃತಪಟ್ಟವರಿಗೆ ಪಾವತಿಸಲಾಗುವ ಪರಿಹಾರ ಮೊತ್ತ ಎಷ್ಟು ;

(ಉ) ಹಾವು ಕಡಿತದಂತಹ ಆಕಸ್ಮಿಕ ಮತ್ತು ರೈತರ ಆತ್ಮಹತ್ಯೆಯಂತಹ "ಜೀವ ಹಾನಿ" ಪ್ರಕರಣಗಳಲ್ಲಿ ಪರಿಹಾರ ಮೊತ್ತ ನಿಗಧಿಪಡಿಸುವಾಗ ಅನುಸರಿಸಲಾಗುವ ಮಾನದಂಡಗಳೇನು : (ಸಂಪೂರ್ಣ ವಿವರ ನೀಡುವುದು)

(ಊ) ಈ ಎರಡೂ ಪ್ರಕರಣಗಳಲ್ಲೂ ರೈತರು ಮತ್ತು ಕೃಷಿ ಕಾರ್ಮಿಕರ ಕುಟುಂಬಗಳೇ ಜೀವ ಕಳೆದುಕೊಳ್ಳುತ್ತಾರೆ, ಹೀಗಾಗಿ ನಿಗದಿಪಡಿಸಲಾದ ಪರಿಹಾರ ಮೊತ್ತದಲ್ಲಿ ವ್ಯತ್ಯಾಸವಿರುವುದೇಕೆ ; ಇದನ್ನು ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು ? (ಸಂಪೂರ್ಣ ಮಾಹಿತಿ ನೀಡುವುದು)

## ರಾಷ್ಟ್ರೀಯ ಹೆದ್ದಾರಿ–೨೭೫ರಲ್ಲಿ ಅಂಡರ್‌ಪಾಸ್ ಮತ್ತು ಓವರ್ ಪಾಸ್ ಕಾಮಗಾರಿಗಳನ್ನು ಪೂರ್ಣಗೊಳಿಸುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೯೬ (೯೪೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿ–೨೭೫ರ ನಿರ್ಮಾಣಕ್ಕೆ ಬಳಕೆಯಾಗಿರುವ ಅರಣ್ಯ ಪ್ರದೇಶದ ಒಟ್ಟು ವಿಸ್ತೀರ್ಣ ಎಷ್ಟು; ಎಲ್ಲೆಲ್ಲಿ ಎಷ್ಟು ಅರಣ್ಯ ಪ್ರದೇಶ ಬಳಕೆ ಆಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ವನ್ಯಜೀವಿಗಳ ಚಲನವಲನಕ್ಕೆ ಅನುಗುಣವಾಗಿ ಹೆದ್ದಾರಿ ದಾಟಲು ಅನುಕೂಲವಾಗುವಂತೆ ಯಾವ್ಯಾವ ಸ್ಥಳಗಳಲ್ಲಿ ಅಂಡರ್ ಪಾಸ್ ಮತ್ತು ಓವರ್ ಪಾಸ್‌ಗಳನ್ನು ನಿರ್ಮಿಸಲು ಅವಕಾಶ ಕಲ್ಪಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಶ್ರೀರಂಗಪಟ್ಟಣ ತಾಲ್ಲೂಕಿನ ಸಬ್ಬನಕುಪ್ಪೆ ಗ್ರಾಮ ಸಮೀಪ ಸೇರಿದಂತೆ ಹೆದ್ದಾರಿಯ ವಿವಿಧ ಸ್ಥಳಗಳಲ್ಲಿ ನಿರ್ಮಿಸಬೇಕಿದ್ದ ಅಂಡರ್ ಪಾಸ್

ಮತ್ತು ಓವರ್ ಪಾಸ್ ಕಾಮಗಾರಿಗಳು ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸ್ಥಗಿತಗೊಂಡಿರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ತೆಗೆದುಕೊಂಡಿರುವ ಕ್ರಮಗಳೇನು ; ಯಾವ ಕಾಲಮಿತಿಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಉ) ಅಂಡರ್ ಪಾಸ್ ಅಥವಾ ಓವರ್ ಪಾಸ್ ಮೂಲಕ ಹೆದ್ದಾರಿ ದಾಟಲು ಸಾಧ್ಯವಾಗದೇ ಹೆದ್ದಾರಿ ಮೂಲಕ ರಸ್ತೆ ದಾಟುವ ಸಂದರ್ಭದಲ್ಲಿ ಮೃತಪಟ್ಟಿರುವ ವನ್ಯಜೀವಿಗಳ ಸಂಖ್ಯೆ ಎಷ್ಟು; ಯಾವ್ಯಾವ ಪ್ರಾಣಿಗಳು ಮೃತಪಟ್ಟಿವೆ ವಿವರ ನೀಡುವುದು ;

(ಊ) ಮಂಡ್ಯ ತಾಲ್ಲೂಕಿನ ಇಂಡುವಾಳು ಗ್ರಾಮದ ಬಳಿ ಸೇರಿದಂತೆ ವಿವಿಧ ಸ್ಥಳಗಳಲ್ಲಿ ಅಪೂರ್ಣವಾಗಿರುವ ಸರ್ವೀಸ್ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಲು ಇರುವ ತಾಂತ್ರಿಕ ತೊಡಕುಗಳೇನು ; ಕಾಮಗಾರಿ ಪೂರ್ಣಗೊಳಿಸಲು ತೆಗೆದುಕೊಂಡಿರುವ ಕ್ರಮಗಳೇನು ?

## ಮುಜರಾಯಿ ದೇವಾಲಯಗಳ ಚರಾಸ್ತಿ ಮತ್ತು ಸ್ಥಿರಾಸ್ತಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೯೭ (೯೪೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಗೆ ಒಳಪಡುವ ಅಧಿಸೂಚಿತ ಪ್ರವರ್ಗ 'ಎ' 'ಬಿ' ಮತ್ತು 'ಸಿ' ವರ್ಗದ ದೇವಾಲಯಗಳ ಒಟ್ಟು ಸಂಖ್ಯೆ ಎಷ್ಟು ;

(ಆ) ಈ ಪೈಕಿ ಮೇಲ್ಕಾಣಿಸಿದ ಜಿಲ್ಲೆಗಳಲ್ಲಿರುವ ಅಧಿಸೂಚಿತ ಪ್ರವರ್ಗ 'ಎ' ವರ್ಗದ ದೇವಾಲಯಗಳ ಚರಾಸ್ತಿ (ಚಿನ್ನ ಮತ್ತು ಬೆಳ್ಳಿ ಅಭರಣಗಳ ಪ್ರಮಾಣ) ಹಾಗೂ ಸ್ಥಿರಾಸ್ತಿಗಳ ವಿವರ ಒದಗಿಸುವುದು ; (ಜಿಲ್ಲಾವಾರು ದೇವಾಲಯವಾರು ಮಾಹಿತಿ ನೀಡುವುದು)

(ಇ) ಹಾಗೆಯೇ ಸದರಿ ಜಿಲ್ಲೆಗಳಲ್ಲಿರುವ ಪ್ರವರ್ಗ 'ಎ' ವರ್ಗದ ದೇವಾಲಯಗಳಲ್ಲಿ ಹಣಕಾಸಿಗೆ ಸಂಬಂಧಿಸಿದಂತೆ ನಿಶ್ಚಿತ ಠೇವಣಿಯಲ್ಲಿರುವ ಮೊತ್ತ ಹಾಗೂ ವಿವಿಧ ಉಳಿತಾಯ ಖಾತೆಯಲ್ಲಿರುವ ಮೊತ್ತ ಎಷ್ಟು ; (ಜಿಲ್ಲಾವಾರು, ದೇವಾಲಯವಾರು ಸಂಪೂರ್ಣ ವಿವರ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಮೇಲ್ಕಂಡ ಜಿಲ್ಲೆಗಳಲ್ಲಿರುವ ಪ್ರವರ್ಗ 'ಎ' ವರ್ಗದ ದೇವಾಲಯಗಳಿಂದ ಸಂಗ್ರಹವಾಗಿರುವ ವಾರ್ಷಿಕ ವರಮಾನ ಎಷ್ಟು ; (ಜಿಲ್ಲಾವಾರು, ವರ್ಷವಾರು, ದೇವಾಲಯವಾರು ಸಂಪೂರ್ಣ ವಿವರ ನೀಡುವುದು)

(ಉ) ಈ ಪೈಕಿ ದಾಸೋಹ ವ್ಯವಸ್ಥೆಯಿರುವ ದೇವಾಲಯಗಳು ಯಾವುವು ; ಹೆಚ್ಚಿನ ವರಮಾನ ಇರುವ ದೇವಾಲಯಗಳಲ್ಲಿ ದಾಸೋಹ ವ್ಯವಸ್ಥೆ ಕಲ್ಪಿಸಲು ಹಾಗೂ ಮೂಲಸೌಕರ್ಯ ಕಲ್ಪಿಸಲು ಸರ್ಕಾರದ ಕ್ರಮವೇನು ;

(ಊ) ಕಳೆದ ೩ ವರ್ಷಗಳಲ್ಲಿ ಭಕ್ತರಿಗೆ ಮೂಲಸೌಕರ್ಯ ಒದಗಿಸಲು ಭರಿಸಲಾಗಿರುವ ವೆಚ್ಚ ಎಷ್ಟು ? (ವಿವರ ನೀಡುವುದು)

## ವಿಧವೆಯರು ಮತ್ತು ಹಿರಿಯ ನಾಗರೀಕರಿಗೆ ಮಾಸಿಕ ಪಿಂಚಣಿ ಸ್ಥಗಿತವಾಗಿರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೯೮ (೯೪೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ಮಾಸಿಕ ಪಿಂಚಣಿ ಪಡೆಯುತ್ತಿರುವ ವಿಧವೆಯರು ಮತ್ತು ಹಿರಿಯ ನಾಗರೀಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇವರಿಗೆ ಮಾಸಿಕ ಪಾವತಿಸುವ ಪಿಂಚಣಿ ಮೊತ್ತ ಎಷ್ಟು;

(ಇ) ಕಳೆದ ಕೆಲವು ತಿಂಗಳುಗಳಿಂದ ವಿಧವೆಯರು ಮತ್ತು ಹಿರಿಯ ನಾಗರೀಕರಿಗೆ ಪಿಂಚಣಿ ಮೊತ್ತ ಪಾವತಿಸದೇ ತಡೆ ಹಿಡಿಯಲಾಗಿದೆ ಎಂಬ ಬಗ್ಗೆ ದೂರುಗಳಿವೆ ; ಪಿಂಚಣಿ ತಡೆ ಹಿಡಿದಿರುವುದಕ್ಕೆ ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ನಿಯಮಿತವಾಗಿ ಪಿಂಚಣಿಯನ್ನು ಪಾವತಿಸಲು ತೆಗೆದುಕೊಂಡಿರುವ ಕ್ರಮಗಳೇನು ;

(ಉ) ವಿಧವೆಯರು ಮತ್ತು ಹಿರಿಯ ನಾಗರೀಕರ ಪಿಂಚಣಿ ಸೌಲಭ್ಯ ಪಡೆಯುತ್ತಿರುವವರಲ್ಲಿ ಅನರ್ಹರೂ ಇದ್ದು, ಇಂತಹ ಸಂಶಯಾತ್ಮಕ ಪ್ರಕರಣಗಳಲ್ಲಿ ಸರ್ಕಾರದ ಕ್ರಮವೇನು ; ರಾಜ್ಯದಲ್ಲಿ ಈ ಸಂಖ್ಯೆ ಎಷ್ಟಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ವಾಹನಗಳ ವಾಯುಮಾಲಿನ್ಯ ತಪಾಸಣಾ ಕೇಂದ್ರಗಳಲ್ಲಿ 'ಹಾಲೋಗ್ರಾಂ' ಕೊರತೆ ಇರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೯ (೯೪೫) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನುಮತಿಸಲಾದ ವಾಹನಗಳ ವಾಯುಮಾಲಿನ್ಯ ತಪಾಸಣಾ ಕೇಂದ್ರಗಳ ಸಂಖ್ಯೆ ಎಷ್ಟು ; 'ಹಾಲೋಗ್ರಾಂ'ಗೆ ಇರುವ ವಾರ್ಷಿಕ ಬೇಡಿಕೆ ಹಾಗೂ ಪೂರೈಕೆ ಎಷ್ಟು ; ಪ್ರತಿ ಒಂದು ಸಾವಿರ 'ಹಾಲೋಗ್ರಾಂ'ಗೆ ಸರ್ಕಾರ ನಿಗದಿಪಡಿಸಿರುವ ಶುಲ್ಕ ಎಷ್ಟು ;

(ಆ) ರಾಜ್ಯದಲ್ಲಿ ವಾಹನಗಳ ತಪಾಸಣೆ ನಡೆಸಿದ ಬಳಿಕ ನೀಡುವ ಪ್ರಮಾಣಪತ್ರಗಳಿಗೆ ಅಂಟಿಸಲು 'ಹಾಲೋಗ್ರಾಂ' ಕೊರತೆ ಕಂಡು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇದ್ದಲ್ಲಿ, ಕಾರಣಗಳೇನು ; ಯಾವ ವೇಳೆಗೆ ಈ ಸಮಸ್ಯೆಗೆ ಪರಿಹಾರ ದೊರಕಿಸಿಕೊಡಲಾಗುವುದು ; (ವಿವರ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಹೆಚ್ಚು 'ಹೊಗೆ' ಉಗುಳುವ ಎಷ್ಟು ವಾಹನಗಳಿಗೆ ದಂಡ ವಿಧಿಸಲಾಗಿದೆ ; ಸಂಗ್ರಹಿಸಲಾದ ಮೊತ್ತ ಎಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಪ್ರತಿ ಎಷ್ಟು ತಿಂಗಳಿಗೊಮ್ಮೆ ವಾಹನಗಳ ಮಾಲಿನ್ಯ ತಪಾಸಣೆ ನಡೆಸುವುದು ಕಡ್ಡಾಯವಾಗಿದೆ ; ಈ ಕುರಿತು ಸಾರಿಗೆ ನಿಯಮಗಳೇನು ?

## ರಂಗನತಿಟ್ಟು ಪಕ್ಷಿಧಾಮದ ಸಮೀಪ ರಾಷ್ಟ್ರೀಯ ಹೆದ್ದಾರಿ ನಿರ್ಮಾಣ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೦ (೯೦೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು–ಕುಶಾಲನಗರ ನಡುವೆ ನಿರ್ಮಾಣವಾಗುತ್ತಿರುವ ರಾಷ್ಟ್ರೀಯ ಹೆದ್ದಾರಿ ೨೭೫, ರಂಗನತಿಟ್ಟು ಪಕ್ಷಿಧಾಮದ ಅತ್ಯಂತ ಸಮೀಪದಲ್ಲಿ ಹಾದುಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಹೆದ್ದಾರಿ ನಿರ್ಮಾಣದಿಂದ ಪಕ್ಷಿಧಾಮದ ಪರಿಸರ ಸೂಕ್ಷ್ಮ ವಲಯದ (Eco-Sensitive Zone)ಮೇಲೆ ಉಂಟಾಗುವ ಪರಿಣಾಮಗಳ ಕುರಿತು ಪರಿಸರ ಇಲಾಖೆಯಿಂದ ವರದಿ ಪಡೆಯಲಾಗಿದೆಯೇ ;

(ಇ) ವನ್ಯಜೀವಿಗಳ ಮತ್ತು ಅಪರೂಪದ ಪಕ್ಷಿಗಳ ಸುರಕ್ಷತೆಗಾಗಿ ಯೋಜನೆಯಲ್ಲಿ ಯಾವ ಬದಲಾವಣೆಗಳನ್ನು ಮಾಡಲಾಗಿದೆ; ಪರಿಸರ ತಜ್ಞರ ಸಲಹೆಯಂತೆ ಪರ್ಯಾಯ ಮಾರ್ಗದ ಬಗ್ಗೆ ಸರ್ಕಾರ ಚಿಂತಿಸಿದೆಯೇ ?

## ವಾಹನಗಳಲ್ಲಿ ಅಕ್ರಮ ಎಲ್‌ಇಡಿ ದೀಪಗಳನ್ನು ನಿಯಂತ್ರಿಸುವ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೧ (೬೦೨) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಸೇರಿದಂತೆ ರಾಜ್ಯಾದ್ಯಂತ ಖಾಸಗಿ ವಾಹನಗಳಲ್ಲಿ ಅಕ್ರಮವಾಗಿ ಎಲ್‌ಇಡಿ ಬಾರ್‌ಗಳು(LED Bars), ಹೈ–ಇಂಟೆನ್ಸಿಟಿ ಹೆಡ್‌ಲೈಟ್‌ಗಳು ಮತ್ತು ಸೈರನ್ ಮಾದರಿಯ ಫ್ಲ್ಯಾಷರ್ ದೀಪಗಳನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಆರು ತಿಂಗಳಲ್ಲಿ ಇಂತಹ ಅಕ್ರಮ ದೀಪಗಳನ್ನು ಅಳವಡಿಸಿಕೊಂಡ ವಾಹನಗಳ ವಿರುದ್ಧ ದಾಖಲಾಗಿರುವ ಪ್ರಕರಣಗಳೆಷ್ಟು ಮತ್ತು ವಸೂಲಿ ಮಾಡಲಾದ ದಂಡದ ಮೊತ್ತವೆಷ್ಟು; (ನಗರವಾರು ವಿವರ ನೀಡುವುದು)

(ಇ) ಪ್ರಖರವಾದ ಎಲ್‌ಇಡಿ ಬೆಳಕಿನಿಂದ ಎದುರುಗಡೆ ಬರುವ ಚಾಲಕರ ಕಣ್ಣು ಕೋರೈಸಿ (Glare) ಸಂಭವಿಸುತ್ತಿರುವ ಅಪಘಾತಗಳ ಸಂಖ್ಯೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಕೈಗೊಂಡಿರುವ ಕ್ರಮಗಳೇನು ?

(ಈ) ಜನಪ್ರತಿನಿಧಿಗಳು, ನಿವೃತ್ತ ಅಧಿಕಾರಿಗಳು ಮತ್ತು ರಾಜಕೀಯ ಪ್ರಭಾವಿಗಳು ತಮ್ಮ ವಾಹನಗಳ ಮೇಲೆ ಅಕ್ರಮವಾಗಿ ಕೆಂಪು/

ನೀಲಿ ದೀಪಗಳನ್ನು ಬಳಸಿ 'ವಿಐಪಿ ಸಂಸ್ಕೃತಿ' ಪ್ರದರ್ಶಿಸುತ್ತಿರುವುದು ಸಂಚಾರ ನಿಯಮಗಳ ಉಲ್ಲಂಘನೆಯಲ್ಲವೇ ; ಇಂತಹ ಪ್ರಭಾವಿಗಳ ವಿರುದ್ಧ ಕ್ರಮ ಜರುಗಿಸಲು ಪೊಲೀಸರಿಗೆ ಮುಕ್ತ ಅವಕಾಶ ನೀಡಲಾಗಿದೆಯೇ ;

(ಉ) ಕೇವಲ ದಂಡ ವಿಧಿಸುವುದಷ್ಟೇ ಅಲ್ಲದೆ, ಅಕ್ರಮ ದೀಪಗಳನ್ನು ಮಾರಾಟ ಮಾಡುವ ಮತ್ತು ಅಳವಡಿಸುವ ಆಟೋ-ಮೊಬೈಲ್ ಶಾಪ್‌ಗಳ ವಿರುದ್ಧ ಪರವಾನಗಿ ರದ್ದುಪಡಿಸುವಂತಹ ಕಠಿಣ ಕಾನೂನು ಕ್ರಮ ಕೈಗೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಬೈಕ್ ಟ್ಯಾಕ್ಸಿಗಳ ಕಾರ್ಯಾಚರಣೆಗೆ ಸಮಗ್ರ ಮಾರ್ಗಸೂಚಿ ಮತ್ತು ನಿಯಂತ್ರಣ ಸಂಹಿತೆ ರೂಪಿಸುವ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೦೨ (೯೦೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೈಕ್ ಟ್ಯಾಕ್ಸಿಗಳ ಮೇಲಿನ ನಿರ್ಬಂಧವನ್ನು ತೆರವುಗೊಳಿಸಿರುವ ಕರ್ನಾಟಕ ಹೈಕೋರ್ಟ್‌ನ ಇತ್ತೀಚಿನ ತೀರ್ಪು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸೇವೆಯನ್ನು ಸಾರ್ವಜನಿಕ ಸಾರಿಗೆ ಅವಿಭಾಜ್ಯ ಅಂಗವೆಂದು ಪರಿಗಣಿಸಲು ಸರ್ಕಾರಕ್ಕಿರುವ ಕಾನೂನಾತ್ಮಕ ಅಡೆತಡೆಗಳೇನು ;

(ಆ) ಕೇಂದ್ರ ಸರ್ಕಾರವು ಬೈಕ್ ಟ್ಯಾಕ್ಸಿ ಸೇವೆಗಳಿಗೆ ಈಗಾಗಲೇ ಮಾರ್ಗಸೂಚಿಗಳನ್ನು ಹೊರಡಿಸಿದ್ದರೂ, ರಾಜ್ಯ ಸರ್ಕಾರವು ತನ್ನದೇ ಆದ ಸ್ಪಷ್ಟ ನೀತಿಯನ್ನು ರೂಪಿಸದೆ ನ್ಯಾಯಾಲಯದ ಮುಂದೆ "ಯಾವುದೇ ನೀತಿ ಇಲ್ಲ" ಎಂದು ತಿಳಿಸಲು ಕಾರಣಗಳೇನು ; ಇದು ಸರ್ಕಾರದ ಆಡಳಿತಾತ್ಮಕ ವೈಫಲ್ಯವಲ್ಲವೇ ;

(ಇ) ಪ್ರಸ್ತುತ ಯಾವುದೇ ಅಧಿಕೃತ ಮಾರ್ಗಸೂಚಿಗಳಿಲ್ಲದೆ ಬೈಕ್ ಟ್ಯಾಕ್ಸಿಗಳು ರಸ್ತೆಗಿಳಿದಿರುವುದರಿಂದ, ಪ್ರಯಾಣಿಕರ ಸುರಕ್ಷತೆ (Safety measures) ಮತ್ತು ವಿಮೆಯ (Insurances) ಜವಾಬ್ದಾರಿ ಯಾರದ್ದು ; ಈ ಕುರಿತು ಸರ್ಕಾರವು ತುರ್ತಾಗಿ ಸಮಗ್ರ 'ನಿಯಂತ್ರಣ ಸಂಹಿತೆ'ಯನ್ನು ರೂಪಿಸಲಿದೆಯೇ ;

(ಈ) ಬೈಕ್ ಟ್ಯಾಕ್ಸಿ ಚಾಲಕರಿಗೆ ಪೊಲೀಸ್ ಪರಿಶೀಲನೆ, ಲಿಂಗಸೂಕ್ಷ್ಮತೆ (Gender Sensitivity) ತರಬೇತಿ ಮತ್ತು ರಿಯಲ್ ಟೈಮ್ ಡಿಜಿಟಲ್ ಟ್ರ್ಯಾಕಿಂಗ್‌ನಂತಹ ಸುರಕ್ಷತಾ ಕ್ರಮಗಳನ್ನು ಕಡ್ಡಾಯಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಆಟೋ ರಿಕ್ಷಾ ಮತ್ತು ಕ್ಯಾಬ್ ಚಾಲಕರ ಹಿತರಕ್ಷಣೆಯ ಜೊತೆಗೆ, ಬೈಕ್ ಟ್ಯಾಕ್ಸಿಗಳಿಗೂ ಸಮಾನ ಅವಕಾಶ ಕಲ್ಪಿಸಿ 'ಸಂಯೋಜಿತ ನಗರ ಸಾರಿಗೆ ವ್ಯವಸ್ಥೆ'ಯನ್ನು (Integrated Urban Transport System) ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಿ.ಟಿ.ಎಂ ಲೇಔಟ್ ಉಪ ನೋಂದಣಾಧಿಕಾರಿ ಕಛೇರಿಯಲ್ಲಿ ನಡೆದಿರುವ ಅಕ್ರಮದ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೦೩ (೯೮೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಜಿಲ್ಲೆ ಬಿ.ಟಿ.ಎಂ ಲೇಔಟ್ ಉಪ ನೋಂದಣಾಧಿಕಾರಿ ಕಛೇರಿಯಲ್ಲಿ ೨೦೨೨ರ ಪೂರ್ವದಲ್ಲಿ ಅಕ್ರಮ ನೋಂದಣಿ ಮಾಡಿರುವುದು ನಿಜವೇ ; (ಪ್ರಕರಣದ ವಿವರಗಳನ್ನು ಒದಗಿಸುವುದು)

(ಆ) ಈ ಅಕ್ರಮ ನೋಂದಣಿಯಲ್ಲಿ ಭಾಗಿಯಾಗಿರುವವರು ಯಾರು ; ಯಾವ ಕಾರಣದಿಂದ ಮಾಡಲಾಗಿದೆ ; (ವಿವರಗಳನ್ನು ದಾಖಲೆಗಳೊಂದಿಗೆ ನೀಡುವುದು)

(ಇ) ಈ ಪ್ರಕರಣದ ವಿಚಾರಣೆಯಲ್ಲಿ ಇಲ್ಲಿಯವರೆಗೂ ಆಗಿರುವ ಪ್ರಗತಿ ಏನು ; (ವಿವರಗಳನ್ನು ಒದಗಿಸುವುದು)

(ಈ) ಈ ಅಕ್ರಮ ನೋಂದಣಿಯಲ್ಲಿ ಸರ್ಕಾರಿ ಅಧಿಕಾರಿಗಳು ಭಾಗಿಯಾಗಿರುವುದರಿಂದ ಅವರುಗಳನ್ನು ನೌಕರಿಯಿಂದ ವಜಾ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಪಶುಸಂಗೋಪನೆ ಹಾಗೂ ಪಶು ವೈದ್ಯಕೀಯ ಸೇವಾ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೪ (೯೬೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಶುಸಂಗೋಪನೆ ಹಾಗೂ ಪಶುವೈದ್ಯಕೀಯ ಸೇವಾ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಪ್ರಸ್ತುತ ಭರ್ತಿಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ಹಾಗೂ ಖಾಲಿಯಿರುವ ಹುದ್ದೆಗಳೆಷ್ಟು ;

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಂಜೂರಾದ ಸಿಬ್ಬಂದಿಗಳ ಪೈಕಿ ಸುಮಾರು 84% ಹುದ್ದೆಗಳು ಖಾಲಿಯಿರುವುದರಿಂದ ರೈತರು ಹೈನುಗಾರಿಕೆಯಿಂದ ಹಿಂದೆ ಸರಿಯುತ್ತಿರುವುದು ಹಾಗೂ ಹೈನುಗಾರಿಕೆ ಕ್ಷೇತ್ರ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದರ ಪರಿಣಾಮವಾಗಿ ಜಿಲ್ಲೆಯಲ್ಲಿ ಹಾಲು ಉತ್ಪಾದನೆ ಮೇಲೆ ಏನೆಲ್ಲ ಪರಿಣಾಮಗಳು ಉಂಟಾಗಿವೆ ಎಂಬ ಕುರಿತು ಸರ್ಕಾರದ ಮೌಲ್ಯಮಾಪನ ವರದಿ ಇದೆಯೇ ;

(ಇ) ದಕ್ಷಿಣ ಕನ್ನಡ ಜಿಲ್ಲೆಯ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳಲ್ಲಿ ಸಿಬ್ಬಂದಿ ಕೊರತೆ, ವೈದ್ಯರ ಲಭ್ಯತೆ ವಿಳಂಬ ಹಾಗೂ ಮೂಲಸೌಲಭ್ಯಗಳ ಅಭಾವದಿಂದ ಸೇವೆ ನೀಡಲು ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಜಿಲ್ಲೆಯಲ್ಲಿ ಖಾಲಿ ಇರುವ ಪಶುವೈದ್ಯರ ಹಾಗೂ ಇತರೆ ಸಿಬ್ಬಂದಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ವೇಳಾಪಟ್ಟಿಯನ್ನು ನಿಗದಿಪಡಿಸಿದೆ ; ತಾತ್ಕಾಲಿಕವಾಗಿ ಹೊರಗುತ್ತಿಗೆ/ಒಪ್ಪಂದ ಆಧಾರದ ನೇಮಕಾತಿ ಮೂಲಕ ಸೇವೆಯನ್ನು ಬಲಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆಯೇ ; ಈ ಕುರಿತು ಯಾವಾಗ ಕ್ರಮವಹಿಸಲಾಗುವುದು ;

(ಉ) ಒಟ್ಟಾರೆಯಾಗಿ ರಾಜ್ಯದಲ್ಲಿ ಹೈನುಗಾರಿಕೆ ಕುಸಿತವಾಗುತ್ತಿರುವ ಹಿನ್ನೆಲೆಯಲ್ಲಿ ರೈತರಿಗೆ ತಕ್ಷಣ ಪಶುವೈದ್ಯಕೀಯ ಸೇವೆ ಲಭ್ಯವಾಗುವಂತೆ ಹಾಗೂ ಹಾಲು ಉತ್ಪಾದನೆ ಹೆಚ್ಚಿಸಲು ಸರ್ಕಾರ ಯಾವ ವಿಶೇಷ ಕಾರ್ಯಯೋಜನೆ ರೂಪಿಸಿದೆ ?

## ಮೀನುಗಾರಿಕೆ ಇಲಾಖೆಯಲ್ಲಿ ರಕ್ಷಣಾ ಸಾಮಾಗ್ರಿ ಪೂರೈಕೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೫ (೯೬೪) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೀನುಗಾರಿಕೆ ಇಲಾಖೆಯ ವ್ಯಾಪ್ತಿಯಲ್ಲಿ ಸಮುದ್ರ ಹಾಗೂ ನದಿಗಳಲ್ಲಿ ದುರಂತಗಳು ಸಂಭವಿಸಿದ ಸಂದರ್ಭದಲ್ಲಿ ರಕ್ಷಣಾ ಕಾರ್ಯಗಳಿಗೆ ಉಪಯೋಗಿಸಲು ಅಗತ್ಯವಿದ್ದು, ಖರೀದಿಸಲು

ಅನುಮತಿಸಲಾದ ರಕ್ಷಣಾ ಉಪಕರಣಗಳು ಯಾವುವು ; ಈ ಉಪಕರಣಗಳನ್ನು ಖರೀದಿಸಲು ಅಧಿಕೃತ ಪ್ರಾಧಿಕಾರ ಯಾವುದು ;

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಇದುವರೆಗೆ ರಕ್ಷಣಾ ಉಪಕರಣಗಳ ಖರೀದಿಗೆ ಬಳಸಲಾದ ಒಟ್ಟು ಅನುದಾನ ಎಷ್ಟು; ಯಾವ ಯಾವ ಉಪಕರಣಗಳನ್ನು ಖರೀದಿಸಲಾಗಿದೆ; ಈ ಖರೀದಿಯನ್ನು ಯಾವ ಪ್ರಾಧಿಕಾರ ಮಾಡಿದೆ ; ಖರೀದಿಸಿದ ಉಪಕರಣಗಳ ಸಂಖ್ಯೆ ಮತ್ತು ಗುಣಮಟ್ಟ ಸಮರ್ಪಕವಾಗಿರುವುದನ್ನು ಪರಿಶೀಲಿಸಿದೆಯೇ ;

(ಇ) ದುರಂತಗಳು ಸಂಭವಿಸಿದ ಸಂದರ್ಭಗಳಲ್ಲಿ ರಕ್ಷಣಾ ಕಾರ್ಯಕ್ಕಾಗಿ ಖಾಸಗಿ ಮುಳುಗು ತಜ್ಞರನ್ನು ಬಳಸಿಕೊಳ್ಳಲಾಗುತ್ತಿದೆಯೇ ; ಬಳಸುತ್ತಿದ್ದರೆ, ಮುಂಜಾಗ್ರತಾ ಕ್ರಮವಾಗಿ ಅವರಿಗೆ ಯಾವ ತರಬೇತಿ ಮತ್ತು ಯಾವ ರೀತಿಯ ರಕ್ಷಣಾ ಉಪಕರಣಗಳನ್ನು ನೀಡಲಾಗುತ್ತಿದೆ ; ಅನೇಕ ಕಡೆ ನಿಗದಿತ ರಕ್ಷಣಾ ಉಪಕರಣಗಳ ಕೊರತೆಯಿಂದ ಕಾರ್ಯಾಚರಣೆಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಸರ್ಕಾರದಿಂದ ಅಧಿಕೃತಗೊಂಡ ಖಾಸಗಿ ಮುಳುಗು ತಜ್ಞರಿಗೆ ಕಾರ್ಯಾಚರಣೆಗೆ ಅನುಕೂಲವಾಗುವಂತೆ ಅತ್ಯಾಧುನಿಕ ಕನ್ನಡಕಗಳು ಹಾಗೂ ನೀರಿನಾಳದಿಂದ ಮೇಲಿರುವವರಿಗೆ ಸಂದೇಶ ರವಾನಿಸಲು ಸಹಾಯಕ ಸಾಧನಗಳನ್ನು ಖರೀದಿಸಿ ಒದಗಿಸುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಇವುಗಳನ್ನು ಯಾವ ಕಾಲಮಿತಿಯೊಳಗೆ ಒದಗಿಸಲಾಗುವುದು ?

# ರಾಜ್ಯದಲ್ಲಿ ಕಾಲುದಾರಿಗಳು ಮತ್ತು ವಿವಿಧ ರೀತಿಯ ರಸ್ತೆಗಳನ್ನು ಗ್ರಾಮ ನಕ್ಷೆಯಲ್ಲಿ ದಾಖಲಿಸುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೬ (೯೬೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಹಾದು ಹೋಗುವ ಕಾಲುದಾರಿಗಳು ಮತ್ತು ವಿವಿಧ ರೀತಿಯ ರಸ್ತೆಗಳು ಗ್ರಾಮ ನಕ್ಷೆಯಲ್ಲಿ ದಾಖಲಿಸದೇ ಇರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇಂತಹ ಪ್ರಕರಣಗಳನ್ನು ಆಯಾಯ ಜಿಲ್ಲಾ ಮಟ್ಟದಲ್ಲಿ ಕಂದಾಯ ದಾಖಲೆಗಳಲ್ಲಿ ದಾಖಲಿಸಿ ಸಮಸ್ಯೆ ಪರಿಹರಿಸಲು ಸರ್ಕಾರ ಯಾವ ರೀತಿಯ ಕ್ರಮವಹಿಸುತ್ತಿದೆ ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಹಲವು ವರ್ಷಗಳಿಂದ ಗ್ರಾಮ ಪಂಚಾಯಿತಿ, ತಾಲ್ಲೂಕು/ಜಿಲ್ಲಾ ಪಂಚಾಯಿತಿ, ಶಾಸಕರ, ಸಂಸದರ ಅನುದಾನಗಳಡಿ ರಸ್ತೆಗಳನ್ನು ಅಭಿವೃದ್ಧಿಪಡಿಸಲಾದರೂ, ಇನ್ನೂ ಖಾಸಗಿ ಜಮೀನುಗಳ ಮೂಲಕ ಹಾದು ಹೋಗುವ ಸಾರ್ವಜನಿಕ ರಸ್ತೆಗಳಾಗಿ ಅಧಿಕೃತ ದಾಖಲೆ ಮಾಡದಿರುವ ಪ್ರಕರಣಗಳು ಎಷ್ಟು ; ಅದಕ್ಕೆ ಕಾರಣಗಳೇನು ; ಯಾವಾಗ ದಾಖಲಿಸಲಾಗುವುದು ;

(ಇ) ಈ ಕಾಲುದಾರಿ ಮತ್ತು ರಸ್ತೆಗಳು ಗ್ರಾಮ ನಕ್ಷೆಯಲ್ಲಿ ಅಧಿಕೃತವಾಗಿ ದಾಖಲಿಸದೇ ಇರುವುದರಿಂದ ರಸ್ತೆ ಅಭಿವೃದ್ಧಿಗೆ ಅಡ್ಡಿಯಾಗಿರುವುದು, ವ್ಯಾಜ್ಯಗಳಲ್ಲಿ ಸಾರ್ವಜನಿಕ ರಸ್ತೆ ಎಂದು ಸಾಬೀತುಪಡಿಸಲು ತೊಂದರೆ, ಭೂಪರಿವರ್ತನೆ ಹಾಗೂ ಬಡಾವಣೆ ನಕ್ಷೆ ಅನುಮೋದಿಸುವಲ್ಲಿ ಅಡಚಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ರಾಜ್ಯದ ಎಲ್ಲಾ ನಗರ ಮತ್ತು ಗ್ರಾಮ ಪಂಚಾಯತ್ ವ್ಯಾಪ್ತಿಯ ಎಲ್ಲಾ ಕಾಲುದಾರಿಗಳು ಮತ್ತು ರಸ್ತೆಗಳ ನಿಖರ ವಿವರಗಳನ್ನು ಗ್ರಾಮ ನಕ್ಷೆಯಲ್ಲಿ ದಾಖಲಿಸಲು ಕಂದಾಯ ಇಲಾಖೆಯು ಯಾವ ನಿರ್ದೇಶನಗಳನ್ನು ನೀಡಿದೆ ; ಈ ಪ್ರಕ್ರಿಯೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ರಾಜ್ಯದ ಮುಜರಾಯಿ (ಧಾರ್ಮಿಕ ದತ್ತಿ) ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೭ (೯೬೬) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮುಜರಾಯಿ (ಧಾರ್ಮಿಕ ದತ್ತಿ) ಇಲಾಖೆಯ ಅತಿ ಹೆಚ್ಚು ಆದಾಯ ಹೊಂದಿರುವ ದೇವಾಲಯಗಳು ಯಾವುವು ; ಅವುಗಳಿಗೆ ಮಂಜೂರಾದ ಹುದ್ದೆಗಳ ಸಂಖ್ಯೆಯೆಷ್ಟು ; ಭರ್ತಿಯಾಗಿರುವ ಹುದ್ದೆಗಳೆಷ್ಟು ; ಬಾಕಿಯಿರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ;

(ಆ) ರಾಜ್ಯದ ಮುಜರಾಯಿ (ಧಾರ್ಮಿಕ ದತ್ತಿ) ಇಲಾಖೆಯ ಅತಿ ಹೆಚ್ಚು ಆದಾಯ ಹೊಂದಿರುವ 10 ದೇವಾಲಯಗಳಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ 6 ದೇವಾಲಯಗಳು ಸೇರಿದ್ದರೂ ಅವುಗಳಿಗೆ ಪೂರ್ಣ ಪ್ರಮಾಣದ ಅಧಿಕಾರಿ ಸಿಬ್ಬಂದಿ ನೇಮಿಸದಿರಲು ಕಾರಣಗಳೇನು ; ಬಾಕಿಯಿರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಎ.ಬಿ.ಸಿ ಗ್ರೇಡ್ ದೇವಾಲಯಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಮಂಜೂರಾದ ಅಧಿಕಾರಿಗಳು/ಸಿಬ್ಬಂದಿ ಹುದ್ದೆಗಳ ಸಂಖ್ಯೆ ಎಷ್ಟು ; ಪ್ರಸ್ತುತ

ಭರ್ತಿಯಾಗಿರುವ, ಪ್ರಭಾರದಲ್ಲಿರುವ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು ; ಒಟ್ಟು ವಾರ್ಷಿಕ ಆದಾಯ ಎಷ್ಟು ಲಭಿಸುತ್ತಿದೆ ; ಸದರಿ ಆದಾಯವನ್ನು ಯಾವ ಮಾರ್ಗಸೂಚಿಗಳಡಿ ವೆಚ್ಚ ಮಾಡಲಾಗುತ್ತಿದೆ ;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ 'ಎ' ಗ್ರೇಡ್ ದೇವಾಲಯುಗಳಿಗೆ ಕಾರ್ಯನಿರ್ವಹಣಾಧಿಕಾರಿ (ಇಒ) ಹುದ್ದೆಗಳನ್ನು ಮಂಜೂರು ಮಾಡಿದ್ದರೂ, ಕೆಲವು ದೇವಾಲಯಗಳಲ್ಲಿ ನೇಮಕ ಮಾಡದೇ ಇರುವುದಕ್ಕೆ ಕಾರಣವೇನು ; ಯಾವಾಗ ನೇಮಕಾತಿ ಮಾಡಲಾಗುವುದು ;

(ಉ) ರಾಜ್ಯದ (ಧಾರ್ಮಿಕ ದತ್ತಿ) ಸಹಾಯಕ ಆಯುಕ್ತ ಕಛೇರಿಗಳಲ್ಲಿ ಮಂಜೂರಾದ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು ; ಧಾರ್ಮಿಕ ಕೇಂದ್ರಗಳಲ್ಲಿ ವರ್ಷಪೂರ್ತಿ ನಡೆಯುವ ಉತ್ಸವಗಳು, ಜೀರ್ಣೋದ್ಧಾರ ಹಾಗೂ ಇತರೆ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಲು ಅಗತ್ಯ ಸಿಬ್ಬಂದಿ ನೇಮಕ ಹಾಗೂ ಆಡಳಿತ ಬಲಪಡಿಸಲು ಸರ್ಕಾರ ಯಾವ ತುರ್ತು ಕ್ರಮಗಳನ್ನು ಯಾವ ಕಾಲಮಿತಿಯಲ್ಲಿ ಕೈಗೊಳ್ಳಲಿದೆ ?

## ಬೀದರ್ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಸಮರ್ಪಕ ಬಸ್ ಸೌಲಭ್ಯ ಕೊರತೆ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೮ (೯೧೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಪ್ರಸ್ತುತ ಎಷ್ಟು ಗ್ರಾಮಗಳು ಕೆ.ಕೆ.ಆರ್.ಟಿ.ಸಿ (KKRTC) ಬಸ್ ಸೌಲಭ್ಯದಿಂದ ವಂಚಿತವಾಗಿವೆ ; ಈ ಪೈಕಿ ಕನಿಷ್ಠ ಮೂಲಭೂತ ಸಾರಿಗೆ ವ್ಯವಸ್ಥೆಯೂ ಇಲ್ಲದ ಗ್ರಾಮಗಳ ಪಟ್ಟಿಯನ್ನು ಒದಗಿಸುವುದು ;

(ಆ) 2025–26ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶಗಳ ನಡುವೆ ಎಷ್ಟು ಹೊಸ ಬಸ್ ಮಾರ್ಗಗಳನ್ನು (New Routes) ಪ್ರಾರಂಭಿಸಲು ಅನುಮೋದನೆ ನೀಡಲಾಗಿದೆ ; ಈ ಹೊಸ ಮಾರ್ಗಗಳ ಆಯ್ಕೆಗೆ ಮಾನದಂಡಗಳೇನು ;

(ಇ) ಶಾಲಾ–ಕಾಲೇಜು ವಿದ್ಯಾರ್ಥಿಗಳ ದಟ್ಟಣೆಯನ್ನು ಪರಿಗಣಿಸಿ, ಬೀದರ್ ಜಿಲ್ಲೆಯಲ್ಲಿ 'ವಿದ್ಯಾರ್ಥಿ ವಿಶೇಷ' (Student Special) ಬಸ್‌ಗಳನ್ನು ಹೆಚ್ಚಿಸಲು ಕೈಗೊಂಡಿರುವ ಕ್ರಮಗಳೇನು ; ಕಳೆದ ಒಂದು ವರ್ಷದಲ್ಲಿ ಎಷ್ಟು ಹೆಚ್ಚುವರಿ ಟ್ರಿಪ್‌ಗಳನ್ನು ಮಂಜೂರು ಮಾಡಲಾಗಿದೆ ;

(ಈ) ಬೀದರ್ ವಿಭಾಗದಲ್ಲಿ ಪ್ರಸ್ತುತ ಚಾಲನೆಯಲ್ಲಿರುವ ಬಸ್‌ಗಳ ಪೈಕಿ ೧೦ ವರ್ಷಕ್ಕೂ ಹಳೆಯದಾದ ಮತ್ತು ನಿಗದಿತ ಕಿಲೋಮೀಟರ್ ಪೂರೈಸಿರುವ ಬಸ್‌ಗಳ ಸಂಖ್ಯೆ ಎಷ್ಟು ; ಇವುಗಳನ್ನು ಬದಲಾಯಿಸಲು ಹೊಸ ಬಸ್‌ಗಳ ಹಂಚಿಕೆಯಲ್ಲಿ ಜಿಲ್ಲೆಗೆ ಆದ್ಯತೆ ನೀಡಲಾಗಿದೆಯೇ ;

(ಉ) ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (KKRDB) ಅಥವಾ ಸಾರಿಗೆ ಇಲಾಖೆಯ ವತಿಯಿಂದ ಬೀದರ್ ಜಿಲ್ಲೆಗೆ ೨೦೨೫–೨೬ನೇ ಸಾಲಿಗೆ ವಿಶೇಷವಾಗಿ ಎಷ್ಟು ಹೊಸ ಬಸ್‌ಗಳನ್ನು (New Fleet) ಮಂಜೂರು ಮಾಡಲಾಗಿದೆ ; ಇದರಲ್ಲಿ ಸಾಮಾನ್ಯ ಮತ್ತು ಹವಾನಿಯಂತ್ರಿತ/ಇ–ಬಸ್‌ಗಳ ಅನುಪಾತ ಎಷ್ಟು ?

## ಬೀದರ್ ಜಿಲ್ಲೆಯಲ್ಲಿ ಹಾಳಾಗಿರುವ ಪ್ರಮುಖ ರಸ್ತೆ ಮತ್ತು ಸೇತುವೆಗಳ ಅಭಿವೃದ್ಧಿ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೯ (೯೧೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಪ್ರಸ್ತುತ ಸಂಚಾರಕ್ಕೆ ಯೋಗ್ಯವಲ್ಲದ ಅಥವಾ ತುರ್ತು ದುರಸ್ತಿ ಅಗತ್ಯವಿರುವ ರಾಜ್ಯ ಹೆದ್ದಾರಿ (SH), ಜಿಲ್ಲಾ ಮುಖ್ಯ ರಸ್ತೆ (MDR) ಮತ್ತು ಸೇತುವೆಗಳ ಅಧಿಕೃತ ಪಟ್ಟಿ ಸರ್ಕಾರದ ಬಳಿ ಇದೆಯೇ ; ಇದ್ದಲ್ಲಿ, ಕಳೆದ ಒಂದು ವರ್ಷದಲ್ಲಿ ಸರ್ಕಾರ ನಡೆಸಿದ ಸಮೀಕ್ಷೆಯ ವರದಿ ಒದಗಿಸುವುದು ;

(ಆ) 2025–26ನೇ ಸಾಲಿನ ಬಜೆಟ್ ನಲ್ಲಿ ಬೀದರ್ ಜಿಲ್ಲೆಯ ರಸ್ತೆ ಮತ್ತು ಸೇತುಗಳ ಅಭಿವೃದ್ಧಿಗಾಗಿ (New Construction & Upgradation) ಮೀಸಲಿಟ್ಟಿರುವ ಒಟ್ಟು ಅನುದಾನ ಎಷ್ಟು ; ಇದರಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (KKRDB) ವತಿಯಿಂದ ಬಿಡುಗಡೆಯಾದ ವಿಶೇಷ ಅನುದಾನದ ಪಾಲು ಎಷ್ಟು ;

(ಇ) ಕಳೆದ ಮಳೆಗಾಲದಲ್ಲಿ ಬೀದರ್ ಜಿಲ್ಲೆಯಲ್ಲಿ ಹಾನಿಗೊಳಗಾದ ರಸ್ತೆ ಮತ್ತು ಸೇತುವೆಗಳ ದುರಸ್ತಿಗೆ (Flood Damage Restoration) ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ತಾತ್ಕಾಲಿಕ ದುರಸ್ತಿಗಿಂತ ಹೆಚ್ಚಾಗಿ, ಶಾಶ್ವತ ಪರಿಹಾರಕ್ಕಾಗಿ (Permanent Restoration) ಎಷ್ಟು ಕ್ರಿಯಾಯೋಜನೆಗಳನ್ನು ರೂಪಿಸಲಾಗಿದೆ ;

(ಈ) ಪ್ರಸ್ತುತ ಜಿಲ್ಲೆಯಲ್ಲಿ ನಡೆಯುತ್ತಿರುವ ಮತ್ತು ಅನುಮೋದನೆಗೊಂಡಿರುವ ರಸ್ತೆ / ಸೇತುವೆ ಕಾಮಗಾರಿಗಳನ್ನು ಪೂರ್ಣಗೊಳಿಸಲು ನಿಗದಿಪಡಿಸಲಾದ ಕಾಲಮಿತಿ (Deadline) ಎಷ್ಟು; ವಿಳಂಬವಾಗಿರುವ ಕಾಮಗಾರಿಗಳ ಬಗ್ಗೆ ಗುತ್ತಿಗೆದಾರರ ಮೇಲೆ ಕೈಗೊಂಡಿರುವ ಶಿಸ್ತು ಕ್ರಮಗಳೇನು ;

(ಉ) ಬೀದರ್ ಜಿಲ್ಲೆಯ ರಸ್ತೆ ಕಾಮಗಾರಿಗಳ ಗುಣಮಟ್ಟವನ್ನು ಖಾತರಿಪಡಿಸಲು ಯಾವ 'ಮೂರನೇ ವ್ಯಕ್ತಿ ತಪಾಸಣೆ'

(Third Party Inspection) ವ್ಯವಸ್ಥೆ ಜಾರಿಯಲ್ಲಿದೆ ; ಕಳಪೆ ಕಾಮಗಾರಿ ಕಂಡುಬಂದಲ್ಲಿ ದೂರು ನೀಡಲು ಸಾರ್ವಜನಿಕರಿಗೆ ಇರುವ ವೇದಿಕೆ ಯಾವುದು ?

## ಬೀದರ್ ಜಿಲ್ಲೆಯಲ್ಲಿ ಬಾಕಿ ಇರುವ ಹಕ್ಕುಪತ್ರ ಮತ್ತು ಪೋಡಿ ಪ್ರಕರಣಗಳ ಪರಿಹಾರ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೦ (೯೧೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಾದ್ಯಂತ ಪ್ರಸ್ತುತ ಎಷ್ಟು ಹಕ್ಕು ಪತ್ರ (Grant Certificate) ವಿತರಣೆಗೆ ಬಾಕಿ ಇವೆ; ಅದೇ ರೀತಿ, ರೈತರ ಜಮೀನಿನ ನಕ್ಷೆ ಪ್ರತ್ಯೇಕಿಸುವ 'ಪೋಡಿ' (Podi) ಪ್ರಕರಣಗಳ ಒಟ್ಟು ಬಾಕಿ ಸಂಖ್ಯೆ ಎಷ್ಟು ; ಇವುಗಳಲ್ಲಿ 2 ವರ್ಷಕ್ಕಿಂತ ಹಳೆಯದಾದ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಬಾಕಿ ಇರುವ ಹಕ್ಕುಪತ್ರ ಮತ್ತು ಪೋಡಿ ಪ್ರಕರಣಗಳನ್ನು ವಿಲೇವಾರಿ ಮಾಡಲು ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ 'ಕಂದಾಯ ಅದಾಲತ್' ಅಥವಾ ವಿಶೇಷ 'ಪೋಡಿ ಮುಕ್ತ' ಶಿಬಿರಗಳನ್ನು ಆಯೋಜಿಸಲು ಸರ್ಕಾರ ಕಾಲಮಿತಿ ನಿಗದಿಪಡಿಸಿದೆಯೇ ;

(ಇ) ಬೀದರ್ ಜಿಲ್ಲೆಯ ಎಲ್ಲಾ ಗ್ರಾಮಗಳ ಭೂ ದಾಖಲೆಗಳ (RTC, Mutation, Maps) ಡಿಜಿಟಲೀಕರಣ ಪ್ರಕ್ರಿಯೆ ಯಾವ ಹಂತದಲ್ಲಿದೆ ; ಸರ್ವೆ ನಕ್ಷೆಗಳನ್ನು ಸಂಪೂರ್ಣವಾಗಿ ಡಿಜಿಟಲ್ ರೂಪಕ್ಕೆ ತರಲಾಗಿದೆಯೇ ; ಇದರಿಂದ ರೈತರಿಗೆ ಆಗುವ ಅನುಕೂಲಗಳೇನು ;

(ಈ) ದಾಖಲೆಗಳ ವಿಲೇವಾರಿಯಲ್ಲಿನ ವಿಳಂಬಕ್ಕೆ ತಾಂತ್ರಿಕ ಸಮಸ್ಯೆಗಳೇ ಕಾರಣವೋ ಅಥವಾ ಸರ್ವೆಯರ್‌ಗಳ ಕೊರತೆಯೇ ಕಾರಣವೋ ;

ಹಕ್ಕುಪತ್ರ ವಿತರಣೆಯಲ್ಲಿ ಎದುರಾಗುತ್ತಿರುವ ಕಾನೂನಾತ್ಮಕ ಅಡೆತಡೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಬೀದರ್ ಜಿಲ್ಲೆಯ ತಾಲ್ಲೂಕು ಕಛೇರಿಗಳಲ್ಲಿ ಮತ್ತು ಸರ್ವೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ವಿಶೇಷವಾಗಿ ಗ್ರಾಮೀಣ ಭಾಗದ ಸರ್ವೆ ಕೆಲಸಗಳ ವೇಗ ಹೆಚ್ಚಿಸಲು ಹೆಚ್ಚುವರಿ ಸಿಬ್ಬಂದಿ ಅಥವಾ ಗುತ್ತಿಗೆ ಆಧಾರದ ಮೇಲೆ ಸರ್ವೆಯರ್‌ಗಳನ್ನು ನೇಮಿಸಿಕೊಳ್ಳುವ ಯೋಜನೆ ಇದೆಯೇ ?

## ಬೀದರ್ ಜಿಲ್ಲೆಯಲ್ಲಿ ಮನೆರಹಿತ ಬಡ ಕುಟುಂಬಗಳಿಗೆ ಮನೆ ಮಂಜೂರು ಕುರಿತು

**ಡಾ|| ಎಂ. ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೧ (೯೧೪) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಪ್ರಸ್ತುತ ಇರುವ ವಸತಿ ರಹಿತ (Homeless) ಮತ್ತು ನಿವೇಶನ ರಹಿತ ಕುಟುಂಬಗಳ ಸಂಖ್ಯೆ ಎಷ್ಟು ; ಇತ್ತೀಚಿನ 'ಆಶ್ರಯ' ಯೋಜನೆಯ ಸಮೀಕ್ಷೆಯ ಪ್ರಕಾರ ಜಿಲ್ಲೆಯ ಯಾವ ತಾಲ್ಲೂಕಿನಲ್ಲಿ ಅತಿ ಹೆಚ್ಚು ಮನೆಗಳ ಬೇಡಿಕೆ ಇದೆ ;

(ಆ) ೨೦೨೫–೨೬ನೇ ಆರ್ಥಿಕ ವರ್ಷದಲ್ಲಿ ಕೇಂದ್ರದ 'ಪಿಎಂ ಆವಾಸ್ ಯೋಜನೆ' (PMAY) ಮತ್ತು ರಾಜ್ಯದ ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ಬೀದರ್ ಜಿಲ್ಲೆಗೆ ಮಂಜೂರು ಮಾಡಲು ಉದ್ದೇಶಿಸಿರುವ ಒಟ್ಟು ಮನೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಪರಿಶಿಷ್ಟ ಜಾತಿ/ ಪಂಗಡ ಹಾಗೂ ಅಲ್ಪಸಂಖ್ಯಾತರಿಗೆ ಮೀಸಲಿಟ್ಟ ಪಾಲು ಎಷ್ಟು ;

(ಇ) ಕಳೆದ ಮೂರು ವರ್ಷಗಳಲ್ಲಿ ಮಂಜೂರಾದ ಮನೆಗಳ ಪೈಕಿ, ಪ್ರಸ್ತುತ ಎಷ್ಟು ಮನೆಗಳು ಪೂರ್ಣಗೊಂಡಿವೆ (Completed) ;

ಎಷ್ಟು ಮನೆಗಳು ತಳಪಾಯ (Foundation) ಮತ್ತು ಲಿಂಟಲ್ (Lintel) ಹಂತದಲ್ಲಿವೆ ; (ತಾಲ್ಲೂಕುವಾರು ಪ್ರಗತಿಯ ಶೇಕಡಾವಾರು ಮಾಹಿತಿಯನ್ನು ಒದಗಿಸುವುದು)

(ಈ) ಫಲಾನುಭವಿಗಳಿಗೆ ಹಂತ–ಹಂತವಾಗಿ ಬಿಡುಗಡೆ ಮಾಡಬೇಕಾದ ಅನುದಾನ ವಿಳಂಬವಾಗಲು ಕಾರಣಗಳೇನು ; 'ಜಿಪಿಎಸ್' (GPS) ಟ್ಯಾಗಿಂಗ್ ಅಥವಾ ತಾಂತ್ರಿಕ ಅಡಚಣೆಗಳಿಂದಾಗಿ ಎಷ್ಟು ಜನರ ಪಾವತಿ ಬಾಕಿ ಉಳಿದಿದೆ ;

(ಉ) ಬಾಕಿ ಇರುವ ಸಾವಿರಾರು ಅರ್ಜಿಗಳನ್ನು ವಿಲೇವಾರಿ ಮಾಡಲು ಸರ್ಕಾರವು ಯಾವ ಕಾಲಮಿತಿ (Deadline) ನಿಗದಿಪಡಿಸಿದೆ ; ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡುವ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ತರಲು ಯಾವ ಕ್ರಮ ಕೈಗೊಳ್ಳಲಾಗಿದೆ ?

## ಬೀದರ್ ಜಿಲ್ಲೆಯಲ್ಲಿ ಪಶು ಆಸ್ಪತ್ರೆಗಳ ಸುಧಾರಣೆ ಮತ್ತು ಸೇವಾ ವಿಸ್ತರಣೆ ಕುರಿತು

**ಡಾ॥ ಎಂ. ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೨ (೯೧೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಪಶು ಆಸ್ಪತ್ರೆ ಮತ್ತು ಚಿಕಿತ್ಸಾಲಯಗಳಲ್ಲಿ ಮಂಜೂರಾದ ಒಟ್ಟು ವೈದ್ಯರ (Veterinary Officers) ಮತ್ತು ಸಹಾಯಕ ಸಿಬ್ಬಂದಿ ಹುದ್ದೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಪ್ರಸ್ತುತ ಎಷ್ಟು ಹುದ್ದೆಗಳು ಖಾಲಿ ಇವೆ ; (ತಾಲ್ಲೂಕುವಾರು ಖಾಲಿ ಹುದ್ದೆಗಳ ವಿವರ ನೀಡುವುದು)

(ಆ) ಖಾಲಿ ಇರುವ ವೈದ್ಯಕೀಯ ಹುದ್ದೆಗಳನ್ನು ಖಾಯಂ ನೇಮಕಾತಿ ಅಥವಾ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಸರ್ಕಾರ

ಕೈಗೊಂಡಿರುವ ತುರ್ತು ಕ್ರಮಗಳೇನು ; ಸಿಬ್ಬಂದಿ ಕೊರತೆಯಿಂದಾಗಿ ಮುಚ್ಚಲ್ಪಟ್ಟಿರುವ ಪಶು ಚಿಕಿತ್ಸಾಲಯಗಳ ಪುನಃಶ್ಚೇತನಕ್ಕೆ ಯೋಜನೆ ಇದೆಯೇ ;

(ಇ) ದೂರದ ಗ್ರಾಮೀಣ ಪ್ರದೇಶದ ರೈತರಿಗಾಗಿ 'ಪಶು ಸಂಜೀವಿನಿ' (೧೯೬೨ ಸಹಾಯವಾಣಿ) ಅಡಿಯಲ್ಲಿ ಬೀದರ್ ಜಿಲ್ಲೆಗೆ ಎಷ್ಟು ಹೊಸ ಸಂಚಾರಿ ಪಶುಚಿಕಿತ್ಸಾ ವಾಹನಗಳನ್ನು ಮಂಜೂರು ಮಾಡಲಾಗಿದೆ ಪ್ರತಿ ತಾಲ್ಲೂಕಿಗೆ ಕನಿಷ್ಠ ಎರಡು ಘಟಕಗಳನ್ನು ಒದಗಿಸುವ ಗುರಿ ಇದೆಯೇ ;

(ಈ) ಜಿಲ್ಲೆಯಲ್ಲಿ ಕಾಲುಬಾಯಿ ರೋಗ (FMD) ಮತ್ತು ಚರ್ಮಗಂಟು ರೋಗ (Lumpy Skin Disease) ನಿಯಂತ್ರಿಸಲು ಕಳೆದ ಒಂದು ವರ್ಷದಲ್ಲಿ ಎಷ್ಟು ಹಂತಗಳಲ್ಲಿ ಲಸಿಕೆ ಅಭಿಯಾನ ನಡೆಸಲಾಗಿದೆ ; ಈ ಲಸಿಕೆಗಳು ಎಲ್ಲಾ ಗ್ರಾಮಗಳ ಪಶುಗಳಿಗೆ ಉಚಿತವಾಗಿ ತಲುಪಿರುವುದನ್ನು ಖಚಿತಪಡಿಸಿಕೊಳ್ಳಲು ಇರುವ ಮೇಲ್ವಿಚಾರಣಾ ವ್ಯವಸ್ಥೆ ಯಾವುದು ;

(ಉ) ಬೀದರ್ ಜಿಲ್ಲೆಯಲ್ಲಿ ರೇಷ್ಮೆ ಕೃಷಿ ಉತ್ತೇಜಿಸಲು ಹನಿ ನೀರಾವರಿ ಮತ್ತು ಶೆಡ್ ನಿರ್ಮಾಣಕ್ಕೆ ನೀಡಲಾಗುತ್ತಿರುವ ಸಹಾಯಧನ ಎಷ್ಟು; ಜಿಲ್ಲೆಯಲ್ಲಿ ರೇಷ್ಮೆ ಗೂಡು ಮಾರಾಟ ಮಾಡಲು ಸುಸಜ್ಜಿತ ಮಾರುಕಟ್ಟೆ ವ್ಯವಸ್ಥೆ ಇಲ್ಲದಿರುವುದರಿಂದ, ರೈತರಿಗೆ ನೆರೆಯ ಜಿಲ್ಲೆಗಳಿಗೆ ಹೋಗುವ ಶ್ರಮ ತಪ್ಪಿಸಲು ಸ್ಥಳೀಯವಾಗಿ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಸಾರಿಗೆ ಇಲಾಖೆ ಅಧೀನದಲ್ಲಿರುವ ಸಾರಿಗೆ ನಿಗಮ/ಸಂಸ್ಥೆಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೩ (೯೦೭) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರಿಗೆ ಇಲಾಖೆ ಅಧೀನದಲ್ಲಿ ಬರುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಆಗಿರುವ ಲಾಭವೆಷ್ಟು ಮತ್ತು ನಷ್ಟವೆಷ್ಟು ; (ವರ್ಷವಾರು ಮತ್ತು ನಿಗಮವಾರು ಮಾಹಿತಿ ನೀಡುವುದು)

(ಆ) ಕರ್ನಾಟಕ ಸರ್ಕಾರದ ಮಹತ್ವಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ "ಶಕ್ತಿ ಯೋಜನೆ", ಅನುಷ್ಠಾನದ ನಂತರ ಮೇಲಿನ ಎಲ್ಲಾ ಸಾರಿಗೆ ಸಂಸ್ಥೆಗಳಿಗೆ ಸರ್ಕಾರದಿಂದ ನೀಡಲಾಗಿರುವ ಮೊತ್ತ ಎಷ್ಟು ;

(ಇ) ಈ ಮೊತ್ತ ಸಂಪೂರ್ಣವಾಗಿ ಇಲಾಖೆಗೆ ಬಿಡುಗಡೆಯಾಗಿದೆಯೇ ; (ವರ್ಷವಾರು ಮೊತ್ತದ ವಿವರ ನೀಡುವುದು)

(ಈ) ರಾಜ್ಯ ಎಲ್ಲಾ ರಸ್ತೆ ಸಾರಿಗೆ ನಿಗಮ/ಸಂಸ್ಥೆಗಳಲ್ಲಿ ಮಂಜೂರಾಗಿ ಖಾಲಿ ಇರುವ ಹುದ್ದೆಗಳು ಎಷ್ಟು ; ಈ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಚಾಲಕ ಮತ್ತು ನಿರ್ವಾಹಕರ ವೇತನ ಪಾವತಿ ಬಾಕಿ ಇದೆಯೇ ; ಈ ಸಂಸ್ಥೆಗಳಿಂದ ನಿವೃತ್ತಿ ಹೊಂದಿರುವ ಸಿಬ್ಬಂದಿಗಳ ನಿವೃತ್ತಿ ಲಾಭ (PF/Gratuity) ಬಾಕಿ ಉಳಿದಿರುವ ಪ್ರಕರಣಗಳು ಎಷ್ಟು ಮತ್ತು ಈ ಪ್ರಕರಣಗಳನ್ನು ಯಾವಾಗ ವಿಲೇ ಮಾಡಲಾಗುವುದು ಎಂಬುದರ ಬಗ್ಗೆ ಮಾಹಿತಿ ನೀಡುವುದು ?

## ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡ ರಸ್ತೆ ಕಾಮಗಾರಿಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೪ (೯೦೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆವತಿಯಿಂದ ನಿರ್ಮಿಸಿರುವ ಪುನರ್‌ನಿರ್ಮಿಸಿರುವ ರಸ್ತೆಗಳು ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ಮಳೆಯಿಂದಾಗಿ ಹಾನಿಗೊಳಗಾದ ರಸ್ತೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ಕಿ.ಮೀ.ವಾರು ಮಾಹಿತಿ ನೀಡುವುದು)

(ಆ) ರಾಜ್ಯ ಹೆದ್ದಾರಿಗಳಲ್ಲಿ ಅನ್ಯ ಕಾರಣಗಳಿಂದಾಗಿ ಉಂಟಾಗುವ ಗುಂಡಿಗಳ ನಿರ್ವಹಣೆಗೆ 'Performance based Maintenance Contract' ಯೋಜನೆ ಜಾರಿಯಲ್ಲಿದೆಯೇ ; ರಸ್ತೆ ಕಾಮಗಾರಿಗಳ ಗುಣಮಟ್ಟ ಪರಿಶೀಲನೆಗಾಗಿ ತೃತೀಯ ಪಕ್ಷ ಆಡಿಟ್ (Third Party Audit) ವ್ಯವಸ್ಥೆ ಮಾಡಲಾಗಿದೆಯೇ;

(ಇ) ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯಿಂದ ಗುರುತಿಸಲ್ಪಟ್ಟ ಅಪಾಯಕಾರಿಯಾದ ಸೇತುವೆಗಳ ಸಂಖ್ಯೆ ಎಷ್ಟು ಮತ್ತು ಕಳೆದ ಮೂರು ವರ್ಷಗಳಲ್ಲಿ ಇಲಾಖೆವತಿಯಿಂದ ನಿರ್ಮಿಸಲಾಗಿರುವ ಸೇತುವೆ ಸಂಖ್ಯೆ ಎಷ್ಟು ಮತ್ತು ಅವುಗಳ ಪ್ರಸ್ತುತ ಸ್ಥಿತಿಗತಿಗಳೇನು ;

(ಈ) ಸರ್ಕಾರಿ ಕಟ್ಟಡಗಳ ನಿರ್ವಹಣೆಗಾಗಿ ಕಳೆದ ಮೂರು ವರ್ಷಗಳಲ್ಲಿ ಮೀಸಲಿಡಲಾದ ಅನುದಾನವೆಷ್ಟು ? (ಜಿಲ್ಲಾವಾರು ಮತ್ತು ವರ್ಷವಾರು ಸೇತುವೆಗಳ ಮಾಹಿತಿ ನೀಡುವುದು)

## ಭೂ ದಾಖಲೆಗಳ ಡಿಜಿಟಲೀಕರಣ ಮತ್ತು ಸರ್ಕಾರಿ ಭೂಮಿಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೫ (೯೦೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವತಿಯಿಂದ ರಾಜ್ಯದ ಎಲ್ಲಾ ಭೂ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲು ಹಲವಾರು ಯೋಜನೆಗಳನ್ನು ತಂದಿದ್ದು, ಈ ಯೋಜನೆಯಡಿ ರಾಜ್ಯದಲ್ಲಿ ಎಲ್ಲಾ ಭೂ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆಯೇ ; (ಜಿಲ್ಲಾವಾರು ಪ್ರಗತಿ ವರದಿ ನೀಡುವುದು)

(ಆ) ಪಹಣಿ/ಆರ್.ಟಿ.ಸಿ. ತಿದ್ದುಪಡಿ ಬಾಕಿ ಅರ್ಜಿಗಳ ಸಂಖ್ಯೆ ಎಷ್ಟು; ಕಳೆದ ಒಂದು ವರ್ಷದಲ್ಲಿ ಭೂಮಿ ತಂತ್ರಾಂಶ ವ್ಯವಸ್ಥೆಯ ತಾಂತ್ರಿಕ ದೋಷದ ಕುರಿತು ಎಷ್ಟು ದೂರುಗಳು ಬಂದಿವೆ ; ಇ–ಖಾತೆ/ ಮ್ಯೂಟೇಶನ್ ಬಾಕಿ ಅರ್ಜಿ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ರಾಜ್ಯದಲ್ಲಿ ಸರ್ಕಾರಿ ಭೂಮಿಯ ಅತಿಕ್ರಮಣ ಪ್ರಕರಣಗಳ ಸಂಖ್ಯೆ ಎಷ್ಟು ; ಈ ಅತಿಕ್ರಮಣದಲ್ಲಿ ಎಷ್ಟು ಭೂಮಿಯನ್ನು ಸರ್ಕಾರದ ವಶಕ್ಕೆ ವಾಪಸ್ ಪಡೆಯಲಾಗಿದೆ ; ಭೂ ಮಾಫಿಯಾ ವಿರುದ್ಧ ಕಳೆದ ೩ ವರ್ಷಗಳಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ಮತ್ತು ಗೃಹ ನಿರ್ಮಾಣ ಉದ್ದೇಶಕ್ಕಾಗಿ ಮಂಜೂರಾದ ಭೂಮಿಯನ್ನು ವಾಣಿಜ್ಯ ಬಳಕೆ ಮಾಡಿದ ಪ್ರಕರಣಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ವಸತಿ ಇಲಾಖೆಯ ವಿವಿಧ ಯೋಜನೆಗಳಡಿ ಮನೆ ಹಂಚಿಕೆ ಮಾಡಿರುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೬ (೯೧೬) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ವಸತಿ ಇಲಾಖೆಯ ವಿವಿಧ ಯೋಜನೆಗಳಡಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು;

ಈ ಮಂಜೂರಾದ ಮನೆಗಳಲ್ಲಿ ಪೂರ್ಣಗೊಂಡಿರುವ ಮನೆಗಳು ಎಷ್ಟು ; ಬಾಕಿ ಇರುವ ಮನೆಗಳ ಸಂಖ್ಯೆ ಎಷ್ಟು ; (ನಗರ ಮತ್ತು ಗ್ರಾಮೀಣ ಪ್ರದೇಶವಾರು ವಿವರ ನೀಡುವುದು)

(ಆ) ರಾಜೀವ್ ಗಾಂಧಿ ಹೌಸಿಂಗ್ ಕಾರ್ಪೋರೇಷನ್ ಲಿಮಿಟೆಡ್ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಯಾವುವು ; ಆ ಯೋಜನೆಗಳ ಪ್ರಸ್ತುತ ಹಂತವೇನು ;

(ಇ) ರಾಜ್ಯದಲ್ಲಿ ಭೂಮಿ ಕೊರತೆಯಿಂದ ಸ್ಥಗಿತಗೊಂಡಿರುವ ಮನೆ ಹಂಚಿಕೆ ಯೋಜನೆಗಳು ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ವಸತಿ ಯೋಜನೆಗಳಿಗೆ ಮಂಜೂರಾದ ಅನುದಾನವೆಷ್ಟು ಮತ್ತು ಖರ್ಚಾಗಿರುವ ಮೊತ್ತ ಎಷ್ಟು ; ಮನೆ ಹಂಚಿಕೆ ಪ್ರಕ್ರಿಯೆ ಕುರಿತು ದೂರುಗಳು ಸ್ವೀಕೃತವಾಗಿದೆಯೇ ; ಇದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಮೀನುಗಾರರಿಗೆ ಒದಗಿಸುವ ಸವಲತ್ತುಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೭ (೯೧೭) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಿರಾಶ್ರಿತ ಮೀನುಗಾರರಿಗೆ ಈ ಹಿಂದೆ (೨೦೨೪–೨೫ರ ಯೋಜನೆಯಲ್ಲಿ) ನೀಡಿರುವ ಭರವಸೆಗಳಂತೆ ೧೦,೦೦೦ ಮನೆಗಳಲ್ಲಿ ಎಷ್ಟು ಮೀನುಗಾರರಿಗೆ ಮನೆಗಳನ್ನು ಹಂಚಿಕೆ ಮಾಡಲಾಗಿದೆ ಮತ್ತು ಎಷ್ಟು ಬಾಕಿ ಇವೆ; ಯಾವ ಜಿಲ್ಲೆಗಳಲ್ಲಿ ಹಂಚಿಕೆ ಮಾಡಲಾಗಿದೆ ;

(ಆ) ೧೫ ವರ್ಷಗಳ ಮೇಲ್ಪಟ್ಟ ಯಾಂತ್ರೀಕೃತ ದೋಣಿಗಳಲ್ಲಿ ಹಳೆಯ ಇಂಜಿನ್‌ಗಳನ್ನು ಬದಲಾಯಿಸಲು ಎಷ್ಟು ಮೀನುಗಾರರಿಗೆ ಸರ್ಕಾರದ ವತಿಯಿಂದ ಸಬ್ಸಿಡಿಗಳನ್ನು ನೀಡಲಾಗಿದೆ ;

(ಇ) ೨೦೨೫–೨೬ನೇ ಸಾಲಿನಲ್ಲಿ ಹವಾಮಾನ ವೈಪರೀತ್ಯದಿಂದ ತೊಂದರೆಗೊಳಗಾದ ಮೀನುಗಾರರಿಗೆ ಯಾವ ಪರಿಹಾರವನ್ನು ನೀಡಲು ಸರ್ಕಾರ ಯೋಜಿಸಿದೆ ? (ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಗ್ರಾಮ ಒನ್ ಕೇಂದ್ರಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೧೮ (೮೮೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅಸ್ತಿತ್ವದಲ್ಲಿರುವ ಗ್ರಾಮ ಒನ್ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಗ್ರಾಮ ಒನ್ ಕೇಂದ್ರಗಳನ್ನು ತೆರೆಯಲು ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ಗ್ರಾಮ ಒನ್ ಕೇಂದ್ರಗಳಿಂದ ಸಾರ್ವಜನಿಕರಿಗೆ ನಿಗದಿತ ಅವಧಿಯಲ್ಲಿ ಸೇವೆ ನೀಡಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ಹಾಗೂ ಲಭ್ಯವಿರುವ ಸೇವೆಗಳು ಯಾವುವು ;

(ಈ) ಪ್ರತಿ ತಿಂಗಳು ಗ್ರಾಮ ಒನ್ ಕೇಂದ್ರಕ್ಕೆ ಸಲ್ಲಿಕೆ ಆಗುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಗ್ರಾಮ ಒನ್ ಕೇಂದ್ರ ಮತ್ತು ನಾಡ ಕಛೇರಿಗಳಲ್ಲಿ ಸಾರ್ವಜನಿಕರಿಗೆ ನೀಡುವ ಸೇವೆಗೆ ನಿಗದಿಪಡಿಸಿರುವ ಶುಲ್ಕದಲ್ಲಿ ವ್ಯತ್ಯಾಸ ಇದೆಯೇ ಹಾಗೂ ನಿಗದಿಪಡಿಸಿರುವ ಶುಲ್ಕಕ್ಕಿಂತ ಹೆಚ್ಚಿಗೆ ಶುಲ್ಕ ವಸೂಲಿ ಮಾಡುತ್ತಿರುವ ಬಗ್ಗೆ ದೂರುಗಳಿದ್ದು ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ಕೋವಿಡ್ ಸಂದರ್ಭದಲ್ಲಿ ಸಾವನ್ನಪ್ಪಿದ ಸಾರಿಗೆ ಸಂಸ್ಥೆಯ ಉದ್ಯೋಗಿಗಳಿಗೆ ಪರಿಹಾರ ಹಣ ಪಾವತಿಸುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನಸಭೆಯಿಂದ ಚುನಾಯಿತರಾದವರು):–**

೮೧೯ (೯೭೫) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೋವಿಡ್ ಸಂದರ್ಭದಲ್ಲಿ ಒಟ್ಟು ಎಷ್ಟು ಜನ ಸಾರಿಗೆ ಸಂಸ್ಥೆಯ ಉದ್ಯೋಗಿಗಳು ಸಾವನ್ನಪ್ಪಿದ್ದಾರೆ ; (ಸಂಪೂರ್ಣ ವಿವರ ನೀಡುವುದು)

(ಆ) ಈ ರೀತಿ ಸಾವನ್ನಪ್ಪಿದ ಸಾರಿಗೆ ಸಂಸ್ಥೆಯ ಉದ್ಯೋಗಿಗಳಿಗೆ ಪಾವತಿಸಲು ನಿರ್ಣಯಿಸಲಾಗಿದ್ದ ಪರಿಹಾರ ಹಣದ ಮೊತ್ತವೆಷ್ಟು ಹಾಗೂ ಪರಿಹಾರ ಹಣದ ಮೊತ್ತವನ್ನು ಈಗಾಗಲೇ ಪೂರ್ಣ ಪ್ರಮಾಣದಲ್ಲಿ ಎಲ್ಲರಿಗೂ ಪಾವತಿಸಲಾಗಿದೆಯೇ ;

(ಇ) ಇದುವರೆಗೂ ಕೋವಿಡ್ ಸಂದರ್ಭದಲ್ಲಿ ಸಾವನ್ನಪ್ಪಿದ ಸಾರಿಗೆ ಸಂಸ್ಥೆ ಉದ್ಯೋಗಿಗಳಿಗೆ ಪರಿಹಾರದ ಹಣವನ್ನು ಪಾವತಿಸದೇ ಇದ್ದಲ್ಲಿ, ಅದಕ್ಕೆ ಕಾರಣಗಳೇನು ;

(ಈ) ಯಾವ ಕಾಲಮಿತಿಯೊಳಗೆ ಎಲ್ಲಾ ಸಾರಿಗೆ ಸಂಸ್ಥೆ ಉದ್ಯೋಗಿಗಳಿಗೆ ಈಗಾಗಲೇ ಪಾವತಿಸಲು ನಿರ್ಣಯಿಸಲಾಗಿದ್ದಂತೆ ಪೂರ್ಣ ಪ್ರಮಾಣದಲ್ಲಿ ಪರಿಹಾರ ಹಣದ ಮೊತ್ತವನ್ನು ಪಾವತಿಸಲಾಗುವುದು ?

## ‘ವೈಷ್ಣೋದೇವಿ’ ಯಾತ್ರೆಗೆ ಸಹಾಯಧನ ನೀಡುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನಸಭೆಯಿಂದ ಚುನಾಯಿತರಾದವರು):–**

೮೨೦ (೯೭೬) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಮುಜರಾಯಿ ಇಲಾಖೆಯಿಂದ 'ಕಾಶಿ' ಯಾತ್ರೆ ಮಾದರಿಯಲ್ಲಿಯೇ 'ವೈಷ್ಣೋದೇವಿ' ಯಾತ್ರೆಗೂ ಸಹಾಯಧನ ನೀಡಬೇಕೆಂಬ ಬೇಡಿಕೆ ಬಹುಕಾಲದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗೂ ಸದರಿ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಸದರಿ ಪ್ರಸ್ತಾವನೆ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) 'ವೈಷ್ಣೋದೇವಿ' ಯಾತ್ರೆಗೆ ಸಹಾಯಧನ ನೀಡುವ ಕುರಿತು ಸರ್ಕಾರ ಇದುವರೆಗೆ ಕ್ರಮ ವಹಿಸದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ 'ಕಾಶಿ' ಯಾತ್ರೆ ಮಾದರಿಯಲ್ಲಿಯೇ 'ವೈಷ್ಣೋದೇವಿ' ಯಾತ್ರೆಗೆ ಸಹಾಯಧನ ನೀಡುವ ಯೋಜನೆ ಜಾರಿಗೊಳಿಸಲಾಗುವುದು ?

## ರಾಜ್ಯ ರಸ್ತೆ ಸಾರಿಗೆ ನಿಗಮಗಳಲ್ಲಿ ದುಡಿಯುತ್ತಿರುವ ಅಧಿಕಾರಿ ಮತ್ತು ನೌಕರರ ವೇತನ ಪರಿಷ್ಕರಣೆ ಮತ್ತು ಹಿಂಬಾಕಿ ಪಾವತಿ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನಸಭೆಯಿಂದ ಚುನಾಯಿತರಾದವರು):–**

೮೨೧ (೯೭೭) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ರಸ್ತೆ ಸಾರಿಗೆ ನಿಗಮಗಳಲ್ಲಿ ದುಡಿಯುತ್ತಿರುವ ಅಧಿಕಾರಿ, ನೌಕರರಿಗೆ ಸಕಾಲದಲ್ಲಿ ವೇತನ ಪರಿಷ್ಕರಣೆಯಾಗದಿರುವುದು ಅಲ್ಲದೇ ೩೮ ತಿಂಗಳ ವೇತನ ಹಿಂಬಾಕಿಯು ಸಿಗದೆ ಅವರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಸ್ತುತ ಸಾರಿಗೆ ನಿಗಮಗಳು ತಮ್ಮ ಅಧಿಕಾರಿ ಮತ್ತು ನೌಕರರಿಗೆ ಪಾವತಿಸಲು ಉಳಿಸಿಕೊಂಡಿರುವ ವಿವಿಧ ರೀತಿಯ ಬಾಕಿಗಳ ವಿವರಗಳೇನು ; ಒಟ್ಟು ಮೊತ್ತವೆಷ್ಟು ;

(ಇ) ಪ್ರಸ್ತುತ ಸಾರಿಗೆ ನಿಗಮಗಳು ತಮ್ಮ ಅಧಿಕಾರಿ ಮತ್ತು ನೌಕರರಿಗೆ ಪಾವತಿಸಲು ಉಳಿಸಿಕೊಂಡಿರುವ ವಿವಿಧ ರೀತಿಯ ಬಾಕಿ ಮೊತ್ತವನ್ನು ಪಾವತಿಸಲು ಮತ್ತು ವೇತನ ಪರಿಷ್ಕರಣೆ ಮಾಡಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ;

(ಈ) ನಿವೃತ್ತ ನೌಕರರಿಗೆ ರಸ್ತೆ ಸಾರಿಗೆ ನಿಗಮಗಳು ಪಾವತಿಸಬೇಕಾಗಿರುವ ಬಾಕಿ ಮೊತ್ತ ಎಷ್ಟು ಮತ್ತು ಸದರಿ ಬಾಕಿ ಮೊತ್ತವನ್ನು ಯಾವ ಕಾಲಮಿತಿಯೊಳಗೆ ನಿವೃತ್ತ ನೌಕರರಿಗೆ ಸಂಪೂರ್ಣವಾಗಿ ಪಾವತಿಸಲಾಗುವುದು ;

(ಉ) ಸಾರಿಗೆ ನಿಗಮಗಳಲ್ಲಿ ನಿಗದಿತ ಅವಧಿಯೊಳಗೆ ವೇತನ ಪರಿಷ್ಕರಣೆ ಮಾಡದಿರಲು ಕಾರಣಗಳೇನು ಮತ್ತು ಯಾವ ಕಾಲಮಿತಿಯೊಳಗೆ ವೇತನ ಪರಿಷ್ಕರಣೆ ಮಾಡಲಾಗುವುದು ಮತ್ತು ೩೮ ತಿಂಗಳ ವೇತನ ಹಿಂಬಾಕಿಯನ್ನು ಸಂಪೂರ್ಣವಾಗಿ ಪಾವತಿಸಲಾಗುವುದು ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಗೋಶಾಲೆಗಳ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನಸಭೆಯಿಂದ ಚುನಾಯಿತರಾದವರು):–**

೮೨೨ (೯೭೭೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗೋಶಾಲೆಗಳಿಗೆ ಸರ್ಕಾರದಿಂದ ದೊರೆಯುತ್ತಿರುವ ಅನುದಾನ, ನೆರವು ಮತ್ತು ಸೌಲಭ್ಯಗಳೇನು ;

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಎಷ್ಟು ಖಾಸಗಿ ನಿರ್ವಹಣೆಯ ಮತ್ತು ಸರ್ಕಾರಿ ಗೋಶಾಲೆಗಳು ಕಾರ್ಯನಿರ್ವಹಿಸುತ್ತಿವೆ ; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಸದರಿ ಗೋಶಾಲೆಗಳಿಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನದ ಸಂಪೂರ್ಣ ವಿವರ ನೀಡುವುದು ;

(ಈ) ಜಿಲ್ಲೆಯಲ್ಲಿರುವ ಎಲ್ಲಾ ಗೋಶಾಲೆಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳ ನಿರ್ಮಾಣಕ್ಕೆ ಬೇಕಾದ ಅನುದಾನವನ್ನು ಸರ್ಕಾರ ಈಗಾಗಲೇ ಸಂಪೂರ್ಣವಾಗಿ ಒದಗಿಸಿದೆಯೇ ; (ವಿವರ ನೀಡುವುದು)

(ಉ) ಸದರಿ ಗೋಶಾಲೆಗಳಲ್ಲಿ ಎಷ್ಟು ವಿವಿಧ ರೀತಿಯ ದೇಶೀಯ ಗೋ ತಳಿಗಳಿವೆ ಮತ್ತು ಪ್ರಸ್ತುತ ಪ್ರತೀ ತಳಿಯ ಎಷ್ಟು ಸಂಖ್ಯೆಯ ದೇಶೀಯ ಗೋವುಗಳಿಗೆ ಆಶ್ರಯ ಕಲ್ಪಿಸಲಾಗಿದೆ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ದೇಶಿ ಗೋ ತಳಿಗಳ ಸಂರಕ್ಷಣೆ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನಸಭೆಯಿಂದ ಚುನಾಯಿತರಾದವರು):–**

೮೨೩ (೯೭೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇರುವ ವಿವಿಧ ದೇಶಿಯ ಗೋ ತಳಿಗಳು ಯಾವುವು ಹಾಗೂ ಜಿಲ್ಲೆಯಲ್ಲಿ ಪ್ರತಿ ದೇಶಿಯ ಗೋ ತಳಿಯ ಎಷ್ಟು ಸಂಖ್ಯೆಯ ಗೋವುಗಳಿವೆ ;

(ಆ) ಜಿಲ್ಲೆಯಲ್ಲಿ ದೇಶಿಯ ಗೋ ತಳಿಗಳ ಅಭಿವೃದ್ಧಿ ಮತ್ತು ಸಂರಕ್ಷಣೆ ಸಲುವಾಗಿ ಸ್ಥಳೀಯವಾಗಿ ಎಷ್ಟು ತಳಿ ಸಂವರ್ಧನಾ ಕೇಂದ್ರಗಳನ್ನು ತೆರೆಯಲಾಗಿದೆ ;

(ಇ) ಸದರಿ ಕೇಂದ್ರಗಳಲ್ಲಿ ಕೈಗೊಂಡಿರುವ ಕಾರ್ಯಕ್ರಮ ಹಾಗೂ ಯೋಜನೆಗಳ ವಿವರಗಳೇನು ;

(ಈ) ಈ ಕೇಂದ್ರಗಳಿಗೆ ಒದಗಿಸಿರುವ ಮೂಲಭೂತ ಹಾಗೂ ತಾಂತ್ರಿಕ ಸೌಲಭ್ಯಗಳು ಹಾಗೂ ಮಾನವ ಸಂಪನ್ಮೂಲಗಳ ವಿವರಗಳೇನು ;

(ಉ) ಕಳೆದ ಮೂರು ವರ್ಷಗಳಲ್ಲಿ ಸದರಿ ದೇಶಿಯ ಗೋ ತಳಿ ಸಂವರ್ಧನಾ ಕೇಂದ್ರಗಳಿಗೆ ವಿನಿಯೋಗಿಸಿರುವ ಅನುದಾನ ಎಷ್ಟು? (ವಿವರಗಳನ್ನು ಒದಗಿಸುವುದು)

## ನಿರ್ಮಿತಿ ಕೇಂದ್ರಗಳ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :-**

೮೨೪ (೯೬೭) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ನಿರ್ಮಿತಿ ಕೇಂದ್ರಗಳ ನೌಕರರು, ಇಂಜಿನಿಯರ್‌ಗಳ ಸಂಖ್ಯೆ ಎಷ್ಟು ; (ಹೆಸರು, ಹುದ್ದೆ ಸಹಿತವಾಗಿ ಪೂರ್ಣ ಮಾಹಿತಿ ಜಿಲ್ಲಾವಾರು ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ನಿರ್ಮಿತಿ ಕೇಂದ್ರದ ಯಾವ ಯಾವ ಅಧಿಕಾರಿಗಳ ಮೇಲೆ ಲೋಕಾಯುಕ್ತ ಪ್ರಕರಣಗಳು ದಾಖಲಾಗಿರುತ್ತದೆ ; ಇವುಗಳಲ್ಲಿ ತನಿಖೆ ಪೂರ್ಣಗೊಂಡಿರುವ ಪ್ರಕರಣಗಳು ಹಾಗೂ ಬಾಕಿ ಇರುವ ಪ್ರಕರಣಗಳು ಎಷ್ಟು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ನಿರ್ಮಿತಿ ಕೇಂದ್ರದ ಅಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಎಷ್ಟು; ಇವುಗಳಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳು ಮತ್ತು ಬಾಕಿ ಇರುವ ಕಾಮಗಾರಿಗಳು ಎಷ್ಟು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ತುಮಕೂರು ಜಿಲ್ಲೆ ನಿರ್ಮಿತಿ ಕೇಂದ್ರದಲ್ಲಿ ಯಾವ ಯಾವ ಅಧಿಕಾರಿಗಳ ಮೇಲೆ ಲೋಕಾಯುಕ್ತ ಪ್ರಕರಣಗಳು ದಾಖಲಾಗಿರುತ್ತವೆ ; ದಾಖಲಾಗಿದ್ದಲ್ಲಿ, ಮುಕ್ತಾಯಗೊಂಡಿರುವ ಪ್ರಕರಣಗಳು ಹಾಗೂ ಬಾಕಿ ಇರುವ ಪ್ರಕರಣಗಳು ಎಷ್ಟು ;

(ಉ) ಕಳೆದ ಮೂರು ವರ್ಷಗಳಲ್ಲಿ ತುಮಕೂರು ಜಿಲ್ಲೆಯ ನಿರ್ಮಿತಿ ಕೇಂದ್ರದ ಕಾಮಗಾರಿಗಳ ಸಂಬಂಧ ಜಿಲ್ಲಾಧಿಕಾರಿಗಳು ಎಷ್ಟು ಸಭೆಗಳನ್ನು ನಡೆಸಿರುತ್ತಾರೆ ; ಸಭೆಗಳಲ್ಲಿ ಕೈಗೊಂಡ ನಿರ್ಣಯಗಳು ಏನು ? (ಪೂರ್ಣ ಮಾಹಿತಿಯನ್ನು ಒದಗಿಸುವುದು)

## ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ರಾಜ್ಯ ರಸ್ತೆ ಸಾರಿಗೆ ಬಸ್ ಡಿಪೋ ಕಾಮಗಾರಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೮೨೫ (೯೬೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ಚಿಕ್ಕನಾಯಕನಹಳ್ಳಿಯಲ್ಲಿ ರಾಜ್ಯ ರಸ್ತೆ ಸಾರಿಗೆ ಡಿಪೋ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; ಚಿಕ್ಕನಾಯಕನಹಳ್ಳಿಗೆ ಬಸ್ ಡಿಪೋ ನೀಡಲು ಸರ್ಕಾರ ಯಾವಾಗ ತೀರ್ಮಾನ ತೆಗೆದುಕೊಂಡಿದೆ ; ಈ ಸಂಬಂಧ ಟೆಂಡರ್ ಪ್ರಕ್ರಿಯೆ ನಡೆದಿರುತ್ತದೆಯೇ ; (ನಡೆದಿದ್ದಲ್ಲಿ, ವಿವರಗಳನ್ನು ಒದಗಿಸುವುದು)

(ಆ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಎಷ್ಟು ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ಸುಗಳ ನಿರ್ವಹಣೆ ಮಾಡಲಾಗುತ್ತಿದೆ ; (ವಿವರಗಳನ್ನು ಒದಗಿಸುವುದು)

(ಇ) ತಾಲ್ಲೂಕು ಕೇಂದ್ರವಾದ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಿಂದ ತುಮಕೂರು, ಬೆಂಗಳೂರು, ಮೈಸೂರು, ಶಿವಮೊಗ್ಗ, ಚಿತ್ರದುರ್ಗ, ದಾವಣಗೆರೆ, ತಿಪಟೂರು ಮತ್ತು ಇತರೆ ಭಾಗಗಳಿಗೆ ರಸ್ತೆ ಸಾರಿಗೆ ಬಸ್ಸುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ ;

(ಈ) ಈ ಪ್ರದೇಶದಲ್ಲಿ ಸಾರಿಗೆ ಸೌಲಭ್ಯದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; ಬಂದಿದ್ದಲ್ಲಿ, ಸರ್ಕಾರ ಪೂರ್ಣ ಪ್ರಮಾಣದಲ್ಲಿ ಯಾವಾಗ ಸಾರಿಗೆ ಸಂಸ್ಥೆಯ ಬಸ್ಸುಗಳನ್ನು ಒದಗಿಸುವುದು ;

(ಉ) ಚಿಕ್ಕನಾಯಕನಹಳ್ಳಿಯಲ್ಲಿ ಉದ್ದೇಶಿತ ಬಸ್ ಡಿಪೋ ಕಾಮಗಾರಿ ನಿಧಾನ ಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಸ್ ಡಿಪೋ ಕಾಮಗಾರಿಯನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ ; ಸದರಿ ಕಾಮಗಾರಿಗೆ ಮಂಜೂರಾಗಿರುವ ಅನುದಾನವೆಷ್ಟು ; ಬಿಡುಗಡೆಯಾಗಿರುವ ಅನುದಾನವೆಷ್ಟು ; ಬಾಕಿ ಇರುವ ಕಾಮಗಾರಿ ಎಷ್ಟು ? (ಗುತ್ತಿಗೆದಾರರ ವಿವರಗಳ ಸಮೇತ ಪೂರ್ಣ ಮಾಹಿತಿಯನ್ನು ಒದಗಿಸುವುದು)

## ರಾಜ್ಯದಲ್ಲಿ ಅವಧಿ ಮೀರಿರುವ ಹೆದ್ದಾರಿಗಳ ಟೋಲ್ ಪ್ಲಾಜಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೮೨೬ (೯೬೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹೆದ್ದಾರಿಗಳಲ್ಲಿ ನ್ಯಾಷನಲ್ ಹೈವೇ ಅಥಾರಿಟಿ, ಕೆ.ಶಿಪ್ ಮತ್ತು ಕೆ.ಆರ್.ಡಿ.ಸಿ.ಎಲ್ ಮುಖಾಂತರ ಇರುವ ಟೋಲ್ ಪ್ಲಾಜಗಳು ಎಷ್ಟು ; ಸದರಿ ಟೋಲ್ ಪ್ಲಾಜಗಳಲ್ಲಿ ಸುಂಕ ವಸೂಲಾತಿ ಮಾಡಲು ಯಾವ ಯಾವ ಸಂಸ್ಥೆಗಳಿಗೆ ಗುತ್ತಿಗೆ ನೀಡಲಾಗಿದೆ ಮತ್ತು ಗುತ್ತಿಗೆಯ ಅವಧಿ ಏನು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಆ) ರಾಜ್ಯದಲ್ಲಿ ಅವಧಿ ಮೀರಿರುವ ಹೆದ್ದಾರಿಗಳ ಟೋಲ್ ಪ್ಲಾಜಗಳು ಎಷ್ಟು; (ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ಕರ್ನಾಟಕದ ಹೆದ್ದಾರಿಗಳಲ್ಲಿ ಅವಧಿ ಮೀರಿರುವ ಟೋಲ್ ಪ್ಲಾಜಗಳಲ್ಲಿ ಅನಧಿಕೃತವಾಗಿ ಸುಂಕ ವಸೂಲಿ ಮಾಡುತ್ತಿರುವುದು ರಾಜ್ಯ ಸರ್ಕಾರದ ಲೋಕೋಪಯೋಗಿ ಇಲಾಖೆಯ ಗಮನಕ್ಕೆ ಬಂದಿರುತ್ತದೆಯೇ; ಬಂದಿದ್ದಲ್ಲಿ, ಅಂತಹ ಟೋಲ್ ಪ್ಲಾಜಗಳ ಮೇಲೆ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ;

(ಈ) ಬೆಂಗಳೂರು ತುಮಕೂರು ರಸ್ತೆಯಲ್ಲಿ ಬರುವ ಎರಡು ಟೋಲ್ ಪ್ಲಾಜಗಳಲ್ಲಿ ಅವಧಿ ಮೀರಿದ್ದರೂ ಅನಧಿಕೃತವಾಗಿ ಟೋಲ್ ಸಂಗ್ರಹಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; ಇಲ್ಲಿಯವರೆಗೆ ಅವರು ಅನಧಿಕೃತವಾಗಿ ಸಂಗ್ರಹ ಮಾಡಿರುವ ಸುಂಕ ಎಷ್ಟು; ಇದನ್ನು ಮರು ವಸೂಲಿ ಮಾಡಲು ರಾಜ್ಯ ಸರ್ಕಾರ ಕ್ರಮ ಕೈಗೊಂಡಿದೆಯೇ; ಸರ್ಕಾರ ಇಲ್ಲಿಯವರೆಗೆ ಅವರ ಮೇಲೆ ಏಕೆ ಕ್ರಮ ಕೈಗೊಂಡಿರುವುದಿಲ್ಲ;

(ಉ) ತುಮಕೂರು, ಶಿವಮೊಗ್ಗ ರಾಷ್ಟ್ರೀಯ ಹೆದ್ದಾರಿಯಲ್ಲಿ ತುಮಕೂರಿನಿಂದ ಕೆ.ಬಿ ಕ್ರಾಸ್ ಮಧ್ಯದಲ್ಲಿ ಬರುವ ರಾಷ್ಟ್ರೀಯ ಹೆದ್ದಾರಿಯ ಕಾಮಗಾರಿ ಅಪೂರ್ಣವಾಗಿದ್ದರೂ ಕಳೆದ ಎರಡು ವರ್ಷಗಳಿಂದ ಟೋಲ್ ಸಂಗ್ರಹ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವರ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ; ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲು ಮಾಡದಿರಲು ಕಾರಣವೇನು?

## ಇ–ಸ್ಟಾಂಪಿಂಗ್ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೮೨೭ (೯೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ಕರ್ನಾಟಕದಲ್ಲಿ ಎಂದಿನಿಂದ ಇ–ಸ್ಟಾಂಪಿಂಗ್ ವ್ಯವಸ್ಥೆಯನ್ನು ಜಾರಿಗೆ ತಂದಿರುತ್ತದೆ ;

(ಆ) ರಾಜ್ಯ ಸರ್ಕಾರ ನೋಂದಾವಣೆ ಇಲಾಖೆಯ ಮೂಲಕ ಯಾವ ಖಾಸಗಿ ಸಂಸ್ಥೆಗೆ ಇ–ಸ್ಟಾಂಪಿಂಗ್ ಜೊತೆ ಒಪ್ಪಂದವನ್ನು ಮಾಡಿಕೊಂಡಿರುತ್ತದೆ ; ಅವರಿಗೆ ನೀಡುತ್ತಿರುವ ಕಮಿಷನ್ ಶೇಕಡವಾರು ಕಮಿಷನ್ ಎಷ್ಟು ; ಯೋಜನೆ ಪ್ರಾರಂಭವಾದ ದಿನದಿಂದ ಇಲ್ಲಿಯವರೆಗೆ ಆ ಸಂಸ್ಥೆಗೆ ಎಷ್ಟು ಕಮಿಷನ್ ಪಾವತಿ ಮಾಡಲಾಗಿರುತ್ತದೆ ;

(ಇ) ಇ–ಸ್ಟಾಂಪಿಂಗ್ ಸಂಬಂಧ ಖಾಸಗಿ ಸಂಸ್ಥೆಯೊಂದಿಗೆ ಮಾಡಿಕೊಂಡಿರುವ ಕರಾರಿನ ಅವಧಿ ಎಷ್ಟು ; ಕರಾರಿನ ಪ್ರತಿ ಮತ್ತು ವಿವರಗಳನ್ನು ಒದಗಿಸುವುದು ;

(ಈ) ರಾಜ್ಯ ಸರ್ಕಾರದ ನೋಂದಾವಣೆ ಇಲಾಖೆಯ ರಾಜ್ಯದಲ್ಲಿ ಒಟ್ಟು ಎಷ್ಟು ಸಂಸ್ಥೆಗಳಿಗೆ ಇ–ಸ್ಟಾಂಪಿಂಗ್ ಮಾರಾಟ ಮಾಡಲು ಅವಕಾಶ ನೀಡಿರುತ್ತದೆ ; ಪ್ರತಿ ವರ್ಷ ಎಷ್ಟು ಸಂಸ್ಥೆಗಳಿಗೆ ಕಮಿಷನ್ ರೂಪದಲ್ಲಿ ಹಣ ಪಾವತಿ ಮಾಡಲಾಗುತ್ತಿದೆ ? (ಜಿಲ್ಲಾವಾರು ಸಂಸ್ಥೆಗಳ ವಿವರಗಳನ್ನು ಮತ್ತು ಅವರಿಗೆ ನೀಡಿರುವ ಕಮಿಷನ್ ವಿವರಗಳನ್ನು ನೀಡುವುದು)

## ಮೀನುಗಾರಿಕೆ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೮೨೮ (೯೭೧) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಕಾರ್ಯಕ್ರಮಗಳಡಿ

ಯಾವ ಯಾವ ಕಾರ್ಯಕ್ರಮಗಳನ್ನು ಈ ಕಾರ್ಯಕ್ರಮಗಳ ಫಲಾನುಭವಿಗಳು ಎಷ್ಟು ಮಂದಿ ; (ಹೆಸರು ಸಹಿತ ವಿಳಾಸ ಸಹಿತ ಪೂರ್ಣ ವಿವರಗಳನ್ನು ನೀಡುವುದು)

(ಆ) ಸದರಿ ತಾಲ್ಲೂಕಿನಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಕೆರೆಗಳಲ್ಲಿ ಮೀನು ಮರಿ ಬಿತ್ತನೆ/ಫಿಶ್ ಫಾರ್ಮಿಂಗ್ ಮಾಡಲಾಗಿರುತ್ತದೆ ; ಮಾಡಿದ್ದಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿರುತ್ತದೆ ; (ಪೂರ್ಣ ವಿವರಗಳನ್ನು ನೀಡುವುದು)

(ಇ) ಈ ತಾಲ್ಲೂಕಿನಲ್ಲಿ ಮೀನುಗಾರಿಕೆ ವಸತಿ ಯೋಜನೆಯ ಅಡಿಯಲ್ಲಿ ಮನೆಗಳನ್ನು ಹಂಚಿಕೆ ಮಾಡಲು ಫಲಾನುಭವಿಗಳ ಆಯ್ಕೆ ಸಮಿತಿ ರಚಿಸಲಾಗಿದೆಯೇ ; ಸಮಿತಿ ರಚಿಸಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಎಷ್ಟು ಸಭೆಗಳನ್ನು ನಡೆಸಲಾಗಿದೆ ; ನಡೆಸಿದ್ದಲ್ಲಿ ಸಭೆಯ ನಡವಳಿಕೆಗಳ ಪ್ರತಿಯನ್ನು ಒದಗಿಸುವುದು ;

(ಈ) ಕಳೆದ ಮೂರು ವರ್ಷಗಳಲ್ಲಿ ಮೀನುಗಾರರ ವಸತಿ ಯೋಜನೆಯ ಅಡಿಯುಲ್ಲಿ ಚಿಕ್ಕನಾಯುಕನಹಳ್ಳಿ ತಾಲ್ಲೂಕಿನಲ್ಲಿ ಎಷ್ಟು ಫಲಾನುಭವಿಗಳಿಗೆ ವಸತಿ ಹಂಚಿಕೆ ಆಗಿರುತ್ತದೆ ; ಆಗಿದ್ದಲ್ಲಿ ಫಲಾನುಭವಿಗಳ ಪೂರ್ಣ ವಿವರಗಳನ್ನು ಒದಗಿಸುವುದು ;

(ಉ) ಸದರಿ ತಾಲ್ಲೂಕಿನ ಮೀನುಗಾರಿಕೆ ಇಲಾಖೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಮೀನುಗಾರಿಕೆ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆಯಲ್ಲಿ ಎಷ್ಟು ಫಲಾನುಭವಿಗಳಿಗೆ ಸಹಾಯಧನ ಬಿಡುಗಡೆ ಮಾಡಲಾಗಿದೆ ? (ಫಲಾನುಭವಿಗಳ ಪೂರ್ಣ ವಿವರಗಳನ್ನು ಒದಗಿಸುವುದು)

# ಭೂ ದಾಖಲೆಗಳನ್ನು (ಆರ್‌ಟಿಸಿ/ಪಹಣಿ) ಸಮಯಕ್ಕೆ ಸರಿಯಾಗಿ ನವೀಕರಿಸದಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೮೨೯ (೮೮೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭೂ ದಾಖಲೆಗಳನ್ನು (ಆರ್‌ಟಿಸಿ/ಪಹಣಿ) ಸಮಯಕ್ಕೆ ಸರಿಯಾಗಿ ನವೀಕರಿಸದಿರುವುದರಿಂದ ರೈತರಿಗೆ ಸಾಲ ಮತ್ತು ಬೆಳೆ ವಿಮೆಗಾಗಿ ತೊಂದರೆ ಉಂಟಾಗುತ್ತಿದೆಯೇ ;

(ಆ) ೧೦–೧೫ ವರ್ಷಗಳಿಗೂ ಹೆಚ್ಚು ಕಾಲ ಬಾಕಿ ಇರುವ ಭೂ ಮಾಲೀಕತ್ವದ ವಿವಾದಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ನೋಂದಾಯಿತ ಭೂ ವಹಿವಾಟಿನ ನಂತರವೂ ಎಷ್ಟು ರೈತರು ರೂಪಾಂತರ ನಮೂದುಗಳಿಗಾಗಿ ಕಾಯುತ್ತಿದ್ದಾರೆ ;

(ಈ) ಅತಿಕ್ರಮಣ ಮತ್ತು ನಕಲಿ ದಾಖಲೆಗಳನ್ನು ತಡೆಗಟ್ಟಲು ಎಲ್ಲಾ ಕೃಷಿ ಭೂಮಿಯನ್ನು ಡಿಜಿಟಲ್ ನಕ್ಷೆ ಮಾಡುವ ಯೋಜನೆ ಇದೆಯೇ ? (ಮಾಹಿತಿ ನೀಡುವುದು)

# ಬೆಂಗಳೂರು ಜಿಲ್ಲೆಯ ಜಿಲ್ಲಾಧಿಕಾರಿ ಮತ್ತು ಎ.ಸಿ.ಕಛೇರಿಯಲ್ಲಿ ಭೂ ಪರಿವರ್ತನೆ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೮೩೦ (೮೮೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿ ಮತ್ತು ಎ.ಸಿ ಕಛೇರಿಗಳಲ್ಲಿ ಎಷ್ಟು ಭೂ ಪರಿವರ್ತನೆ ಮತ್ತು ಕಂದಾಯ ಸಂಬಂಧಿತ ಅರ್ಜಿಗಳು ಬಾಕಿ ಇವೆ ; (ಮಾಹಿತಿ ನೀಡುವುದು)

(ಆ) ಜಾತಿ ಆದಾಯ ಮತ್ತು ನಿವಾಸ ಪ್ರಮಾಣ ಪತ್ರ ಅರ್ಜಿಗಳನ್ನು ವಿಲೇವಾರಿ ಮಾಡಲು ತೆಗೆದುಕೊಳ್ಳುವ ಸರಾಸರಿ ಸಮಯ ಎಷ್ಟು;

(ಇ) ಖಾತಾ ವರ್ಗಾವಣೆ ಮತ್ತು ಭೂ ದಾಖಲೆ ನವೀಕರಣಗಳಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರಿಪಡಿಸಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ; (ಮಾಹಿತಿ ನೀಡುವುದು)

(ಈ) ಡಿ.ಸಿ. ಮತ್ತು ಎ.ಸಿ ಕಛೇರಿಗಳಲ್ಲಿ ಭ್ರಷ್ಟಾಚಾರ ಮತ್ತು ಮಧ್ಯವರ್ತಿಗಳ ಹಸ್ತಕ್ಷೇಪವನ್ನು ತಡೆಯಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;

(ಉ) ಸಾರ್ವಜನಿಕ ಕುಂದು ಕೊರತೆಗಳನ್ನು ಕಡಿಮೆ ಮಾಡಲು ಮತ್ತು ಕಂದಾಯ ಕಛೇರಿಗಳಲ್ಲಿ ಸೇವಾ ವಿತರಣೆಯನ್ನು ಸುಧಾರಿಸಲು ಸರ್ಕಾರ ಯಾವ ಕ್ರಮಗಳನ್ನು ಜಾರಿಗೆ ತರಲು ಉದ್ದೇಶಿಸಿದೆ;

(ಊ) ಬೆಂಗಳೂರು ನಗರ ಜಿಲ್ಲಾಧಿಕಾರಿ ಮತ್ತು ಎ.ಸಿ ಕಛೇರಿಗಳಲ್ಲಿ ಸಿಬ್ಬಂದಿ ಕೊರತೆ ಇದೆಯೇ; ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು; (ವಿವರಗಳನ್ನು ಒದಗಿಸುವುದು)

(ಋ) ಬೆಂಗಳೂರಿನಲ್ಲಿ ಹೆಚ್ಚಾಗುತ್ತಿರುವ ಕೆಲಸದ ಹೊರೆಯಿಂದಾಗಿ ಎ.ಸಿ ಕಛೇರಿಗಳಲ್ಲಿ ಮೂಲಸೌಕರ್ಯ ಮತ್ತು ಮಾನವ ಶಕ್ತಿಯನ್ನು ಬಲಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

## ರಾಜ್ಯದಲ್ಲಿ ಸರ್ಕಾರಿ ಭೂಮಿ ಅತಿಕ್ರಮಣ ಮಾಡಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೮೩೧ (೮೮೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಎಷ್ಟು ಸರ್ಕಾರಿ ಭೂಮಿಯನ್ನು ಅತಿಕ್ರಮಣ ಮಾಡಲಾಗಿದೆ ಮತ್ತು ಎಷ್ಟು ವಶಪಡಿಸಿಕೊಳ್ಳಲಾಗಿದೆ ;

(ಆ) ಸಣ್ಣ ರೈತರು ತಕ್ಷಣದ ತೆರವು ಎದುರಿಸುತ್ತಿರುವಾಗ ಪ್ರಬಲ ಅತಿಕ್ರಮಣದಾರರ ವಿರುದ್ಧ ಕ್ರಮ ತೆಗೆದುಕೊಳ್ಳಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ;

(ಇ) ಸಾರ್ವಜನಿಕರಿಗೆ ಲಭ್ಯವಿರುವ ಅತಿಕ್ರಮಣಗೊಂಡ ಗೋಮಾಳ (ಮೇಯಿಸುವಿಕೆ) ಭೂಮಿಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಪಟ್ಟಿ ಒದಗಿಸುವುದು)

## PWD ಇಲಾಖೆಯಲ್ಲಿ ಖಾಲಿ ಹುದ್ದೆಗಳ ನೇಮಕಾತಿ ತಡವಾಗುತ್ತಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೮೩೨ (೮೮೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) PWD ಇಲಾಖೆಯಲ್ಲಿ ಖಾಲಿ ಹುದ್ದೆಗಳು ಇದ್ದರೂ ನೇಮಕಾತಿ ಏಕೆ ತಡವಾಗುತ್ತಿದೆ ಹಾಗೂ ಗುತ್ತಿಗೆ ಆಧಾರಿತ ಕೆಲಸಗಳು ಹೆಚ್ಚಾಗುತ್ತಿರುವುದರಿಂದ ಶಾಶ್ವತ ಉದ್ಯೋಗಾವಕಾಶಗಳು ಏಕೆ ಕಡಿಮೆ ಆಗುತ್ತಿವೆ ; (ವಿವರ ನೀಡುವುದು)

(ಆ) ಹೊಸ ಪದವೀಧರರಿಗೆ (Freshers) PWD ಇಲಾಖೆಯಲ್ಲಿ ಅವಕಾಶಗಳು ಕಡಿಮೆಯಾಗಲು ಕಾರಣವೇನು ;

(ಇ) ಕೌಶಲ್ಯ ಹೊಂದಾಣಿಕೆಯ ಕೊರತೆ (Skill Mismatch) ನಿರುದ್ಯೋಗಕ್ಕೆ ಕಾರಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಈ) ತರಬೇತಿ ಮತ್ತು ಇಂಟರ್ನ್‌ಶಿಪ್ ಕಾರ್ಯಕ್ರಮಗಳ ಕೊರತೆ ಉದ್ಯೋಗಾವಕಾಶಗಳಿಗೆ ಹೇಗೆ ಅಡ್ಡಿಯಾಗುತ್ತಿದೆ ;

(ಉ) ತಂತ್ರಜ್ಞಾನ (Automation Digital Tools) ಬಳಕೆ ಉದ್ಯೋಗಾವಕಾಶವನ್ನು ಹೇಗೆ ಬದಲಾಯಿಸುತ್ತಿದೆ ?

## ರಾಜ್ಯದಲ್ಲಿ ಪೋಡಿ ಪ್ರಕರಣಗಳ ಇತ್ಯರ್ಥ ಮಾಡುವಲ್ಲಿ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೩ (೯೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಪೋಡಿಗಾಗಿ ಬಾಕಿ ಇರುವ ಒಟ್ಟು ಅರ್ಜಿಗಳೆಷ್ಟು ; ಕಳೆದ ೩ ವರ್ಷದಿಂದ ಇತ್ಯರ್ಥಗೊಂಡಿರುವ ಮತ್ತು ತಿರಸ್ಕಾರಗೊಂಡಿರುವ ಅರ್ಜಿಗಳೆಷ್ಟು ; ಬಾಕಿ ಇರುವ ಅರ್ಜಿಗಳೆಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಪೋಡಿಗಾಗಿ ಸಲ್ಲಿಕೆಯಾಗಿರುವ ಅರ್ಜಿಗಳ ಇತ್ಯರ್ಥ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿಳಂಬಕ್ಕೆ ಕಾರಣವೇನು ; ಪ್ರಸ್ತುತ ಪೋಡಿ ಇತ್ಯರ್ಥಕ್ಕೆ ಅನುಸರಿಸುತ್ತಿರುವ ಮಾನದಂಡವೇನು ; ಪೋಡಿ ಇತ್ಯರ್ಥಕ್ಕೆ ಪ್ರತ್ಯೇಕ ತಂಡ ಇದೆಯೇ ;

(ಇ) ಬಾಕಿ ಇರುವ ಅರ್ಜಿಗಳನ್ನು ತಕ್ಷಣ ವಿಲೇವಾರಿ ಮಾಡಬೇಕೆಂದು ಸರ್ಕಾರ ಸೂಚನೆ ನೀಡಿದೆಯೇ ; ನೀಡಿದ್ದಲ್ಲಿ ೨೦೨೬, ಜನವರಿ ಅಂತ್ಯದವರೆಗೆ ಎಷ್ಟು ಅರ್ಜಿಗಳು ಇತ್ಯರ್ಥಗೊಂಡಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಸರ್ಕಾರದ ಸೂಚನೆಯನ್ನು ಪಾಲಿಸದೆ ಅನಗತ್ಯವಾಗಿ ಅರ್ಜಿಗಳನ್ನು ಇತ್ಯರ್ಥ ಮಾಡುವಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿರುವ ಎಷ್ಟು ಅಧಿಕಾರಿಗಳ ಮೇಲೆ ಸರ್ಕಾರ ಕ್ರಮ ಕೈಗೊಂಡಿದೆ ;

(ಉ) ಪೋಡಿ ಅರ್ಜಿಗಳ ವಿಲೇವಾರಿ ವಿಳಂಬದಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಬಾಕಿ ಇರುವ ಅರ್ಜಿಗಳನ್ನು ಯಾವ ಕಾಲಮಿತಿಯಲ್ಲಿ ಇತ್ಯರ್ಥ ಪಡಿಸಲಾಗುವುದು ?

## ಕಂದಾಯ ಮತ್ತು ಅರಣ್ಯ ಇಲಾಖೆಗಳೆರಡೂ ಭೂಮಿ ಕಾಯ್ದಿರಿಸಿ ಆದೇಶ ಹೊರಡಿಸುತ್ತಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೪ (೯೨೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಭೂಮಿಗಳ ರಕ್ಷಣೆ, ವಿಲೇವಾರಿ ಜವಾಬ್ದಾರಿ ಹಾಗೂ ಇತರೆ ಎಲ್ಲಾ ಭೂಮಿಗಳ ಹಕ್ಕು ದಾಖಲೆಗಳನ್ನು ನಿರ್ವಹಿಸುವ ಜವಾಬ್ದಾರಿ ಕಂದಾಯ ಅಥವಾ ಅರಣ್ಯ ಇಲಾಖೆಯ ವ್ಯಾಪ್ತಿಗೆ ಒಳಪಡುವುದೇ ; (ಮಾಹಿತಿ ನೀಡುವುದು)

(ಆ) ಅದೇ ರೀತಿ ಸರ್ಕಾರಿ ಭೂಮಿಗಳ ಲಭ್ಯತೆ ಮತ್ತು ವಿಲೇವಾರಿ ಮಾಹಿತಿಯು ಕಂದಾಯ ಇಲಾಖೆಯು ನಿರ್ವಹಿಸುವ ಮ್ಯೂಟೇಷನ್ ಮತ್ತು ಪಹಣಿ ದಾಖಲೆಗಳನ್ನು ಹೊರತುಪಡಿಸಿ ಅರಣ್ಯ ಇಲಾಖೆಯ ದಾಖಲೆಗಳಿಂದ ತಿಳಿಯಬಹುದೇ ;

(ಇ) ಕಂದಾಯ ಇಲಾಖೆಯಲ್ಲಿರುವ ಸರ್ಕಾರಿ ಭೂಮಿಗಳನ್ನು ಅರಣ್ಯ ಉದ್ದೇಶಕ್ಕೆ ಸರ್ಕಾರದ ಮಟ್ಟದಲ್ಲಿ ಅರಣ್ಯ ಇಲಾಖೆಯಿಂದ ಕರ್ನಾಟಕ ಅರಣ್ಯ ಕಾಯ್ದೆ ೧೯೬೩ರ ಅಧ್ಯಾಯ ೨ ಮತ್ತು ೩ ರಡಿ ಅಧಿಸೂಚನೆ ಹೊರಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಭೂ ಕಂದಾಯ ಕಾಯ್ದೆ ೧೯೬೪ ರ ಕಲಂ ೭೧ರಡಿ ಸಾರ್ವಜನಿಕ ಉದ್ದೇಶಕ್ಕೆ ಅಂದರೆ ಅರಣ್ಯ ಉದ್ದೇಶಕ್ಕೂ ಸೇರಿದಂತೆ ವಿಸ್ತೀರ್ಣ ಮಿತಿ ಇಲ್ಲದೇ ಅರಣ್ಯ ಉದ್ದೇಶಕ್ಕೆ ಸರ್ಕಾರಿ ಜಮೀನನ್ನು ಕಾಯ್ದಿರಿಸಲು ಜಿಲ್ಲಾಧಿಕಾರಿಗಳಿಗೆ ಅಧಿಕಾರವಿರುವುದು ನಿಜವೇ ;

(ಉ) ಸರ್ಕಾರಿ ಭೂಮಿಯನ್ನು ಈ ರೀತಿ ಒಂದೇ ಉದ್ದೇಶಕ್ಕೆ ೨ ಕಾಯ್ದೆಗಳಡಿ ೨ ಇಲಾಖೆಗಳಿಗೆ ಕಾಯ್ದಿರಿಸಿರುವ ಅಧಿಕಾರ ನೀಡಿರುವುದು ಅಲ್ಲದೇ ಕಂದಾಯ ಇಲಾಖೆಯ ಅಧೀನದ ಭೂಮಿಗಳನ್ನು ಅರಣ್ಯ ಇಲಾಖೆವತಿಯಿಂದ ಅರಣ್ಯ ಕಾಯ್ದೆಯಡಿ ಸರ್ಕಾರದ ಮಟ್ಟದಲ್ಲಿ ಅಧಿಸೂಚನೆ ಹೊರಡಿಸುವುದರಿಂದ ಕಂದಾಯ ಇಲಾಖೆಯ ಹಕ್ಕು ದಾಖಲೆಗಳು ಕಾಲಕಾಲಕ್ಕೆ ಅಪ್ ಡೇಟ್ ಆಗದೇ ಗೊಂದಲ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಗೊಂದಲವನ್ನು ಸರಿಪಡಿಸುವ ವಿಚಾರದಲ್ಲಿ ಸರ್ಕಾರದ ನಿಲುವೇನು ;

(ಊ) ಸರ್ಕಾರಿ ಭೂಮಿಯನ್ನು ಅರಣ್ಯಕ್ಕಾಗಿ ಕಾಯ್ದಿರಿಸುವ ಅಧಿಕಾರವನ್ನು ಯಾವುದಾದರೂ ಒಂದು ಇಲಾಖೆಗೆ ವಹಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಬೇಲೂರು–ಹಾಸನ ರಸ್ತೆ ಅಭಿವೃದ್ಧಿ ಕಾಮಗಾರಿ ಸ್ಥಗಿತಗೊಂಡಿರುವ ಬಗ್ಗ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೫ (೯೨೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೇಲೂರು–ಹಾಸನ ರಸ್ತೆ ಅಭಿವೃದ್ಧಿಗೆ ಮಂಜೂರಾಗಿರುವ ಅನುದಾನವೆಷ್ಟು ; ಈ ರಸ್ತೆ ಕಾಮಗಾರಿಯ ಗುತ್ತಿಗೆಯನ್ನು ಯಾರಿಗೆ ನೀಡಲಾಗಿದೆ ;

(ಆ) ಕಾಮಗಾರಿಯನ್ನು ಪ್ರಾರಂಭಿಸಿ ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಾಮಗಾರಿ ಸ್ಥಗಿತಕ್ಕೆ ಕಾರಣಗಳೇನು ;

(ಇ) ಸ್ಥಗಿತಗೊಂಡಿರುವ ಕಾಮಗಾರಿಯನ್ನು ಪುನಃ ಯಾವಾಗ ಪ್ರಾರಂಭಿಸಲಾಗುವುದು ; ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ;

(ಈ) ಬೇಲೂರು–ಚಿಕ್ಕಮಗಳೂರು ರಸ್ತೆ ಅಭಿವೃದ್ಧಿಗೆ ಅನುದಾನ ಮಂಜೂರಾಗಿದೆಯೇ ; ಈ ಕಾಮಗಾರಿಗೆ ಡಿಪಿಆರ್ ತಯಾರಿಸಲಾಗಿದೆಯೇ ; ಟೆಂಡರ್ ಕರೆಯಲಾಗಿದೆಯೇ ; ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

## ಗುತ್ತಿಗೆದಾರರಿಗೆ ಬಾಕಿ ಹಣ ಪಾವತಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೬ (೯೨೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಸರ್ಕಾರ ಮಂಡಿಸಿರುವ ಆಯವ್ಯಯದಲ್ಲಿ ಲೋಕೋಪಯೋಗಿ ಇಲಾಖೆಗೆ ಮೀಸಲಿಟ್ಟಿರುವ ಮಂಜೂರು ಮಾಡಿರುವ ಅನುದಾನ ಎಷ್ಟು; (ವರ್ಷವಾರು ವಿವರ ನೀಡುವುದು)

(ಆ) ಮಂಜೂರಾದ ಅನುದಾನದಲ್ಲಿ ಹೊಸ ರಸ್ತೆಗಳ ನಿರ್ಮಾಣಕ್ಕಾಗಿ ಮುಂದುವರೆದ ಕಾಮಗಾರಿಗಳಿಗಾಗಿ ಮತ್ತು ಗುತ್ತಿಗೆದಾರರಿಗೆ ಬಾಕಿ ಬಿಲ್ ಪಾವತಿಗಾಗಿ ಬಳಕೆ ಆಗಿರುವ ಅನುದಾನ ಎಷ್ಟು; (ವರ್ಷವಾರು ವಿವರ ನೀಡುವುದು)

(ಇ) ಪ್ರಸ್ತುತ ಗುತ್ತಿಗೆದಾರರಿಗೆ ಎಷ್ಟು ಹಣ ನೀಡಲು ಬಾಕಿ ಇದೆ ; ಬಾಕಿ ಹಣ ಬಿಡುಗಡೆಗೆ ಗುತ್ತಿಗೆದಾರರು ಆಗ್ರಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಗುತ್ತಿಗೆದಾರರಿಗೆ

ಬಾಕಿ ಹಣ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಯಾವ ಕಾಲಮಿತಿಯೊಳಗೆ ಗುತ್ತಿಗೆದಾರರಿಗೆ ಬಾಕಿ ಹಣ ಪಾವತಿಸಲಾಗುವುದು ;

(ಈ) ೨೦೨೫–೨೬ನೇ ಸಾಲಿನಲ್ಲಿ ಹೊಸ ರಸ್ತೆಗಳ ನಿರ್ಮಾಣಕ್ಕೆ ಹಾಗೂ ಮುಂದುವರೆದ ಕಾಮಗಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು? (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

## ಶ್ರೀ ಧರ್ಮರಾಯಸ್ವಾಮಿ ದೇವಸ್ಥಾನಕ್ಕೆ ಸೇರಿದ ಜಾಗದ ಕುರಿತು

**ಶ್ರೀ ಎನ್. ರವಿ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೭ (೮೫೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ತಿಗಳರ ಪೇಟೆಯಲ್ಲಿರುವ ಶ್ರೀ ಧರ್ಮರಾಯಸ್ವಾಮಿ ದೇವಾಲಯಕ್ಕೆ ಸೇರಿದ ಬೆಂಗಳೂರು ನಗರ ಜಿಲ್ಲೆಯ 'ನೀಲಸಂದ್ರ ಗ್ರಾಮದ ಸರ್ವೆ ನಂ–೭೯ ರಲ್ಲಿ ೧೫ ಎಕರೆ ೧೨ ಗುಂಟೆ ಮತ್ತು ಹೊಂಗಸಂದ್ರ ಗ್ರಾಮದ ಸರ್ವೆ ನಂ ೩೩ರಲ್ಲಿ ೧೬ ಎಕರೆ ೨೫ ಗುಂಟೆ ದೇವಸ್ಥಾನಕ್ಕೆ ಸೇರಿದ ಭೂಮಿಯು ಅತಿಕ್ರಮವಾಗಿ ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದರಿ ಜಾಗವನ್ನು ಸರ್ಕಾರದ ವಶಕ್ಕೆ ಪಡೆಯಲು ಕೈಗೊಂಡ ಕ್ರಮಗಳೇನು ;

(ಆ) ಶ್ರೀ ಧರ್ಮರಾಯಸ್ವಾಮಿ ದೇವಾಲಯಕ್ಕೆ ಸೇರಿದ ನೀಲಸಂದ್ರ ಗ್ರಾಮದ ಸರ್ವೆ ನಂ–೭೯ ರಲ್ಲಿ ೧೫ ಎಕರೆ ೧೨ ಗುಂಟೆ ಜಾಗದಲ್ಲಿ ಅನಧಿಕೃತವಾಗಿ ಒತ್ತುವರಿ ಮಾಡಿ ಅಕ್ರಮವಾಗಿ ನಿರ್ಮಿಸಿರುವ ಮನೆಗಳಿಗೆ/ಕಟ್ಟಡಗಳಿಗೆ ಬಿ.ಬಿ.ಎಂ. ಪಿ ವತಿಯಿಂದ ಸೌಲಭ್ಯಗಳನ್ನು ಕಲ್ಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಸರ್ಕಾರದ ಅನುಮತಿ ಪಡೆಯದೆ ಬಿ.ಬಿ.ಎಂ.ಪಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರವು ಆಕ್ಷೇಪಣೆಯನ್ನು ಸಲ್ಲಿಸಿರುವುದು ಯಾವಾಗ ; (ವಿವರ ನೀಡುವುದು)

(ಇ) ಈ ಅಕ್ರಮಗಳಿಗೆ ಸಹಕರಿಸಿದ ಎಷ್ಟು ಅಧಿಕಾರಿಗಳ ಮೇಲೆ ಕಾನೂನು ಕ್ರಮಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಮಸೀದಿಗಳ ಕುರಿತು

**ಶ್ರೀ ಎನ್. ರವಿ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೮ (೮೫೧) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಮಸೀದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಮಸೀದಿಯನ್ನು ನಿರ್ಮಿಸಲು ಇರುವ ನಿಯಮಗಳೇನು ಯಾವ ಜಾಗದಲ್ಲಿ ಮಸೀದಿಗಳನ್ನು ನಿರ್ಮಿಸಬಹುದಾಗಿದೆ ;

(ಇ) ಕಳೆದ ಮೂರು ವರ್ಷಗಳಲ್ಲಿ ಮಸೀದಿ ನಿರ್ಮಾಣಕ್ಕೆ ಅನುಮತಿ ಕೋರಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಮಸೀದಿಗಳನ್ನು ನಿರ್ಮಿಸಲು ಅನುಮತಿಯುನ್ನು ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಮನೆಗಳನ್ನು ನಿರ್ಮಿಸಲು ಅನುಮತಿ ಪಡೆದು ಮಸೀದಿ ನಿರ್ಮಿಸಿದ ಕುರಿತು ಎಷ್ಟು ದೂರುಗಳು ದಾಖಲಾಗಿವೆ ; ಈ ಮನೆಗಳ ಅನುಮತಿಯಲ್ಲಿ ನಿರ್ಮಿಸಿದ ಎಷ್ಟು ಅಕ್ರಮ ಮಸೀದಿಗಳನ್ನು ತೆರವುಗೊಳಿಸಲು ನೋಟಿಸ್ ನೀಡಲಾಗಿದೆ ? (ವಿವರ ನೀಡುವುದು)

## ಕುರಾನ್ ಪಾಠದ ಕುರಿತು

**ಶ್ರೀ ಎನ್. ರವಿ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೬ (೮೬೧) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮದರಸಗಳಲ್ಲಿ ಕುರಾನ್ ಪಾಠ ಮಾಡಲಾಗುತ್ತಿದೆಯೇ ಕುರಾನ್ ಪುಸ್ತಕದಲ್ಲಿನ ಸುರ ಆಯತ್ 3:85. ಸುರ ವರ್ಸೆ 9:5, 8:12. 3:118, 3:28. 9:23. 66:9, ಮುಂತಾದ ಕುರಾನ್‌ನಲ್ಲಿರುವ ವಾಕ್ಯಗಳು ಭಾರತದ ಸಂವಿಧಾನದ ಆಶಯಕ್ಕೆ ವಿರುದ್ಧವಾಗಿವೆ ಎಂಬುದರ ಕುರಿತು ಸರ್ಕಾರದ ನಿಲುವೇನು ; ಕುರಾನ್‌ನಲ್ಲಿರುವ ಈ ವಾಕ್ಯಗಳ ಅರ್ಥದೊಂದಿಗೆ ವಿವರ ನೀಡುವುದು ;

(ಆ) ೩ ರಿಂದ ೧೦ ವರ್ಷಗಳ ಒಳಗಿನ ಮಕ್ಕಳಲ್ಲಿ ಸಮಾಜದ ಇತರ ಧರ್ಮಗಳ ವಿರುದ್ಧವಾದ ದ್ವೇಷ ಭಾವನೆಗಳನ್ನು ತುಂಬುವ ಇಂತಹ ಪಾಠಗಳನ್ನು ಮದರಸಗಳಲ್ಲಿ ಮಾಡುವುದರಿಂದ ಸಮಾಜದಲ್ಲಿ ಶಾಂತಿ ಸುವ್ಯವಸ್ಥೆಗೆ ಭಂಗವುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ;

(ಇ) ಮದರಸಗಳಲ್ಲಿ ಇಂತಹ ಶಿಕ್ಷಣವನ್ನು ಅತೀ ಸಣ್ಣ ವಯಸ್ಸಿನಲ್ಲೆ ಪಡೆಯುವ ಮಕ್ಕಳು ಸಮಾಜ ಕಂಟಕರಾಗಿ ದೇಶದ ಆಸ್ತಿ ಪಾಸ್ತಿಗಳನ್ನು ನಾಶ ಪಡಿಸುವಲ್ಲಿ ಪ್ರಮುಖರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಂತಹ ಮದರಸಗಳ ಕುರಿತು ಮತ್ತು ಅದರಲ್ಲಿನ ಶಿಕ್ಷಕರ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ವಕ್ಫ್ ಆಸ್ತಿಗಳ ಕಬಳಿಕೆ ಕುರಿತು

**ಶ್ರೀ ಟಿ. ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪೦ (೮೮೭) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ವಕ್ಫ್ ಆಸ್ತಿಗಳು ಕಬಳಿಕೆಯಾಗಿವೆ ಮತ್ತು ವಕ್ಫ್‌ಗೆ ಸೇರಿದ ಆಸ್ತಿ ಕಬಳಿಕೆಯ ಆರೋಪಕ್ಕೆ ಗುರಿಯಾಗಿರುವವರ ಹೆಸರಿನ ಸಹಿತ ವಿವರ ನೀಡುವುದು ;

(ಆ) ಈ ಆಸ್ತಿಯನ್ನು ಮರಳಿ ವಕ್ಫ್ ವಶಕ್ಕೆ ಪಡೆಯಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು ಹಾಗೂ ಅನ್ವರ್ ಮಾಣಪ್ಪಾಡಿಯವರ ವರದಿಯ ಮೇಲೆ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ನೀಡುವುದು ;

(ಇ) ರಾಜ್ಯದಲ್ಲಿ ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ ರೈತರು ಮತ್ತು ವಕ್ಫ್ ಮಂಡಳಿಗೂ ಮಧ್ಯೆ ಎಷ್ಟು ಪ್ರಕರಣಗಳಿವೆ ; ಪ್ರಕರಣಗಳು ಪ್ರಸ್ತುತ ಯಾವ ಹಂತದಲ್ಲಿವೆ ? (ನ್ಯಾಯಾಂಗ ವಿತರಣೆ ಪ್ರಕರಣದ ಸಂಖ್ಯೆ ಆಸ್ತಿ ವಿವರ ಸಹಿತ ಸಂಪೂರ್ಣ ಮಾಹಿತಿ ನೀಡುವುದು)

## ಕರ್ನಾಟಕ ರಾಜ್ಯ ಸಾರಿಗೆ ಇಲಾಖೆಯ ವಿವಿಧ ನಿಗಮಗಳ ಅಡಿಯಲ್ಲಿರುವ ಬಸ್ಸುಗಳ ಹಾಗೂ ಬಸ್ ನಿಲ್ದಾಣಗಳ ಮೇಲೆ ಹಾಕಿರುವ ವಿವಿಧ ಕಂಪನಿಗಳ ಜಾಹೀರಾತುಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೮೪೧ (೯೨೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸಾರಿಗೆ ಇಲಾಖೆಯ ಬಸ್ಸುಗಳ ಹಾಗೂ ಬಸ್ ನಿಲ್ದಾಣಗಳ ಮೇಲೆ ವಿವಿಧ ಕಂಪನಿಗಳ ಜಾಹೀರಾತುಗಳನ್ನು ಅಳವಡಿಸಲು

ಇರುವ ನಿಯಮ ಹಾಗೂ ಮಾನದಂಡಗಳು ಯಾವುವು ; ಸರ್ಕಾರ ಇಲಾಖೆಯು ಯಾವ ಕಾನೂನಿನ ಅಡಿಯಲ್ಲಿ ಜಾಹೀರಾತುಗಳನ್ನು ಅಳವಡಿಸಲು ಅವಕಾಶ ಕಲ್ಪಿಸಲಾಗಿದೆ ; (ಎಲ್ಲಾ ಮೂಲ ಹಾಗೂ ತಿದ್ದುಪಡಿ ಆದೇಶಗಳ ಪ್ರತಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಆ) ಯಾವ ವರ್ಷದಿಂದ ರಾಜ್ಯ ಸಾರಿಗೆ ಬಸ್ಸುಗಳ ಹಾಗೂ ಬಸ್ ನಿಲ್ದಾಣಗಳ ಮೇಲೆ ಜಾಹೀರಾತುಗಳನ್ನು ಅಳವಡಿಸಲು ಅವಕಾಶ ನೀಡಲಾಗಿದೆ ಹಾಗೂ ಇಲ್ಲಿಯವರೆಗೆ ಯಾವ ಯಾವ ಕಂಪನಿಗಳಿಗೆ ಅವಕಾಶ ನೀಡಲಾಗಿದೆ ; (ನಿಗಮವಾರು ಮಾಹಿತಿ ನೀಡುವುದು) ಗರಿಷ್ಠ ಎಷ್ಟು ವರ್ಷಗಳ ಕಾಲ ಜಾಹೀರಾತಿಗೆ ಅವಕಾಶ ನೀಡಬಹುದು ; ಸರ್ಕಾರದಿಂದ ಯಾವ ರೀತಿಯ ಜಾಹೀರಾತುಗಳನ್ನು ಅಳವಡಿಸಲು ಅವಕಾಶ ನೀಡಲಾಗಿದೆ ?

## ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ನೇಮಕಾತಿಯ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೮೪೨ (೯೨೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯಲ್ಲಿ ಪ್ರಸ್ತುತ ಖಾಲಿಯಿರುವ, ಮಂಜೂರಾಗಿರುವ ಮತ್ತು ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದಿರುವ ಒಟ್ಟು ಗ್ರೂಪ್ 'ಬಿ' ಮತ್ತು ಗ್ರೂಪ್ 'ಸಿ' ಹುದ್ದೆಗಳು ಎಷ್ಟು ; (ಹುದ್ದೆಗಳ ಪದನಾಮಗಳ ಸಮೇತ ವಿವರ ನೀಡುವುದು)

(ಆ) ರಾಜ್ಯದಲ್ಲಿ ಪ್ರಸ್ತುತ ಖಾಲಿಯಿರುವ ತಹಶೀಲ್ದಾರ್ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಪ್ರಸ್ತುತ ಖಾಲಿಯಿರುವ ಗ್ರಾಮ ಆಡಳಿತ ಅಧಿಕಾರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಎಷ್ಟು ತಹಶೀಲ್ದಾರ್ ಗ್ರೇಡ್–೨ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗಿದೆ ಹಾಗೂ ಬಡ್ತಿ ಮೂಲಕ ಎಷ್ಟು ತಹಶೀಲ್ದಾರ್ ಗ್ರೇಡ್–೨ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗಿದೆ ;

(ಈ) ಕಳೆದ ೩ ವರ್ಷಗಳಲ್ಲಿ ನಿವೃತ್ತಿ ಹೊಂದಿರುವ ತಹಶೀಲ್ದಾರ್‌ಗಳ (ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ನೇಮಕವಾದ ಮತ್ತು ಮುಂಬಡ್ತಿ ಮೂಲಕ ಹುದ್ದೆ ಪಡೆದ) ಸಂಖ್ಯೆ ಎಷ್ಟು ; (ನಿವೃತ್ತಿ ಹೊಂದಿದ ದಿನಾಂಕಗಳ ಸಮೇತ ಮಾಹಿತಿಯನ್ನು ಒದಗಿಸುವುದು)

(ಉ) ಯಾವ ಕಾಲಮಿತಿಯಲ್ಲಿ ಖಾಲಿಯಿರುವ ಈ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು ;

(ಊ) ಭೂಮಾಪಕರ ಹುದ್ದೆಗೆ ದ್ವಿತೀಯ ಪಿಯು ಹಂತದಲ್ಲಿ ಗಣಿತ ವಿಷಯದಲ್ಲಿ ಕಡ್ಡಾಯವಾಗಿ ೬೦% ಅಂಕಗಳನ್ನು ಪಡೆದಿರಬೇಕೆಂದು ನಿಯಮ ರೂಪಿಸಲಾಗಿದೆಯೇ ; ಭೂಮಾಪಕರ ಪರೀಕ್ಷೆಗೆ ವಿವಿಧ ಗ್ರೂಪ್ 'ಸಿ' ಹುದ್ದೆಗಳಂತೆ ಒಂದೇ ತೆರನಾದ ಪಠ್ಯಕ್ರಮವನ್ನು ಅಳವಡಿಸಿರುವುದಲ್ಲವೇ ; ಹಾಗಿದ್ದಲ್ಲಿ, ಕಡ್ಡಾಯವಾಗಿ ೬೦% ಅಂಕಗಳನ್ನು ನಿಗದಿಪಡಿಸಿರುವ ನಿಯಮವನ್ನು ರದ್ದು ಪಡಿಸಬಹುದಲ್ಲವೇ ? (ಈ ಕುರಿತು ಸ್ಪಷ್ಟ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಮುಜರಾಯಿ ಇಲಾಖೆಗೆ ಒಳಪಡುವ ಎ,ಬಿ ಹಾಗೂ ಸಿ ದರ್ಜೆಯ ದೇವಸ್ಥಾನಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೮೪೩ (೯೨೫) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮುಜರಾಯಿ ಇಲಾಖೆಗೆ ಒಳಪಡುವ ಎ, ಬಿ ಹಾಗೂ ಸಿ ದರ್ಜೆಯ ದೇವಸ್ಥಾನಗಳು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮುಜರಾಯಿ ಇಲಾಖೆಯಲ್ಲಿ ಖಾಲಿ ಇರುವ, ಮಂಜೂರಾಗಿರುವ ಮತ್ತು ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದಿರುವ ವಿವಿಧ ದರ್ಜೆಯ ಹುದ್ದೆಗಳು ಎಷ್ಟು ;

(ಇ) ಕಳೆದ ಮೂರು ವರ್ಷಗಳಿಂದ ಇಲಾಖೆ ಅಡಿಯಲ್ಲಿ ಬರುವ ವಿವಿಧ ದರ್ಜೆಗಳ ದೇವಸ್ಥಾನಗಳಿಂದ ಬಂದ ಅನುದಾನದ ಕೋರಿಕೆಯ ಪ್ರಸ್ತಾವನೆಗಳು ಎಷ್ಟು ಮತ್ತು ಅವುಗಳಿಗೆ ಇಲಾಖೆಯಿಂದ ನೀಡಿದ ಅನುದಾನ ಎಷ್ಟು ; (ವಾರ್ಷಿಕವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಾಜ್ಯದ ಮುಜರಾಯಿ ಇಲಾಖೆಯಡಿಯಲ್ಲಿ ಬರುವ ದೇವಸ್ಥಾನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ದೂರವಾಣಿ ಸಂಖ್ಯೆಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲದಿರುವುದು ಹಾಗೂ ಸರಳವಾಗಿ ವೆಬ್‌ಸೈಟ್‌ನಿಂದ ಸಾರ್ವಜನಿಕರಿಗೆ ಲಭ್ಯವಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಇಲಾಖೆಯಡಿ ಬರುವ ದೇವಸ್ಥಾನಗಳ ವೆಬ್‌ಸೈಟ್ ನಿರ್ವಹಣೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ರಾಜ್ಯದ ಮುಜರಾಯಿ ಇಲಾಖೆಯಡಿಯಲ್ಲಿ ಇರುವ ಎ,ಬಿ ಮತ್ತು ಸಿ ದರ್ಜೆಯ ದೇವಸ್ಥಾನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಯನಿರ್ವಹಣಾಧಿಕಾರಿಗಳ ಹಾಗೂ ದೇವಸ್ಥಾನಗಳ ದೂರವಾಣಿಗಳ ಪಟ್ಟಿ (ಚಾಲ್ತಿಯಲ್ಲಿರುವ) ಮಾಹಿತಿ ನೀಡುವುದು ?

## ಮೀನುಗಾರಿಕೆ ಇಲಾಖೆಯ ಸಂಘಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೮೪೪ (೮೭೪) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೀನುಗಾರಿಕೆ ಇಲಾಖೆಗೆ ಒಳಪಡುವ ಕೆರೆಗಳ ಸಂಖ್ಯೆ ಎಷ್ಟು ;

(ಆ) ಎಷ್ಟು ಸಂಘಗಳು ಇಲಾಖೆಯಡಿ ನೋಂದಣಿಯಾಗಿದೆ ; ಎಷ್ಟು ಕೆರೆಗಳನ್ನು ಸಂಘಗಳಿಗೆ ನೀಡಲಾಗಿದೆ ; ಇದರಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಮುದಾಯಕ್ಕೆ ಒಳಪಡುವ ಸಂಘಗಳು ಎಷ್ಟು ?

## ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಒದಗಿಸಲಾದ ಅನುದಾನ ಇತ್ಯಾದಿಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೮೪೫ (೮೭೫) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ಆಯವ್ಯಯಗಳಲ್ಲಿ (೨೦೨೩–೨೪, ೨೦೨೪–೨೫ ಮತ್ತು ೨೦೨೫–೨೬) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ನಿಗದಿಪಡಿಸಿದ ಒಟ್ಟು ಅನುದಾನ ಎಷ್ಟು ; ಈ ಪೈಕಿ ಬಿಡುಗಡೆಯಾದ ಮತ್ತು ಬಳಕೆಯಾದ ಮೊತ್ತ ಎಷ್ಟು ; (ವರ್ಷವಾರು ಮತ್ತು ಶೀರ್ಷಿಕೆವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಅವಧಿಯಲ್ಲಿ ರಾಜ್ಯಾದ್ಯಂತ ಶಾದಿ ಮಹಲ್‌ಗಳ (ಸಮುದಾಯ ಭವನಗಳು) ನಿರ್ಮಾಣ ಮತ್ತು ನವೀಕರಣಕ್ಕಾಗಿ ಹಂಚಿಕೆಯಾದ ಅನುದಾನ ಎಷ್ಟು ; ಎಷ್ಟು ಶಾದಿಮಹಲ್‌ಗಳ ಕಾಮಗಾರಿಗಳು ಪೂರ್ಣಗೊಂಡಿವೆ ಮತ್ತು ಎಷ್ಟು ಕಾಮಗಾರಿಗಳು ಅರ್ಧಕ್ಕೆ ನಿಂತಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಮಸೀದಿಗಳು, ದರ್ಗಾಗಳು ಸೇರಿದಂತೆ ವಕ್ಫ್ ಸಂಸ್ಥೆಗಳ ಆವರಣದಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿಪಡಿಸಲು ಮತ್ತು ದುರಸ್ತಿ ಕಾರ್ಯಗಳಿಗಾಗಿ ಸರ್ಕಾರ ನೀಡಿದ ವಿಶೇಷ ಅನುದಾನದ ಮೊತ್ತ ಎಷ್ಟು ?

## ರಾಜ್ಯದಲ್ಲಿನ ಕುಟುಂಬ ವ್ಯಾಜ್ಯಗಳು, ಪೌತಿ ಖಾತೆ ವಿಲೇವಾರಿ ಮತ್ತು ಪಾಳು ಬಿದ್ದ ಜಮೀನುಗಳ ಸದ್ಬಳಕೆ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೮೪೬ (೮೭೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಂದಾಯ ನ್ಯಾಯಾಲಯಗಳಲ್ಲಿ ಬಾಕಿ ಇರುವ ಕುಟುಂಬ ವ್ಯಾಜ್ಯಗಳ ಮತ್ತು ಪೌತಿ ಖಾತೆ (Mutation/ inheritance) ಪ್ರಕರಣಗಳ ಒಟ್ಟು ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರೈತರು ವರ್ಷಗಟ್ಟಲೆ ಅಲೆಯುವುದನ್ನು ತಪ್ಪಿಸಲು 'ಪೌತಿ ಖಾತೆ ಆಂದೋಲನ' ಅಥವಾ ರಾಜಿ ಸಂಧಾನದ ಮೂಲಕ ಪ್ರಕರಣಗಳನ್ನು ಬಗೆಹರಿಸಲು ಸರ್ಕಾರ ಹಮ್ಮಿಕೊಂಡಿರುವ ವಿಶೇಷ ಕ್ರಮಗಳೇನು ;

(ಇ) ಕುಟುಂಬ ವ್ಯಾಜ್ಯಗಳಿಂದಾಗಿ ರಾಜ್ಯದಲ್ಲಿ ಲಕ್ಷಾಂತರ ಎಕರೆ ಕೃಷಿ ಭೂಮಿ ಪಾಳು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಜಮೀನುಗಳನ್ನು ರಾಜಿ ಸಂಧಾನದ ಮೂಲಕ ವಿವಾದ ಮುಕ್ತಗೊಳಿಸಿ ಕೃಷಿ ಚಟುವಟಿಕೆಗೆ ಲಭ್ಯವಾಗುವಂತೆ ಮಾಡಲು ಸರ್ಕಾರ ರೂಪಿಸಿರುವ ಹೊಸ ಮಾರ್ಗಸೂಚಿಗಳೇನು ;

(ಈ) ಇಂತಹ ಪ್ರಕರಣಗಳನ್ನು ಕಾಲಮಿತಿಯಲ್ಲಿ ಬಗೆಹರಿಸಲು 'ಕಂದಾಯ ಅದಾಲತ್'ಗಳನ್ನು ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹಮ್ಮಿಕೊಳ್ಳುವ ಯೋಜನೆ ಸರ್ಕಾರದ ಮುಂದೆ ಇದೆಯೇ ?

## ರಾಜ್ಯದಲ್ಲಿನ ಪಶು ವಿಶ್ವವಿದ್ಯಾಲಯಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೮೪೭ (೮೭೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಪಶು ವಿಶ್ವವಿದ್ಯಾಲಯದಲ್ಲಿ ಎಷ್ಟು ವಿಭಾಗಗಳಿವೆ ; ಸೇವೆ ಸಲ್ಲಿಸುತ್ತಿರುವ ಬೋಧಕರು ಮತ್ತು ಬೋಧಕೇತರರ ಮಾಹಿತಿ ಒದಗಿಸುವುದು ;

(ಆ) ಇದರಲ್ಲಿ ಮಂಜೂರಾಗಿರುವ ಹುದ್ದೆಗಳು ಎಷ್ಟು ; ಪ್ರಸ್ತುತ ಎಷ್ಟು ಬೋಧಕರು ಹಾಗೂ ಬೋಧಕೇತರರ ಹುದ್ದೆಗಳು ಖಾಲಿ ಇವೆ ;

(ಇ) ಚಾಮರಾಜನಗರದಲ್ಲಿ ಪಶು ವಿಶ್ವವಿದ್ಯಾಲಯದ ಕೇಂದ್ರ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಪಶುಸಂಗೋಪನೆ ಮಾಡಲು ಸರ್ಕಾರದಿಂದ ನೀಡುತ್ತಿರುವ ಸಾಲದ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೮೪೮ (೮೯೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶುಸಂಗೋಪನೆ ಇಲಾಖೆಯಲ್ಲಿ ವಿವಿಧ ವಾಣಿಜ್ಯ ಪ್ರಾಣಿಗಳನ್ನು ಸಾಕಲು ನೀಡಿರುವ ಸಾಲ ಮತ್ತು ಸಹಾಯಧನದ ಹಣ ಎಷ್ಟು ;

(ಆ) ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆಗಳಲ್ಲಿ ಎಷ್ಟು ಫಲಾನುಭವಿಗಳಿಗೆ ಸಾಕು ಪ್ರಾಣಿಗಳನ್ನು ಸಾಕಲು ನಿರ್ಮಿಸಿರುವ ಶೆಡ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಎಷ್ಟು ಜನರಿಗೆ ಸರ್ಕಾರದಿಂದ ಸಾಲದ ವ್ಯವಸ್ಥೆ ಮಾಡಲಾಗಿದೆ ; ಪ್ರತಿ ಫಲಾನುಭವಿಗಳಿಗೆ ನೀಡಿರುವ ಸಾಲದ ಪ್ರಮಾಣ ಎಷ್ಟು ಇದರಲ್ಲಿ ಸಹಾಯಧನ ಎಷ್ಟು ;

(ಈ) ಪ್ರವರ್ಗ–೧ರ ಫಲಾನುಭವಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕಳೆದ 0೩ ವರ್ಷಗಳಿಂದ ಕೈಗೆತ್ತಿಕೊಂಡಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೮೪೯ (೮೯೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕೋಪಯೋಗಿ ಇಲಾಖೆಯಲ್ಲಿ ೨೦೨೩–೨೪, ೨೦೨೪–೨೫ ಹಾಗೂ ೨೦೨೫–೨೬ ರಲ್ಲಿ ತೆಗೆದುಕೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಆ) ಇದರಲ್ಲಿ ಅತ್ಯಂತ ಹಿಂದುಳಿದ ಪ್ರವರ್ಗ–೧ರ ಜಾತಿಗಳ ಗುತ್ತಿಗೆದಾರರಿಗೆ ಎಷ್ಟು ಪ್ರಮಾಣದ ಕಾಮಗಾರಿಗಳನ್ನು ನೀಡಲಾಗಿದೆ ; ನೀಡಿದ್ದಲ್ಲಿ, ಮಾಹಿತಿ ನೀಡುವುದು ;

(ಇ) ಪ್ರವರ್ಗ–೧ರ ಗುತ್ತಿಗೆದಾರರಿಗೆ ಗುತ್ತಿಗೆ ನೀಡಬೇಕೆಂಬ ಕಾರಣ ನೀಡಿ ಗುತ್ತಿಗೆ ಹಣವನ್ನು ಹೆಚ್ಚು ಮಾಡಿ ಟೆಂಡರ್ ಕರೆಯುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಪರಿಹಾರ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ರಾಜ್ಯದ ಎಸ್.ಸಿ/ಎಸ್.ಟಿ ಕಾಲೋನಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೮೫೦ (೮೯೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಉಪ ಯೋಜನೆಯಡಿ ಕಾಲೋನಿಗಳ ಮೂಲಭೂತ ಸೌಕರ್ಯಗಳಿಗೆ ನಿಗದಿಯಾದ ಅನುದಾನ ಎಷ್ಟು ;

(ಆ) ಇದುವರೆಗೂ ರಾಜ್ಯದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಕಾಲೋನಿಗಳಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಎಲ್ಲೆಲ್ಲಿ ತೆಗೆದುಕೊಳ್ಳಲಾಗಿದೆ ; (ತಾಲ್ಲೂಕುವಾರು/ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಮೂಲಭೂತ ಸೌಲಭ್ಯಗಳಿಗೆ ಇದುವೆರೆವಿಗೂ ಬಿಡುಗಡೆಯಾದ ಅನುದಾನ ಎಷ್ಟು ; ಬಾಕಿ ಹಣವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ;

(ಈ) ಪೂರ್ಣವಾಗಿ ಅನುದಾನ ಬಿಡುಗಡೆಯಾಗದಿದ್ದಲ್ಲಿ ಕಾಮಗಾರಿಗಳು ಕುಂಠಿತವಾಗುವುದಿಲ್ಲವೇ ; ಅಪೂರ್ಣ ಕಾಮಗಾರಿಯಿಂದ ಸಾರ್ವಜನಿಕರಿಗೆ ಹಾಗೂ ಸ್ಥಳೀಯ ನಿವಾಸಿಗಳಿಗೆ ಆಗುವ ತೊಂದರೆಯನ್ನು ಯಾವ ರೀತಿಯಲ್ಲಿ ಸರ್ಕಾರ ಬಗೆಹರಿಸಲು ಕ್ರಮಕೈಗೊಳ್ಳುವುದು ?

## ಕಂದಾಯ ಗ್ರಾಮಗಳನ್ನು ಪೋಡಿ ಮುಕ್ತಗೊಳಿಸಿರುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೮೫೧ (೯೧೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ, ತುಮಕೂರು ಮತ್ತು ಚಿತ್ರದುರ್ಗ ಜಿಲ್ಲೆಗಳಿಗೆ ಪೋಡಿ ಮಾಡಲು ಇರುವ ಜಮೀನಿನ ವಿಸ್ತೀರ್ಣ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ಇದರಲ್ಲಿ ಇದುವರೆಗೂ ಎಷ್ಟು ವಿಸ್ತೀರ್ಣದ ಜಮೀನನ್ನು ಪೋಡಿ ಮುಕ್ತಗೊಳಿಸಲಾಗಿದೆ ;

(ಆ) ಕಂದಾಯ ಗ್ರಾಮಗಳನ್ನು ನಿರ್ಮಿಸುವಾಗ ರೈತರಿಗೆ ಯಾವುದೇ ನೋಟಿಸ್ ನೀಡದೆ ಜಮೀನನ್ನು ಸರ್ವೆ ಮಾಡಿಸಿ, ಅವರ ಪಹಣಿಯಲ್ಲಿ ಜಮೀನಿನ ವಿಸ್ತೀರ್ಣವನ್ನು ಕಡಿತ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಗುಬ್ಬಿ ತಾಲ್ಲೂಕು ತಾಳೆಕೊಪ್ಪ ಗ್ರಾಮದ ರೈತರ ಜಮೀನನ್ನು ಯಾವುದೇ ನೋಟಿಸ್ ನೀಡದೆ ಸರ್ವೆ ಮಾಡಿ ಜಮೀನನ್ನು ಸ್ವಾಧೀನ ಮಾಡಿರುವುದರ ಉದ್ದೇಶ ಏನು ; ಈ ರೈತರಿಗೆ ಪರಿಹಾರ ನೀಡುವ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;

(ಈ) ಇದೇ ರೀತಿಯಾಗಿ ಜಿಲ್ಲೆಗಳಲ್ಲಿ ಎಷ್ಟು ರೈತರ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ ; ಪರಿಹಾರ ನೀಡಲಾಗಿದೆ ; ಬಾಕಿ ಪರಿಹಾರ ನೀಡಲು ಇರುವ ಪ್ರಕರಣಗಳು ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಹಾಸನ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಕಟ್ಟಡಗಳ ಕುರಿತು

**ಡಾ. ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೨ (೯೮೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯ ವ್ಯಾಪ್ತಿಯ ರಸ್ತೆ ಮಾರ್ಜಿನಿನಲ್ಲಿ ಕಟ್ಟಿರುವಂತಹ ಕಟ್ಟಡಗಳ ಪ್ರಕರಣಗಳ ಸಂಖ್ಯೆ ಎಷ್ಟು ; ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ಯಾವ ರೀತಿ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಆ) ಇದರ ಪರಿವರ್ತನೆ ಸಂಬಂಧ ಜಿಲ್ಲಾಧಿಕಾರಿಯವರು ರಸ್ತೆ ಮಾರ್ಜಿನಿನಲ್ಲಿ ಕಟ್ಟಿರುವಂತಹ ಕಟ್ಟಡಗಳಿಗೆ ಅನ್ಯ ಸಂಕ್ರಮಣ/ಭೂ ಆದೇಶ ಕೊಟ್ಟಿದ್ದಾರೆಯೇ ; (ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕು ದಂಡಿಹಳ್ಳಿ ಹೋ.ರಸ್ತೆ ಮಾರ್ಜಿನಿನಲ್ಲಿ ಬರುವ ಬಳದರೆ ಗ್ರಾಮದ ಜಿಲ್ಲೆ ಸರ್ವೆ ನಂಬರ್ ೨೬೦ರ ೨.೨೦ ಎಕರೆ ಹಿಡುವಳಿ ಜಮೀನಿನಲ್ಲಿ ಅಕ್ರಮವಾಗಿ ವಾಣಿಜ್ಯ ಕಟ್ಟಡ ಕಟ್ಟಿರುವ ಜಾಗಕ್ಕೆ ೦೭.೧೦.೨೦೨೩ ರಂದು ಕಾನೂನು ಉಲ್ಲಂಘಿಸಿ ಭೂ ಪರಿವರ್ತನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾನೂನು ಉಲ್ಲಂಘಿಸಿ ಮಾಡಿರುವ ಆದೇಶದ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಈ ಅನಧಿಕೃತ ಕಟ್ಟಡದ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿ ಜಿಲ್ಲೆಯ ಚಿತ್ತಾಪುರ ಪಟ್ಟಣದ ನಾಗಾವಿ ಹತ್ತಿರ ನಿರ್ಮಿಸಿದ ಮನೆಗಳು ಹಂಚಿಕೆಯಾಗದಿರುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೮೫೩ (೯೪೬) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಚಿತ್ತಾಪುರ ಪಟ್ಟಣದ ನಾಗಾವಿ ಹತ್ತಿರ ಕೊಳಗೇರಿ ಪ್ರದೇಶದ ಬಡವರಿಗಾಗಿ ರೂ.೫೮ ಕೋಟಿ ವೆಚ್ಚದಲ್ಲಿ ೧೦೦೦ ಮನೆಗಳು ನಿರ್ಮಾಣವಾಗಿ ಎರಡು ವರ್ಷ ಕಳೆದರೂ ಇನ್ನೂ ಹಂಚಿಕೆ ಮಾಡದಿರಲು ಕಾರಣಗಳೇನು ;

(ಆ) ರೂ. ೫೦-೭೫ ಸಾವಿರ ೭-೮ ವರ್ಷಗಳ ಹಿಂದೆ ವಂತಿಗೆ ಹಣ ಕಟ್ಟಿದ ಪರಿಶಿಷ್ಟ ಜಾತಿ/ಪಂಗಡ ಮತ್ತು ಹಿಂದುಳಿದ ಕುಟುಂಬಗಳು ಕಾಯುತ್ತಿರುವುದಕ್ಕೆ ಸರ್ಕಾರ ಪರಿಹಾರ ಕೊಡುವುದೇ ;

(ಇ) ೧೦೦೦ ಮನೆಗಳು ನಿರ್ಮಾಣವಾಗಿದ್ದರೂ ಅದಕ್ಕೆ ಬೇಕಾದ ಮೂಲಭೂತ ಸೌಕರ್ಯ ಆಮೆಗತಿಯಲ್ಲಿ ನಡೆಯುತ್ತಿದ್ದು, ಮನೆಗಳು ಈಗಾಗಲೇ ಬಿರುಕು ಬಿಟ್ಟಿವೆ , ಮದ್ಯಪಾನ/ಜೂಜಾಟ ಮುಂತಾದ ಅನೈತಿಕ ಚಟುವಟಿಕೆಗಳು ನಡೆಯುತ್ತಿದ್ದರೂ ಸರ್ಕಾರ ಮನೆಗಳನ್ನು ಹಂಚಿಕೆ ಮಾಡಲು ಹಿಂದೇಟು ಹಾಕಲು ಕಾರಣವೇನು ;

(ಈ) ಚುನಾವಣೆ ಹತ್ತಿರ ಬಂದಾಗ ಸ್ಥಳೀಯ ಜನಪ್ರತಿನಿಧಿಗಳು ೧೦೦೦ ಮನೆಗಳನ್ನು ಕಟ್ಟಿದ್ದೇವೆ ಎಂದು ರಾಜಕೀಯಕ್ಕಾಗಿ ಬಳಸಿಕೊಂಡು ಬಡವರಿಗೆ ಮೋಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ತಕ್ಷಣವೆ ಮೂಲಭೂತ ಸೌಕರ್ಯಗಳ ಕಾಮಗಾರಿಗಳನ್ನು ಮುಗಿಸಿ ೭-೮ ವರ್ಷಗಳಿಂದ ಮನೆಗಳಿಗಾಗಿ ಕಾಯುತ್ತಿರುವ ಬಡವರಿಗೆ ಮನೆಗಳನ್ನು ಹಂಚಿಕೆ ಮಾಡಿ ಹಂಚಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

# ರಾಜ್ಯದ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಭವಿಸುತ್ತಿರುವ ಅಪಘಾತಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೪ (೮೯೬) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರಾಷ್ಟ್ರೀಯ ಹೆದ್ದಾರಿಗಳಲ್ಲಿ, ವಿಶೇಷವಾಗಿ ನೆಲಮಂಗಲದ ಜಿಂದಾಲ್ ಪ್ಲಾಂಟ್ ಬಳಿ ಮತ್ತು ಹೊಸಕೋಟೆಯ ಸ್ಯಾಟ್‌ಲೈಟ್ ರಿಂಗ್ ರೋಡ್‌ಗಳಲ್ಲಿ (STRR) ಇತ್ತೀಚಿಗೆ ಸಂಭವಿಸಿದ ಭೀಕರ ಅಪಘಾತಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಅಪಘಾತಗಳಿಗೆ ಅತಿ ವೇಗವೇ (ಗಂಟೆಗೆ ೧೫೦–೧೬೦ ಕಿ.ಮೀ) ಪ್ರಮುಖ ಕಾರಣ ಎಂಬ ಪೊಲೀಸ್ ವರದಿಗಳ ಹಿನ್ನೆಲೆಯಲ್ಲಿ ಹೆದ್ದಾರಿಗಳಲ್ಲಿ ವೇಗದ ಮಿತಿಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ತಾಂತ್ರಿಕ ಕ್ರಮಗಳೇನು ;

(ಇ) ಹೆದ್ದಾರಿಗಳಲ್ಲಿ ಅಳವಡಿಸಲಾಗಿರುವ ಸಿಸಿಟಿವಿ ಕ್ಯಾಮೆರಾಗಳು ಕೇವಲ ದಂಡ ವಿಧಿಸಲು ಸೀಮಿತವಾಗಿವೆಯೇ ; ಅತೀ ವೇಗದ ಚಾಲನೆಯನ್ನು ತಡೆಗಟ್ಟಲು ಇವುಗಳನ್ನು ಹೇಗೆ ಮೇಲ್ದರ್ಜೆಗೇರಿಸಲಾಗುವುದು ;

(ಈ) ಪದೇ ಪದೇ ಅಪಘಾತಗಳು ಸಂಭವಿಸುವ 'ಬ್ಲಾಕ್ ಸ್ಪಾಟ್'ಗಳನ್ನು (Black Spots) ಗುರುತಿಸಿ, ಅಲ್ಲಿ ರಸ್ತೆ ವಿನ್ಯಾಸದ ಲೋಪಗಳನ್ನು ಸರಿಪಡಿಸಲು ಹಾಗೂ ರಸ್ತೆ ವಿಭಜಕಗಳ (Divider) ಎತ್ತರವನ್ನು ಹೆಚ್ಚಿಸಲು ಸರ್ಕಾರವು ರಾಷ್ಟ್ರೀಯ ಹೆದಾರಿ ಪ್ರಾಧಿಕಾರದೊಂದಿಗೆ (NHA)ಸಮನ್ವಯ ಸಾಧಿಸಿದೆಯೇ ;

(ಉ) ರಾತ್ರಿ ವೇಳೆಯ ಅಪಘಾತಗಳನ್ನು ತಡೆಯಲು ಹೆದ್ದಾರಿಗಳಿಗೆ ಹೆಚ್ಚಿನ ಬೆಳಕಿನ ವ್ಯವಸ್ಥೆ ಮತ್ತು ಹೆದ್ದಾರಿ ಗಸ್ತು (Highway

Patrol) ಪಡೆಯನ್ನು ಬಲಪಡಿಸಲು ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು ?

## ಕಲಬುರಗಿ ಜಿಲ್ಲೆಯಲ್ಲಿನ ಸಾರಿಗೆ ಸೌಲಭ್ಯಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೫ (೮೯೭) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಅಫಜಲಪುರ, ಆಳಂದ ಮತ್ತು ಚಿಂಚೋಳಿಯಂತಹ ಗಡಿಭಾಗದ ಎಷ್ಟು ಹಳ್ಳಿಗಳಿಗೆ ಕೆ.ಕೆ.ಆರ್.ಟಿ.ಸಿ ಬಸ್ ಸಂಪರ್ಕ ಕಲ್ಪಿಸಿಲ್ಲ ;

(ಆ) ೨೦೨೫–೨೬ನೇ ಸಾಲಿನಲ್ಲಿ ಕಲಬುರಗಿ ನಗರದ ಜನದಟ್ಟಣೆ ಕಡಿಮೆ ಮಾಡಲು ನಗರ ಸಾರಿಗೆ (City Transport) ವಿಸ್ತರಣೆ ಮಾಡುವ ಯೋಜನೆ ಇದೆಯೇ ;

(ಇ) ಗ್ರಾಮೀಣ ಭಾಗದ ವಿದ್ಯಾರ್ಥಿನಿಯರಿಗಾಗಿ 'ಶಕ್ತಿ ಯೋಜನೆ'ಯಡಿ ಹೆಚ್ಚುವರಿ ಬಸ್‌ಗಳನ್ನು ನಿಯೋಜಿಸಲಾಗಿದೆಯೇ ;

(ಈ) ಕಲಬುರಗಿ ಕೇಂದ್ರ ವಿಭಾಗದಲ್ಲಿರುವ ಹಳೆಯ ಮತ್ತು ಗುಜರಿಗೆ ಹಾಕಬೇಕಾದ ಬಸ್‌ಗಳ ಸಂಖ್ಯೆ ಎಷ್ಟು; ಅವುಗಳ ಬದಲಿಗೆ ಹೊಸ ಬಸ್‌ಗಳ ಹಂಚಿಕೆ ಯಾವಾಗ ಕೈಗೊಳ್ಳಲಾಗುವುದು ?

## ಕಲಬುರಗಿ ಜಿಲ್ಲೆಯ ರಸ್ತೆ ಮತ್ತು ಸೇತುವೆ ಕಾಮಗಾರಿಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೬ (೮೯೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಪ್ರಮುಖ ರಾಜ್ಯ ಹೆದ್ದಾರಿಗಳು ಹಾಗೂ ಗ್ರಾಮೀಣ ರಸ್ತೆಗಳ ಗುಂಡಿ ಮುಚ್ಚುವ (Pathole Filling) ಕಾಮಗಾರಿಯ ಪ್ರಸ್ತುತ ಸ್ಥಿತಿಗತಿ ಏನು ;

(ಆ) ೨೦೨೫–೨೬ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (KKRDB) ವತಿಯಿಂದ ಜಿಲ್ಲೆಯ ರಸ್ತೆ ಅಭಿವೃದ್ಧಿಗೆ ಮೀಸಲಿಟ್ಟ ಒಟ್ಟು ಅನುದಾನ ಎಷ್ಟು ;

(ಇ) ಮಳೆಗಾಲದಲ್ಲಿ ಹಾನಿಗೊಳಗಾದ ಬೆಣ್ಣೆತೋರಾ ಮತ್ತು ಕಾಗಿನಾ ನದಿ ಪಾತ್ರದ ಸೇತುವೆಗಳ ಶಾಶ್ವತ ದುರಸ್ತಿಗೆ ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಜಿಲ್ಲೆಯಲ್ಲಿ ನಡೆಯುತ್ತಿರುವ ಮೇಲ್ಸೇತುವೆ (Flyover) ಕಾಮಗಾರಿಗಳನ್ನು ಪೂರ್ಣಗೊಳಿಸಲು ಎಲ್ಲಿಯವರೆಗೆ ಗಡುವನ್ನು ನಿಗದಿಪಡಿಸಲಾಗಿದೆ ?

## ಇ–ಸ್ವತ್ತು ಡಿಜಿಟಲೀಕರಣದ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೭ (೮೯೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಬಾಕಿ ಇರುವ 'ನಮೂನೆ ೫೭' (ಬಗರ್ ಹುಕುಂ) ಮತ್ತು ಪೋಡಿ ಪ್ರಕರಣಗಳ ಒಟ್ಟು ಸಂಖ್ಯೆ ಎಷ್ಟು ;

(ಆ) ರೈತರ ಜಮೀನು ಒತ್ತುವರಿ ಮತ್ತು ಸರ್ವೆ ಸಮಸ್ಯೆಗಳನ್ನು ಬಗೆಹರಿಸಲು ಜಿಲ್ಲಾಧಿಕಾರಿಗಳ "ನಡೆ ಹಳ್ಳಿಯ ಕಡೆ" ಕಾರ್ಯಕ್ರಮದಡಿ ಎಷ್ಟು ವಿಶೇಷ ಶಿಬಿರಗಳನ್ನು ಆಯೋಜಿಸಲಾಗಿದೆ ;

(ಇ) ಜಿಲ್ಲೆಯ ಎಲ್ಲಾ ತಾಲ್ಲೂಕು ಕಛೇರಿಗಳಲ್ಲಿ ಇ–ಸ್ವತ್ತು ಮತ್ತು ಆಸ್ತಿ ದಾಖಲೆಗಳ ಡಿಜಿಟಲೀಕರಣ ಪೂರ್ಣಗೊಂಡಿದೆಯೇ ;

(ಈ) ಸರ್ವೇಯರ್‌ಗಳ ಕೊರತೆಯಿಂದಾಗಿ ವಿಳಂಬವಾಗುತ್ತಿರುವ ಪ್ರಕರಣಗಳನ್ನು ವಿಲೇವಾರಿ ಮಾಡಲು ಕೈಗೊಂಡಿರುವ ಪರ್ಯಾಯ ಕ್ರಮಗಳೇನು ?

## ಕಲಬುರಗಿ ಜಿಲ್ಲೆಯಲ್ಲಿನ ವಸತಿ ಯೋಜನೆಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೮ (೯೦೦) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಪ್ರಸ್ತುತ ವಸತಿ ರಹಿತರ ಪಟ್ಟಿಯಲ್ಲಿರುವ (Housing Waitlist) ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು ;

(ಆ) ೨೦೨೫–೨೬ರಲ್ಲಿ ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ಲಂ ನಿವಾಸಿಗಳಿಗಾಗಿ ಎಷ್ಟು ಬಹುಮಹಡಿ ಮನೆಗಳನ್ನು (Multi-Storey Housing) ಮಂಜೂರು ಮಾಡಲಾಗಿದೆ ;

(ಇ) ಕೇಂದ್ರದ 'ಪಿಎಂ ಆವಾಸ್' ಮತ್ತು ರಾಜ್ಯದ 'ಬಸವ ವಸತಿ' ಯೋಜನೆಯಡಿ ಜಿಲ್ಲೆಗೆ ಬಿಡುಗಡೆಯಾದ ಅನುದಾನದ ಬಳಕೆ (Utilization Certificate) ಪ್ರಮಾಣ ಎಷ್ಟು ;

(ಈ) ತಾಂತ್ರಿಕ ಕಾರಣಗಳಿಂದ ತಡೆಹಿಡಿಯಲಾದ ಫಲಾನುಭವಿಗಳ ಹಣವನ್ನು ಬಿಡುಗಡೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ರಾಜ್ಯದ ಉಪ ವಿಭಾಗಾಧಿಕಾರಿ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೮೫೯ (೯೭೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೫ ವರ್ಷದಿಂದ ರಾಜ್ಯದ ಉಪ ವಿಭಾಗಾಧಿಕಾರಿ ನ್ಯಾಯಾಲಯದಲ್ಲಿ ಇರುವಂತಹ ಪ್ರಕರಣಗಳ ಸಂಖ್ಯೆ ಎಷ್ಟು ; ಇದರಲ್ಲಿ ಎಷ್ಟು ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ ;

(ಆ) ಪ್ರಸ್ತುತ ಬಾಕಿ ಇರುವ ಪ್ರಕರಣಗಳಲ್ಲಿ ಬೆಂಗಳೂರು ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ಹೆಚ್ಚಿನ ಪ್ರಕರಣಗಳು ಬಾಕಿ ಇರುವುದು ನಿಜವೇ ; ಹಾಗಿದ್ದಲ್ಲಿ, ತ್ವರಿತವಾಗಿ ಪ್ರಕರಣಗಳನ್ನು ಮುಕ್ತಾಯಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಉಪ ವಿಭಾಗಾಧಿಕಾರಿ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ವಿಲೇವಾರಿ ಮಾಡದೇ ಇರಲು ಕಾರಣಗಳೇನು ; ಈ ರೀತಿ ಬಾಕಿ ಇಟ್ಟುಕೊಂಡಿರುವ ಅಧಿಕಾರಿ/ಸಿಬ್ಬಂದಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ ?

## ರಾಜ್ಯದಲ್ಲಿ ಕಾನೂನು ಉಲ್ಲಂಘಿಸಿ ಬಡಾವಣೆ ಮಾಡಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೮೬೦ (೯೭೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿರುವ ಸರ್ಕಾರಿ ಜಮೀನನ್ನು ಒತ್ತುವರಿ ತೆರವುಗೊಳಿಸುವ ಕಾರ್ಯ ಕೈಗೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಇದುವರೆಗೂ ಎಷ್ಟು ಜಮೀನನ್ನು

ತೆರವುಗೊಳಿಸಲಾಗಿದೆ ; ತೆರವುಗೊಳಿಸದೇ ಬಾಕಿ ಉಳಿದಿರುವ ಜಮೀನನ್ನು ಎಂದು ತೆರವುಗೊಳಿಸಲಾಗುವುದು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಾನೂನು ಉಲ್ಲಂಘಿಸಿ ಬಡಾವಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಲೇಔಟನ್ನು ನಿರ್ಮಿಸಲಾಗಿದೆ ; (ವಿವರ ನೀಡುವುದು)

(ಇ) ಈ ರೀತಿಯ ಅನಧಿಕೃತ ಬಡಾವಣೆ ಮಾಡಿದವರ ವಿರುದ್ಧ ಎಫ್.ಐ.ಆರ್ ದಾಖಲಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಯಾವಾಗ ದಾಖಲು ಮಾಡಲಾಗುವುದು ;

(ಈ) ಅನಧಿಕೃತ ಬಡಾವಣೆ ಮಾಡಿದವರ ವಿರುದ್ಧ ಯಾವುದೇ ಕ್ರಮ ಜರುಗಿಸದ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ ?

## ಸಾರ್ವಜನಿಕರು ಮತ್ತು ಶಾಲಾ ಮಕ್ಕಳು ಸಂಚರಿಸುವ ವಾಹನಗಳ ಸುರಕ್ಷತೆಯ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೮೬೧ (೮೬೨) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಸುರಕ್ಷತೆಯ ವೈಫಲ್ಯದಿಂದ ಸರ್ಕಾರ ಮತ್ತು ಖಾಸಗಿ ಸಾರ್ವಜನಿಕ ಸಾರಿಗೆಯ ಎಷ್ಟು ವಾಹನಗಳು ದುರಂತಕ್ಕೆ ಒಳಗಾಗಿದೆ ; ದುರಂತಕ್ಕೆ ಕಾರಣವೇನು ;

(ಆ) ಸುರಕ್ಷತೆ ಪ್ರಮಾಣ ಪತ್ರವನ್ನು ಈ ವಾಹನಗಳಿಗೆ ಯಾವ ರೀತಿ ಮತ್ತು ಎಷ್ಟು ಅವಧಿಯವರೆಗೆ ನೀಡಲಾಗುತ್ತಿದೆ ; ವಾಹನ ತಪಾಸಣೆ ವೇಳೆ ಕೇವಲ ಆರ್.ಸಿ., ವಿಮೆ, ಡಿ.ಎಲ್., ಮಾಲಿನ್ಯ ಸಂಬಂಧಿಸಿದಂತೆ ಪತ್ರ ಇವುಗಳನ್ನು ಮಾತ್ರ ವೀಕ್ಷಣೆ ಮಾಡುತ್ತಿದ್ದು

ಸುರಕ್ಷತೆಗೆ ಸಂಬಂಧಿಸಿದಂತೆ ಭೌತಿಕವಾಗಿ ಯಾವುದೇ ವೀಕ್ಷಣೆ ಮಾಡದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸರ್ಕಾರ ಎಲ್ಲಾ ತರಹದ ಸಾರ್ವಜನಿಕ ವಾಹನಗಳು ಮತ್ತು ಖಾಸಗಿ ಶಾಲೆಗಳ ಸಾರಿಗೆ ವಾಹನಗಳ ಸುರಕ್ಷತೆಯ ದೃಷ್ಠಿಯಿಂದ ಗುಣಮಟ್ಟವನ್ನು ಪರೀಕ್ಷಿಸಲು ಈ ಎಲ್ಲಾ ಅಹಿತಕರ ಘಟನೆ ನಂತರ ಯಾವ ಕ್ರಮ ವಹಿಸುತ್ತಿದೆ ?

## ಶಕ್ತಿ ಯೋಜನೆಯಡಿ ಬಾಕಿ ಇರುವ ಮೊತ್ತದ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೬೨ (೯೧೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪, ೨೦೨೪-೨೫, ೨೦೨೫-೨೬ನೇ ಸಾಲಿನಲ್ಲಿ ಶಕ್ತಿ ಯೋಜನೆಗೆ ರಾಜ್ಯ ಸರ್ಕಾರವು ಮೀಸಲಿಟ್ಟ ಅನುದಾನವೆಷ್ಟು ; ಬಿಡುಗಡೆಗೊಂಡ ಅನುದಾನವೆಷ್ಟು ; ಬಳಕೆಯಾದ ಅನುದಾನವೆಷ್ಟು ;

(ಆ) ೨೦೨೩ ಏಪ್ರಿಲ್ ನಿಂದ ೨೦೨೬ ಫೆಬ್ರವರಿ ಅಂತ್ಯದವರೆಗೆ ಶಕ್ತಿ ಯೋಜನೆಯಲ್ಲಿ ಪ್ರಯಾಣಿಸಿದ ಪ್ರಯಾಣಿಕರ ಸಂಖ್ಯೆ ಎಷ್ಟು ; ನೀಡಿದ ಟಿಕೆಟ್ ವೆಚ್ಚ ಎಷ್ಟು ;

(ಇ) ಶಕ್ತಿ ಯೋಜನೆಯಡಿ ಸರ್ಕಾರದಿಂದ ಪಾವತಿಗೆ ಬಾಕಿ ಇರುವ ಮೊತ್ತವೆಷ್ಟು ; ಯಾವ ಆರ್ಥಿಕ ವರ್ಷದಲ್ಲಿ ಎಷ್ಟು ಮೊತ್ತ ಬಾಕಿ ಇದೆ ; ಬಾಕಿ ಇರಲು ಕಾರಣಗಳೇನು ;

(ಈ) ೨೦೨೩-೨೪, ೨೦೨೪-೨೫, ೨೦೨೫-೨೬ನೇ ಸಾಲಿನ ಆರ್ಥಿಕ ವರ್ಷಗಳಲ್ಲಿ ಶಕ್ತಿ ಯೋಜನೆಯಡಿ ಬಾಕಿ ಇರುವ ಮೊತ್ತವನ್ನು ಪಾವತಿಸಲು ಸರ್ಕಾರ ಯಾವ ಕ್ರಮಕೈಗೊಳ್ಳುತ್ತಿದೆ ;

(ಉ) ಮೊತ್ತ ಬಾಕಿ ಉಳಿದಿರುವುದರಿಂದ ಸಾರಿಗೆ ಸಂಸ್ಥೆಗೆ ಆರ್ಥಿಕ ಹೊರೆಯಾಗುತ್ತಿಲ್ಲವೇ ?

## ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ಹಂಚಿಕೆಯಾಗುತ್ತಿರುವ ಮನೆಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೬೩ (೯೧೯) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪, ೨೦೨೪–೨೫, ೨೦೨೫–೨೬ನೇ ಸಾಲಿನಲ್ಲಿ ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ಎಷ್ಟು ಮನೆಗಳನ್ನು ಫಲಾನುಭವಿಗಳಿಗೆ ಹಸ್ತಾಂತರಿಸಲಾಗಿದೆ ;

(ಆ) ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ನಿರ್ಮಿಸಿರುವ ಮನೆಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನ ಎಷ್ಟು ?

## ಸರ್ಕಾರದ ಸ್ವಾಧೀನದಲ್ಲಿರುವ ಭೂಮಿ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೬೪ (೯೨೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಸರ್ಕಾರದ ಸ್ವಾಧೀನದಲ್ಲಿರುವ ಹಾಗೂ ಗೋಮಾಳ ಭೂಮಿಯೆಂದು ಸರ್ಕಾರ ಘೋಷಿಸಿರುವ ಜಮೀನುಗಳ ವಿವರ ನೀಡುವುದು ; ಸದರಿ ಜಮೀನುಗಳನ್ನು ಒತ್ತುವರಿ ಮಾಡಿರುವುದು, ಗುಂಡಿಗಳನ್ನು ಮಾಡಿ ಮಣ್ಣನ್ನು ತೆಗೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ;

(ಆ) ಸದರಿ ಸರ್ಕಾರಿ ಗೋಮಾಳ ಭೂಮಿಯು–ಕೆಲವೊಂದು ಪ್ರದೇಶದಲ್ಲಿ ಪಾಳು ಬಿದ್ದಿದ್ದು, ಅದನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮವೇನು ; ಈ ಸರ್ಕಾರಿ ಗೋಮಾಳ ಭೂಮಿಗಳ ಮೇಲ್ವಿಚಾರಣೆ ಮಾಡುವುದು ಹಾಗೂ ಸಂರಕ್ಷಣೆ ಮಾಡುವ ಜವಾಬ್ದಾರಿ ಯಾರದ್ದಾಗಿರುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ೨೦೨೧–೨೨, ೨೦೨೨–೨೩, ೨೦೨೩–೨೪, ೨೦೨೪–೨೫, ೨೦೨೫–೨೬ನೇ ಸಾಲಿನಲ್ಲಿ ಸರ್ಕಾರಿ ಜಮೀನನ್ನು ರಾಜಕೀಯ ಪಕ್ಷಗಳಿಗೆ/ಕಛೇರಿಗಳಿಗೆ ನೀಡಲಾಗಿದೆಯೇ ; ನೀಡಿದ್ದರೆ, ಯಾವ ಸ್ಥಳದಲ್ಲಿ ಎಷ್ಟು ಜಮೀನನ್ನು ಯಾವ ರಾಜಕೀಯ ಪಕ್ಷಕ್ಕೆ ನೀಡಲಾಗಿದೆ ; ನೀಡಿರುವ ಜಮೀನಿನ ಮೌಲ್ಯವೆಷ್ಟು ; ಸದರಿ ಜಮೀನುಗಳನ್ನು ನೀಡಲು ಸರ್ಕಾರ ಅನುಸರಿಸಿರುವ ಕ್ರಮಗಳೇನು ; ಯಾವ ಇಲಾಖೆಯ ಪೂರ್ವಾನುಮತಿ ಪಡೆಯಲಾಗಿದೆ ; ಯಾವ ಉದ್ದೇಶಕ್ಕಾಗಿ ಸರ್ಕಾರಿ ಜಮೀನನ್ನು ರಾಜಕೀಯ ಪಕ್ಷಗಳಿಗೆ/ ಕಛೇರಿಗಳಿಗೆ ನೀಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸರ್ಕಾರದ ನಡವಳಿ ಆದೇಶ ಸಂಖ್ಯೆ : ಕಂಇ/೬೦/ಎಲ್.ಜಿ.ಟಿ/ ೨೦೨೩, ದಿನಾಂಕ : ೨೯–೧೦–೨೦೨೫ರ ಸಂಪೂರ್ಣ ಮಾಹಿತಿ ನೀಡುವುದು ;

(ಉ) ಕರ್ನಾಟಕ ಭೂ ಮಂಜೂರಾತಿ ನಿಯಮಗಳು, ೧೯೬೯ರ ನಿಯುವು ೨೨ಎ(೧)(i) ಅನ್ನು ಯಾವ ರೀತಿಯುಲ್ಲಿ ಸಡಿಲಿಸಲಾಗಿದೆ ; ನಿಯಮ ಮೊದಲು ಏನನ್ನು ಹೇಳುತ್ತಿತ್ತು ; ಪ್ರಸ್ತುತ ಯಾವ ರೀತಿಯಲ್ಲಿ ಸಡಿಲಿಸಿ ಜಮೀನುಗಳನ್ನು ನೀಡಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಊ) ಕರ್ನಾಟಕ ಭೂ ಮಂಜೂರಾತಿ ನಿಯಮಗಳು ೧೯೬೯ರ ನಿಯಮ ೨೨–ಎ(೨) ರನ್ವಯ ಭೂ ಮಂಜೂರಾತಿಯಲ್ಲಿ ಏನನ್ನು ಸೂಚಿಸುತ್ತದೆ ; ನಿಯಮದ ಸಂಪೂರ್ಣ ಮಾಹಿತಿ ನೀಡುವುದು ;

(ಋ) ಕರ್ನಾಟಕ ಭೂ ಮಂಜೂರಾತಿ ನಿಯಮಗಳು, ೧೯೬೯ರ ನಿಯಮ ೨೭ರಲ್ಲಿ ಅಡಕವಾಗಿರುವ ಅಂಶಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಶಿರಾ ತಾಲ್ಲೂಕಿನ ವಸತಿ ಯೋಜನೆಗೆ ಅನುದಾನ ಬಿಡುಗಡೆಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೮೬೫ (೯೨೧) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿರಾ ತಾಲ್ಲೂಕಿನಲ್ಲಿರುವ ವಸತಿ ರಹಿತರ ಮತ್ತು ನಿವೇಶನ ರಹಿತರ ಸಂಖ್ಯೆ ಎಷ್ಟು ; (ಗ್ರಾಮವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ವಸತಿ ಇಲಾಖೆಯಿಂದ ಶಿರಾ ತಾಲ್ಲೂಕಿಗೆ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ;

(ಇ) ಎಷ್ಟು ಮನೆಗಳ ನಿರ್ಮಾಣಕ್ಕೆ ಕಾರ್ಯಾದೇಶ ನೀಡಲಾಗಿದೆ ಮತ್ತು ಪ್ರಾರಂಭಿಸಲಾಗಿದೆ ;

(ಈ) ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಬಾಕಿಯಿರುವ ಅನುದಾನವೆಷ್ಟು ; (ವರ್ಷವಾರು ವಿವರ ನೀಡುವುದು)

(ಉ) ಬಾಕಿಯಿರುವ ಅನುದಾನವನ್ನು ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುವುದು ?

## ಪಹಣಿ ತಿದ್ದುಪಡಿ ಅನಗತ್ಯ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೮೬೬ (೯೨೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಪಹಣಿ ತಿದ್ದುಪಡಿಗಾಗಿ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಉಪ ವಿಭಾಗವಾರು ವಿವರ ನೀಡುವುದು)

(ಆ) ಆರ್.ಆರ್.ಟಿ. ತಿದ್ದುಪಡಿಗೆ ಸಕಾಲದಲ್ಲಿ ಎಷ್ಟು ದಿನಗಳನ್ನು ನಿಗದಿಪಡಿಸಲಾಗಿದೆ ;

(ಇ) ಪಹಣಿ ತಿದ್ದುಪಡಿಗಾಗಿ (ಆರ್.ಆರ್.ಟಿ) ಹೊಸದಾಗಿ ತಂತ್ರಾಂಶ ಅಭಿವೃದ್ಧಿ ಪಡಿಸಲಾಗಿದೆಯೇ ; ಇದರಿಂದ ಈ ಹಿಂದೆ ತಹಶೀಲ್ದಾರರಿಂದ ಬಂದ ಅರ್ಜಿಗಳನ್ನು ಅನುಮೋದಿಸದೆ ಪ್ರಸ್ತಾವನೆಗಳನ್ನು ಸಹ ಹಿಂತಿರುಗಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಹಿಂದೆ ಬಂದ ಪ್ರಸ್ತಾವನೆಗಳನ್ನು ಅನುಮೋದನೆ ಮಾಡದೆ ಇರಲು ಕಾರಣಗಳೇನು ;

(ಈ) ಪಹಣಿ ತಿದ್ದುಪಡಿಗೆ ಒಂದೇ (ಆನ್ ಲೈನ್) ಅರ್ಜಿಯಲ್ಲಿ 'ಅ' ಖರಾಬು ನಿಂದ 'ಬ' ಖರಾಬು ಬದಲಾವಣೆ ಮತ್ತು ಖರಾಬು ಸೇರಿ ಖಾತೆಯಾಗಿರುವುದನ್ನು ತಿದ್ದುಪಡಿ ಮಾಡಲು ಅವಕಾಶ ವಿದೆಯೇ ; ಇಲ್ಲದೆ ಇದ್ದಲ್ಲಿ, ಯಾವ ರೀತಿಯಲ್ಲಿ ಅರ್ಜಿ ಸಲ್ಲಿಸಬೇಕು, ಒಂದೇ ಬಾರಿಗೆ ಪಹಣಿಯಲ್ಲಿ ಎರಡು ತಿದ್ದುಪಡಿಗೆ ಅವಕಾಶವಿಲ್ಲವೇ ; ಇಲ್ಲದೇ ಇದ್ದಲ್ಲಿ, ಎರಡು ಬಾರಿಗೆ ಅರ್ಜಿ ಸಲ್ಲಿಸಿರುವುದರಿಂದ ರೈತರ ಮತ್ತು ಕಾರ್ಯಾಲಯದ ಸಮಯ ವ್ಯರ್ಥವಾಗುವುದಿಲ್ಲವೇ ಇದರ ಪರಿಹಾರಕ್ಕೆ ಸರ್ಕಾರದ ಕ್ರಮವೇನು ;

(ಉ) ಪಹಣಿ ತಿದ್ದುಪಡಿಗೆ ಅನಗತ್ಯ ವಿಳಂಬವಾಗುತ್ತಿದ್ದು ಸಕಾಲದಲ್ಲಿ ತಿದ್ದುಪಡಿ ಮಾಡದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮವೇನು ?

# ರಾಜ್ಯ ಹಾಗೂ ಬಾಗಲಕೋಟೆ ಜಿಲ್ಲೆಯಲ್ಲಿನ ಗೋಶಾಲೆಗಳ ನಿರ್ಮಾಣ ಹಾಗೂ ಗೋವುಗಳ ಮಾಹಿತಿ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೭ (೮೬೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಜಾನುವಾರು ಕ್ಷೇಮಾಭಿವೃದ್ಧಿ ಚಟುವಟಿಕೆಗಳ ಬಲವರ್ಧನೆಯ ಯೋಜನೆಯಡಿ ಪಿಂಜಾರಪೋಲ್ ಮತ್ತು ಇತರ ಗೋಶಾಲೆಗಳ ನೆರವು ಯೋಜನೆಯಡಿ ರಾಜ್ಯದಲ್ಲಿನ ನೋಂದಾಯಿತ ಗೋಶಾಲೆಗಳಿಗೆ, ಗೋಶಾಲೆಗಳಲ್ಲಿನ ಗೋವುಗಳ ಅಭಿವೃದ್ಧಿ (ಸಹಾಯಧನ, ಮೇವು ಅಭಿವೃದ್ಧಿ, ಸಾವಯವ ಗೊಬ್ಬರ ತಯಾರಿಕೆ ಘಟಕ ಹಾಗೂ ಜಾನುವಾರುಗಳ ಆರೋಗ್ಯ) ನಿರ್ವಹಣೆಗಾಗಿ ರಾಜ್ಯದಲ್ಲಿ ಉಪನಿರ್ದೇಶಕರು, ಪಶು ವೈದ್ಯಕೀಯ ಮತ್ತು ಪಶುಪಾಲನಾ ಇಲಾಖೆಯ ಕಛೇರಿಯಿಂದ ಕಳೆದ ೩ ವರ್ಷಗಳಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ ಅನುದಾನ ಹಾಗೂ ಬಿಡುಗಡೆ ಮಾಡಿದ ಅನುದಾನದ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ಬೇಡಿಕೆಯ ಅನುದಾನಕ್ಕೆ ತಕ್ಕಂತೆ ಅನುದಾನ ಬಿಡುಗಡೆ ಮಾಡದೇ ಇರುವುದರಿಂದ ಗೋಶಾಲೆಗಳ ನಿರ್ವಹಣೆ ಕಷ್ಟವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಈ ಎಲ್ಲಾ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಬಾಗಲಕೋಟೆ ಜಿಲ್ಲೆಯಲ್ಲಿ ಸರ್ಕಾರವು ಪ್ರಾರಂಭ ಮಾಡಿದ ಹಾಗೂ ಪ್ರಾರಂಭ ಮಾಡಲು ಉದ್ದೇಶಿಸಿದ ಗೋಶಾಲೆಗಳ ಸಂಖ್ಯೆ ಎಷ್ಟು; ಜಿಲ್ಲೆಯ ಹುನಗುಂದ ತಾಲ್ಲೂಕಿನ ಕೂಡಲಸಂಗಮ ಗ್ರಾಮದಲ್ಲಿನ ಗೋಶಾಲೆ ನಿರ್ಮಾಣದ ಪ್ರಗತಿಯ ವಿವರ ನೀಡುವುದು ;

(ಉ) ಜಿಲ್ಲೆಯಲ್ಲಿ ಗೋಶಾಲೆಗಳಲ್ಲಿರುವ ಗೋವುಗಳ ಸಂಖ್ಯೆ ಎಷ್ಟು ; ಸರ್ಕಾರಿ ಹಾಗೂ ಖಾಸಗಿ ಗೋಶಾಲೆವಾರು ಗೋವುಗಳ ಮಾಹಿತಿ ನೀಡುವುದು ?

## ಬಾಗಲಕೋಟೆ ಜಿಲ್ಲೆಯಲ್ಲಿ ೨೦೨೦-೨೧ ರಿಂದ ಇಲ್ಲಿಯವರೆಗೆ ರಾಷ್ಟ್ರೀಯ, ರಾಜ್ಯ, ಜಿಲ್ಲಾ ಹೆದ್ದಾರಿಗಳಲ್ಲಿ ನಡೆದ ರಸ್ತೆ ಅಪಘಾತಗಳ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೮ (೮೬೬) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯಲ್ಲಿ ೨೦೨೦-೨೧ ರಿಂದ ಇಲ್ಲಿಯವರೆಗೆ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಹೆದ್ದಾರಿಗಳಲ್ಲಿ ನಡೆದ ರಸ್ತೆ ಅಪಘಾತಗಳ ಸಂಖ್ಯೆ ಎಷ್ಟು ; ಈ ಅಪಘಾತಗಳಲ್ಲಿ ಮೃತಪಟ್ಟವರ ಸಂಖ್ಯೆ ಎಷ್ಟು ; ಗಾಯಗೊಂಡವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಅಪಘಾತ ಪ್ರಕರಣಗಳು ಕಡಿಮೆಯಾಗುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ; (ವಿವರ ನೀಡುವುದು)

(ಇ) ಅಪಘಾತಗಳನ್ನು ತಡೆಯುವ ನಿಟ್ಟಿನಲ್ಲಿ ಹೆದ್ದಾರಿಗಳ ಪಕ್ಕದಲ್ಲಿ AI ಒಳಗೊಂಡ ಸಿಸಿ ಕ್ಯಾಮೆರಾಗಳನ್ನು ಎಷ್ಟು ಸಂಖ್ಯೆಯಲ್ಲಿ ಅಳವಡಿಸಲಾಗಿದೆ ; ಯಾವ ಯಾವ ಸ್ಥಳಗಳಲ್ಲಿ ಅಳವಡಿಸಲಾಗಿದೆ ; (ವಿವರ ನೀಡುವುದು)

(ಈ) AI ಒಳಗೊಂಡ ಸಿ.ಸಿ. ಕ್ಯಾಮೆರಾಗಳನ್ನು ಅಳವಡಿಸದೆ ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಅಳವಡಿಸಲಾಗುವುದು ? (ಮಾಹಿತಿ ತಿಳಿಸುವುದು)

## ರಾಜ್ಯದಲ್ಲಿ ನಡೆಯುತ್ತಿರುವ ಪೌತಿ ಖಾತೆಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೯ (೮೫೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ಖಾತೆಗಳು ಖಾತೆಯಾಗದೆ ಮೃತರ ಹೆಸರಿನಲ್ಲಿಯೇ ಉಳಿದಿರುವ ಪಹಣಿಗಳು ಎಷ್ಟು ;

(ಆ) ಗ್ರಾಮ ಲೆಕ್ಕಾಧಿಕಾರಿಗಳಿಗೆ ಪ್ರತಿ ತಿಂಗಳುಗಳ ಪೌತಿ ಖಾತೆ ಮಾಡಲು ಟಾರ್ಗೆಟ್ ನೀಡಲಾಗಿದೆಯೇ ; ನೀಡಿದ್ದಲ್ಲಿ, ಗ್ರಾಮ ಲೆಕ್ಕಾಧಿಕಾರಿಗಳಿಗೆ ಮಹಜರ್ ಸಮಯದಲ್ಲಿ ಆಧಾರ್ ಓಟಿಪಿ ಬರದೆ ಗಂಟೆಗಟ್ಟಲೆ ಕಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವಂಶವೃಕ್ಷ, ಮರಣ ಪ್ರಮಾಣ ಪತ್ರವಿಲ್ಲದೆ ಪೌತಿ ಖಾತೆ ಮಾಡಲು ಸೂಚನೆ ನೀಡಲಾಗಿದೆಯೇ ; ಪೌತಿ ಖಾತೆ ಮಾಡುವ ಸಂದರ್ಭದಲ್ಲಿ ಮಹಜರ್ ವೇಳೆ ಅವರ ಮನೆಗೆ ಹೋದಾಗ ಎಲ್ಲಾ ಸದಸ್ಯರು ಸಿಗುವುದಿಲ್ಲ ಮತ್ತು ಓಟಿಪಿ ನೀಡಲು ನಿರಾಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಮೃತ ಖಾತೆದಾರರ ಕೆಲವು ವಾರಸುದಾರರು ೨೫ ವರ್ಷಗಳು ಅಥವಾ ಅದಕ್ಕೂ ಹೆಚ್ಚಾಗಿದ್ದ ಸಮಯದಲ್ಲಿ ಮದುವೆಯಾಗದೆ ಮರಣ ಹೊಂದಿದ್ದಲ್ಲಿ ಮರಣ ಪ್ರಮಾಣಪತ್ರ ಪಡೆಯಲು ಸಂಬಂಧಿಕರು ನಿರಾಕರಿಸಿ (ಅವಶ್ಯಕತೆ ಇರುವುದಿಲ್ಲ ಎಂದು ಭಾವಿಸಿ) ಸಂಬಂಧಿಕರು/ ವಾರಸುದಾರರ ಅಂತವರನ್ನು ಕೈಬಿಟ್ಟು ಪೌತಿ ಖಾತೆ ಮಾಡಲು ಕೇಳಿಕೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತವರನ್ನು ಕೈಬಿಟ್ಟು ಪೌತಿ ಖಾತೆ ಮಾಡಲು ಸರ್ಕಾರ ಚಿಂತಿಸಿದೆಯೇ ;

(ಉ) ಇ–ಪೌತಿ ಖಾತೆ ಅಂದೋಲನ ಹಮ್ಮಿಕೊಂಡಿದ್ದು, ಸದರಿ ಇ–ಪೌತಿ ಖಾತೆಗೆ ಸಂಬಂಧಿಸಿದಂತೆ ಸರ್ಕಾರ ಹೊಸ ಮಾರ್ಗಸೂಚಿ ಹೊರಡಿಸಲಾಗುವುದೇ ; (ಸಂಪೂರ್ಣ ಮಾಹಿತಿ ನೀಡುವುದು)

(ಊ) ಕುಳುವಾಡಿಕೆ ಇನಾಂ ಮಂಜೂರಿ ಜಮೀನುಗಳ ಪೌತಿ ವಾರಸುದಾರರನ್ನು ಖಚಿತಪಡಿಸಿಕೊಳ್ಳಲು ಸಾಧ್ಯವಾಗದೆ ಇರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಸರ್ಕಾರ ಯಾವ ನಿರ್ಣಯ ಕೈಗೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಪಶುವೈದ್ಯ ಆಸ್ಪತ್ರೆಯಲ್ಲಿ ಜೀವರಕ್ಷಕ ಔಷಧಿಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೦ (೮೫೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪಶುವೈದ್ಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಿಗಳ ಕೊರತೆ ಎದುರಾಗಿರುವುದಾಗಿ ಪತ್ರಿಕೆಗಳಲ್ಲಿ ವರದಿ ಪ್ರಸಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪಶುಸಂಗೋಪನೆ ಇಲಾಖೆಗೆ ಔಷಧಿ ಖರೀದಿ ಮಾಡಲು ಸರ್ಕಾರದಿಂದ ಅನುಮತಿ ನೀಡಲಾಗಿದೆಯೇ ;

(ಇ) ಪಶು ಔಷಧಿಗಳಿಗೆ ಇಡೀ ರಾಜ್ಯದಲ್ಲಿ ಏಕರೂಪ ಬೆಲೆ ನಿಗದಿಪಡಿಸುವ ಬಗ್ಗೆ ಸರ್ಕಾರದ ನಿಲುವೇನು ; ಪಶು ಆಸ್ಪತ್ರೆಗಳಲ್ಲಿ ಔಷಧಗಳ ಕೊರತೆಯಾಗದಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಲ್ಯಾಣ ಕರ್ನಾಟಕ ಭಾಗದ ರಸ್ತೆ ದುರಸ್ತಿಯ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೧ (೮೫೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಲ್ಯಾಣ ಕರ್ನಾಟಕ ಮತ್ತು ಉತ್ತರ ಕರ್ನಾಟಕಕ್ಕೆ ರಸ್ತೆ ದುರಸ್ತಿ ಕಾಮಗಾರಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಾಮಗಾರಿ ಪ್ರಾರಂಭಗೊಂಡಿದೆ ಅಥವಾ ಕ್ರಿಯಾ ಯೋಜನೆಯಲ್ಲಿ ಇದೆ ಎನ್ನುವ ಕಾಮಗಾರಿ ಎಷ್ಟು ಮತ್ತು ಅದಕ್ಕೆ ರಾಜ್ಯ ಸರ್ಕಾರದ ಅನುದಾನ ಮತ್ತು ಕೇಂದ್ರ ಸರ್ಕಾರದ ಅನುದಾನ ಎಷ್ಟು ;

(ಇ) ಕರ್ನಾಟಕದ ದಕ್ಷಿಣ ಭಾಗಕ್ಕೆ ಹೋಲಿಸಿದರೆ ಉತ್ತರ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕ ಗ್ರಾಮೀಣ ರಸ್ತೆಗಳು ಅತ್ಯಂತ ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದ ಪ್ರಾದೇಶಿಕ ಅಸಮತೋಲನಕ್ಕೆ ಕಾರಣವಾಗುವುದಿಲ್ಲವೇ ; ಈ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ರಸ್ತೆಗಳ ದುರಸ್ತಿ/ ನಿರ್ಮಾಣದ ಕುರಿತು ಸರ್ಕಾರ ಹಾಕಿಕೊಂಡಿರುವ ಯೋಜನೆಗಳು ಯಾವುವು ; ಯಾವ ಕಾಲಮಿತಿಯಲ್ಲಿ ಈ ರಸ್ತೆಗಳನ್ನು ದುರಸ್ತಿಗೊಳಿಸಲಾಗುವುದು ? (ವಿವರ ನೀಡುವುದು)

## ತೆರಿಗೆ ಉಳಿಸುವ ನಿಟ್ಟಿನಲ್ಲಿ ರಾಜ್ಯದಲ್ಲಿ ಬೇರೆ ರಾಜ್ಯ ನೋಂದಾಯಿತ ವಾಹನಗಳ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೨ (೮೫೫) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿ (ಆರ್.ಟಿ.ಓ) ಯಿಂದ ವಾಹನಗಳಿಗೆ ಪರವಾನಿಗೆ ಪಡೆದು, ಒಂದೆ ಅನುಮತಿ (Permit) ಪತ್ರದ ಆಧಾರದ ಮೇಲೆ ಹಲವಾರು ವಾಹನಗಳನ್ನು ಓಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀಯ ನಿಯಮ ಉಲ್ಲಂಘನೆಯಾದ ಪ್ರಕರಣಗಳೆಷ್ಟು ; (ಕಳೆದ ೩ ವರ್ಷಗಳ ಮಾಹಿತಿ ಒದಗಿಸುವುದು)

(ಇ) ಕಾನೂನು ಉಲ್ಲಂಘನೆಯ ಪ್ರಕರಣಗಳಲ್ಲಿ ಇತ್ಯರ್ಥವಾದ ಪ್ರಕರಣಗಳೆಷ್ಟು ; ಬಾಕಿ ಉಳಿದಿರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು) ಈ ತರಹದ ಕಾನೂನು ಉಲ್ಲಂಘನೆಯ ಪ್ರಕರಣಗಳ ಮೇಲೆ ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ;

(ಈ) ರಾಜ್ಯದಲ್ಲಿ ಐಷಾರಾಮಿ ಕಾರು ಮತ್ತು ಬಸ್ಸುಗಳಲ್ಲಿ ತೆರಿಗೆ ಉಳಿಸುವ ನಿಟ್ಟಿನಲ್ಲಿ ಬೇರೆ ರಾಜ್ಯದಲ್ಲಿ ನೋಂದಣಿ ಮಾಡಿ ನಮ್ಮ ರಾಜ್ಯದಲ್ಲಿ ಚಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಉ) ಸಾರಿಗೆ ಇಲಾಖೆಯ ನಿಯಮದ ಅನುಸಾರ ನೂತನ ವಾಹನ ಪಡೆದ ಎಷ್ಟು ದಿನದೊಳಗೆ ನೋಂದಣಿ ಮಾಡಿಸಬೇಕು ; ನೋಂದಣಿಯೇ ಆಗದೆ ತಾತ್ಕಾಲಿಕ ನೋಂದಣಿ ಮಾಡಿಸಿ ಅಥವಾ ನಕಲಿ ದಾಖಲೆ (ಆರ್.ಸಿ) ಮಾಡಿಸಿ ಚಲಾಯಿಸುತ್ತಿರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಪ್ರಕರಣಗಳಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಎಷ್ಟು ಪ್ರಕರಣ ದಾಖಲಾಗಿದೆ ಅಥವಾ ವಾಹನ ಜಪ್ತಿ ಮಾಡಲಾಗಿದೆ ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಭೂತನಹಳ್ಳಿ ಗ್ರಾಮದಲ್ಲಿ ಭೋವಿ ಜನಾಂಗದ ರೈತರಿಗೆ ಆಗುತ್ತಿರುವ ಅನ್ಯಾಯದ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೩ (೮೫೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆ, ಜಿಗಣಿ ಹೋಬಳಿ ಬನ್ನೇರುಘಟ್ಟ ಗ್ರಾಮ ಪಂಚಾಯಿತಿಯ ಭೂತನಹಳ್ಳಿ ಗ್ರಾಮದ ಸರ್ವೆ ನಂ. ೬೭ರಲ್ಲಿ ಸರ್ಕಾರಿ ಆದೇಶದ ಸಂಖ್ಯೆ ಜೆ ೪೧೬–ಎಫ್ ಟಿ–೨೭–೩೩–೩೫, ದಿನಾಂಕ : ೧೭–೦೩–೧೯೩೪ರ ಆಕಾರಬಂದ್ ಪ್ರಕಾರ ಒಟ್ಟು ವಿಸ್ತೀರ್ಣ ೫೪೯.೨೪ ಎಕರೆಯಲ್ಲಿ ೫೨೫ ಎಕರೆ ಭೂಮಿಯನ್ನು ಅರಣ್ಯ ಇಲಾಖೆಯು ಪಡೆದು ಸ್ವಾಧೀನದಲ್ಲಿ ಇರುತ್ತದೆ ಎಂದು ಅರಣ್ಯ ಇಲಾಖೆ ನಕ್ಷೆ ಸಹಿತ ಹಿಂಬರಹ ನೀಡಿದ್ದು ಉಳಿಕೆಯಾದ ಜಮೀನು ಎಷ್ಟು ; (ಅದರ ನಕ್ಷೆ ಮತ್ತು ಗಡಿರೇಖೆ ಸಹಿತ ಪೂರ್ಣ ಮಾಹಿತಿಯೊಂದಿಗೆ ನೀಡುವುದು)

(ಆ) ಅರಣ್ಯ ಇಲಾಖೆ ಒತ್ತುವರಿ ಹೊರತು ಪಡಿಸಿ ಉಳಿಕೆ ಜಾಗ ಜಂಟಿ ಮೋಜಣಿಯಾಗಿದ್ದು, ಸದರಿ ಗಡಿರೇಖೆ (ಡಿ–ಲೈನ್) ಜಮೀನು ಗೋಮಾಳ ಪ್ರದೇಶವಾಗಿದ್ದು ಅದು ಎಷ್ಟು ಜನರಿಗೆ ಭೂಮಿ ಹಂಚಿಕೆಯಾಗಿದೆ ; ಅದರ ಅಳತೆಯೊಂದಿಗೆ ಪೂರ್ಣ ಮಾಹಿತಿ ಮತ್ತು ಉಳಿಕೆ ಜಮೀನು ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಬೆಂಗಳೂರು ಜಿಲ್ಲೆ ವಿಶೇಷ ಜಿಲ್ಲಾಧಿಕಾರಿಗಳು ಭೂತನಹಳ್ಳಿ ಗ್ರಾಮದ ಸರ್ವೆ ನಂ. ೬೭ರಲ್ಲಿ ಕೆಲವರ ಜಮೀನುಗಳು ಮಾತ್ರ ಪಹಣಿ ತಿದ್ದುಪಡಿ ಮಾಡಿ ಕೇವಲ ಕೋರ್ಟ್ ಆದೇಶದಲ್ಲಿರುವವರು ಮಾತ್ರ ವ್ಯವಸಾಯ ಮಾಡುತ್ತಿದ್ದು ಕೋರ್ಟ್‌ಗೆ ಹೋಗದ ರೈತರಿಗೆ ವ್ಯವಸಾಯ ಮಾಡಲು ಕೊಡುತ್ತಿದ್ದು ಸರ್ಕಾರದ ಈ ತಪ್ಪಿನಿಂದ ಬಡ ಜನರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಬನ್ನೇರುಘಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬ್ಯಾಲಮರದ ದೊಡ್ಡಿಯಲ್ಲಿ ೧೯೮೦ ರಲ್ಲಿ ಸರ್ಕಾರದಿಂದ ಸ್ವಾತಂತ್ರ್ಯೋತ್ಸವದ ಪ್ರಯುಕ್ತ ಉಚಿತ ಮನೆ ನಿವೇಶನ ನೀಡಿ ಮೂಲಭೂತ ಸೌಕರ್ಯವಾದ ನೀರಿನ ಟ್ಯಾಂಕ್ ಮತ್ತು ರಸ್ತೆ ಡಾಂಬರೀಕರಣ ಮಾಡಿಸಲು ಮತ್ತು ಅನಾರೋಗ್ಯ ಪೀಡಿತ, ವಯಸ್ಸಾದ ಮತ್ತು ಕರೋನಾ ರೋಗ ಕಾರಣಗಳಿಂದ ಅನೇಕ ವರ್ಷಗಳಿಂದ ಬೇಸಾಯ ಮಾಡದೆ ಇರುವವರಿಗೆ ಅದೇ ಕಾರಣ ನೀಡಿ ಬೇಸಾಯ ಮಾಡುವುದಕ್ಕೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಮಾನ್ಯ ಉಚ್ಛ ನ್ಯಾಯಾಲಯ ಆದೇಶ ದಾವೆ ಸಂಖ್ಯೆ : BHR.WP NO. ೯೫೭೩/೧೯೯೯, WA/೧೪೫೩-೬೪/೨೦೦೫. KLR ೨೦೧೩-೧೪ ರಂತೆ ಪ್ಯಾರಾ ಸಂಖ್ಯೆ ೧೭ ಹಾನೋ ಮತ್ತು ೩೪ರಂತೆ ಅರಣ್ಯ ಇಲಾಖೆ ಕಾಯ್ದೆ ೨೭-೦೨-೧೯೬೪ ರಿಂದ ಜಾರಿಗೆ ಬಂದಿದ್ದು ಅದಕ್ಕಿಂತ ಹಿಂದೆ ಸರ್ಕಾರದಿಂದ ಸಾಗುವಳಿ ಭೂಮಿ ಮಂಜೂರಾತಿ ಪಡೆದವರಿಗೆ ಅರಣ್ಯ ಇಲಾಖೆ ಪರಿಗಣಿಸಲು ಸೂಚಿಸಿದ್ದರು ಎಂದು ಆದೇಶವಿದ್ದು ಅದನ್ನು ಆನೇಕಲ್ ತಹಸಿಲ್ದಾರರು ಎಲ್.ಎನ್.ಡಿ/ಜೆ/ಸಿಆರ್/೨೭೮/೧೬-೧೭ ದಿನಾಂಕ : ೨೭-೦೬-೨೦೧೬ ರಂದು ಸರ್ಕಾರದ ಗಮನಕ್ಕೆ ತಂದರೂ ಅಧಿಕಾರಿಗಳೂ ಅರಣ್ಯ

ಮತ್ತು ಕಂದಾಯ ಇಲಾಖೆಯ ಸಮನ್ವಯ ಕೊರತೆಯಿಂದ ಬಡ ಪರಿಶಿಷ್ಟ ಜಾತಿ ಭೋವಿ ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ಸಂಪೂರ್ಣ ಮಾಹಿತಿ ದಾಖಲಾತಿಯೊಂದಿಗೆ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ P.W.D ಸೇತುವೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೭೪ (೮೭೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಲೋಕೋಪಯೋಗಿ ಇಲಾಖೆಯಡಿ ಬರುವಂತಹ ಸೇತುವೆಗಳ ಸಂಖ್ಯೆ ಎಷ್ಟು ; ಸದರಿ ಸೇತುವೆಗಳಲ್ಲಿ ಶಿಥಿಲಾವಸ್ಥೆಯಲ್ಲಿರುವ ಸೇತುವೆಗಳನ್ನು ಗುರುತಿಸಲಾಗಿರುವುದರ ಮಾಹಿತಿ ಒದಗಿಸುವುದು ;

(ಆ) ಶಿಥಿಲಾವಸ್ಥೆಯಲ್ಲಿರುವ ಸೇತುವೆಗಳ ಪೈಕಿ ದುರಸ್ತಿ ಕಾರ್ಯ ಕೈಗೊಳ್ಳಬಹುದಾದ ಮತ್ತು ದುರಸ್ತಿ ಕಾರ್ಯ ಕೈಗೊಳ್ಳಲಾಗದ ಸೇತುವೆಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ನೂತನವಾಗಿ ನಿರ್ಮಾಣಕ್ಕೆ ಆಯ್ಕೆ ಮಾಡಿರುವ ಸೇತುವೆಗಳ ಸಂಖ್ಯೆ ಹಾಗೂ ಬಿಡುಗಡೆ ಮಾಡಿರುವ ಅನುದಾನ ಕಾಮಗಾರಿಯ ಪ್ರಸ್ತುತ ವಸ್ತುಸ್ಥಿತಿಯ ಬಗ್ಗೆ ವಿವರ ನೀಡುವುದು ;

(ಇ) ಕಳೆದ ೩ ವರ್ಷಗಳಲ್ಲಿ ಸದರಿ ಜಿಲ್ಲೆಗಳಲ್ಲಿ ಎಷ್ಟು ನೂತನ ಸೇತುವೆಗಳ ಕಾಮಗಾರಿ ಪೂರ್ಣಗೊಂಡಿವೆ ?

# ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ನಿರ್ಮಿಸಿರುವ KHB ಬಡಾವಣೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೭೫ (೮೮೦) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೧೦ ವರ್ಷಗಳಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ಅಭಿವೃದ್ಧಿಪಡಿಸಲಾಗಿರುವ ವಸತಿ ಬಡಾವಣೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ಮೇಲ್ಕಂಡ ಜಿಲ್ಲೆಗಳಲ್ಲಿ ಅಭಿವೃದ್ಧಿ ಮಾಡಿರುವ ವಸತಿ ಬಡಾವಣೆಗಳಲ್ಲಿ ಎಷ್ಟು ನಿವೇಶನಗಳನ್ನು ಸಾರ್ವಜನಿಕರಿಗೆ ಹಂಚಿಕೆ ಮಾಡಲಾಗಿದೆ ; ಹಂಚಿಕೆ ಮಾಡಲು ಬಾಕಿ ಇರುವ ನಿವೇಶನಗಳ ಸಂಖ್ಯೆ ಎಷ್ಟು ; ಹಂಚಿಕೆಗೆ ಬಾಕಿ ಉಳಿದಿರಲು ಕಾರಣವೇನು ;

(ಇ) ನಿವೇಶನ ಹಂಚಿಕೆಗೆ ನಿಗದಿ ಮಾಡಿರುವ ಮಾನದಂಡಗಳೇನು ; ದರವೆಷ್ಟು ಹಾಗೂ ಈಗಾಗಲೇ ಹಂಚಿಕೆ ಮಾಡಿರುವ ಬಡಾವಣೆಗಳಲ್ಲಿ ಎಲ್ಲಾ ಮೂಲ ಸೌಕರ್ಯಗಳನ್ನು ರಸ್ತೆ, ಪಾರ್ಕ್, ಸಿಎ ನಿವೇಶನಗಳನ್ನು ಅಭಿವೃದ್ಧಿಪಡಿಸಿ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರಿಸಲಾಗಿದೆಯೇ ? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0–176/500 ಪ್ರತಿಗಳು/25–02–2026